VOLUME: 16 | 03 JULY 2026 | ಶುಕ್ರವಾರ | RS: 2 | PAGE: 06 | ISSUE: 142 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಸೂಪರ್ ಸ್ಟಾರ್ ರಜನಿಕಾಂತ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ಸಿಕ್ಕಿದೆ. ನೆಲ್ಸನ್ ನಿರ್ದೇಶನದ 'ಜೈಲರ್- 2' ಸಿನಿಮಾ ರಿಲೀಸ್‌ಗೆ ಕೊನೆಗೂ ದಿನಾಂಕ ನಿಗದಿಯಾಗಿದೆ. ಆಗಸ್ಟ್ 15ರ ಸ್ವಾತಂತ್ರ್ಯ ದಿನಾಚರಣೆ ಬದಲು ದಸರಾ ಸಂಭ್ರಮದಲ್ಲಿ ಮುತ್ತುವೇಲ್ ಪಾಂಡಿಯನ್ ಆರ್ಭಟ ನಡೆಯಲಿದೆ. 3 ವರ್ಷಗಳ ಹಿಂದೆ ತೆರೆ ಕಂಡಿದ್ದ 'ಜೈಲರ್' ಸಿನಿಮಾ 600 ಕೋಟಿಗೂ ಹೆಚ್ಚು ಹಣ ಬಾಚಿಕೊಂಡು ಬಾಕ್ಸ್ ಆಫೀಸ್‌ನಲ್ಲಿ ಧೂಳೆಬ್ಬಿಸಿತ್ತು.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಕಲ್ಲುಕ್ವಾರಿ ದುರಂತಕ್ಕೆ ಏಳು ಬಲಿ..!

ಬೆಂಗಳೂರು/ರಾಮನಗರ: ಬೆಂಗಳೂರು ದಕ್ಷಿಣ ತಾಲೂಕಿನ ಮಾದಾಪಟ್ಟಣ ಸಮೀಪದ ಕಲ್ಲು ಕ್ವಾರಿಯಲ್ಲಿ ಇಂದು ಗುರುವಾರ ಸಂಭವಿಸಿದ ಭೀಕರ ದುರಂತದಲ್ಲಿ ಏಳು ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕಾವೇರಿ ಕಂಪನಿಗೆ ಸೇರಿದ ಕಲ್ಲು ಕ್ವಾರಿಯಲ್ಲಿ ಕೆಲಸ ನಡೆಯುತ್ತಿದ್ದ ವೇಳೆ ಬೃಹತ್ ಬಂಡೆ ಕುಸಿದು ಕಾರ್ಮಿಕರ ಮೇಲೆ ಬಿದ್ದ ಪರಿಣಾಮ ಈ ಹೃದಯವಿದ್ರಾವಕ ಘಟನೆ ಸಂಭವಿಸಿದೆ.

ಮಾಹಿತಿಯ ಪ್ರಕಾರ, ಹೊಸ ಕ್ರಷರ್ ಘಟಕ ಸ್ಥಾಪನೆಗೆ ಸಂಬಂಧಿಸಿದಂತೆ ಕ್ವಾರಿಯ ಸುಮಾರು 100 ಅಡಿ ಎತ್ತರದ ಭಾಗದಲ್ಲಿ ಹಿಟಾಚಿ ಯಂತ್ರದ ಮೂಲಕ ಸ್ವಚ್ಛತಾ ಕಾರ್ಯ ನಡೆಯುತ್ತಿತ್ತು. ಇದೇ ಸಮಯದಲ್ಲಿ ಕೆಳಭಾಗದಲ್ಲಿ ಹಲವು



ಕಾರ್ಮಿಕರು ಕಲ್ಲು ಒಡೆಯುವ ಹಾಗೂ ಇತರೆ ಕೆಲಸಗಳಲ್ಲಿ ನಿರತರಾಗಿದ್ದರು. ಮೇಲ್ಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹಿಟಾಚಿ ಚಾಲಕ, ಕೆಳಗೆ ಕಾರ್ಮಿಕರು ಕೆಲಸ ಮಾಡುತ್ತಿರುವುದನ್ನು ಗಮನಿಸದೆ ಬೃಹತ್ ಕಲ್ಲಿನ ಬಂಡೆಗಳನ್ನು ಕೆಳಕ್ಕೆ ತಳ್ಳಿದ ಪರಿಣಾಮ ಅವು ನೇರವಾಗಿ ಕಾರ್ಮಿಕರ ಮೇಲೆ ಉರುಳಿ ಬಿದ್ದಿವೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಬಂಡೆಗಳ ಭಾರೀ ಹೊಡೆತಕ್ಕೆ ಏಳು ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಹಲವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣವೇ ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚುವ ಸಾಧ್ಯತೆಯಿದೆ ಎಂಬ ಆತಂಕ ವ್ಯಕ್ತವಾಗಿದೆ.

ದುರಂತ ಸಂಭವಿಸಿದ ತಕ್ಷಣ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಸ್ಥಳೀಯರು ಹಾಗೂ ಇತರ ಕಾರ್ಮಿಕರು ರಕ್ಷಣಾ ಕಾರ್ಯಾಚರಣೆಗೆ ಮುಂದಾದರು. ಮಾಹಿತಿ ತಿಳಿಯುತ್ತಿದ್ದಂತೆ ತಾವರೆಕೆರೆ ಪೊಲೀಸರು, ಅಗ್ನಿಶಾಮಕ ಮತ್ತು ತುರ್ತು ಸೇವಾ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯ ಕೈಗೊಂಡರು. ಮೃತದೇಹಗಳನ್ನು ಹೊರತೆಗೆದು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ.

ಮೃತ ಕಾರ್ಮಿಕರು ಬಿಹಾರ ಮೂಲದ ವಲಸೆ ಕಾರ್ಮಿಕರಾಗಿದ್ದು, ಜೀವನೋಪಾಯಕ್ಕಾಗಿ ಕರ್ನಾಟಕಕ್ಕೆ ಬಂದು ಕ್ವಾರಿಯಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿದುಬಂದಿದೆ. ಅವರ ಗುರುತು ಪತ್ತೆ ಹಾಗೂ ಕುಟುಂಬ ಸದಸ್ಯರಿಗೆ ಮಾಹಿತಿ ನೀಡುವ ಕಾರ್ಯ ನಡೆಯುತ್ತಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ ಸುರಕ್ಷತಾ ನಿಯಮಗಳನ್ನು ಸಮರ್ಪಕವಾಗಿ ಪಾಲಿಸದಿರುವುದು ಹಾಗೂ ಮೇಲ್ಭಾಗ ಮತ್ತು ಕೆಳಭಾಗದಲ್ಲಿ ಏಕಕಾಲದಲ್ಲಿ ಕೆಲಸ ನಡೆಸಿರುವ ನಿರ್ಲಕ್ಷ್ಯವೇ ಈ ದುರಂತಕ್ಕೆ ಕಾರಣವಾಗಿರಬಹುದು ಎಂಬ ಅನುಮಾನ ವ್ಯಕ್ತವಾಗಿದೆ. ಘಟನೆಗೆ ಸಂಬಂಧಿಸಿದಂತೆ ತಾವರೆಕೆರೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಕ್ವಾರಿ ನಿರ್ವಹಣೆ, ಗುತ್ತಿಗೆದಾರರು ಹಾಗೂ ಹಿಟಾಚಿ ಚಾಲಕರ ಪಾತ್ರದ ಕುರಿತು ತನಿಖೆ ಆರಂಭಿಸಿದ್ದಾರೆ.

ರಾಜಧಾನಿಯ ಸಮೀಪದಲ್ಲೇ ಸಂಭವಿಸಿರುವ ಈ ಭೀಕರ ದುರಂತ ಮತ್ತೊಮ್ಮೆ ಕಲ್ಲು ಕ್ವಾರಿಗಳಲ್ಲಿನ ಸುರಕ್ಷತಾ ಕ್ರಮಗಳ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದ್ದು, ಕಾರ್ಮಿಕರ ಜೀವ ರಕ್ಷಣೆಗೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸುವ ಅಗತ್ಯವನ್ನು ಒತ್ತಿ ಹೇಳಿದೆ.

## ಪಕ್ಷ ಬಲವರ್ಧನೆಗೆ ಆದ್ಯತೆ: ಎಚ್‌ಡಿಕೆ

ಬೆಂಗಳೂರು: ಜೆಡಿಎಸ್ ರಾಜ್ಯಾಧ್ಯಕ್ಷರೂ ಆಗಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಪಕ್ಷದ ಸಂಘಟನೆ ಬಲವರ್ಧನೆ, ನೂತನ ಪದಾಧಿಕಾರಿಗಳ ನೇಮಕ ಹಾಗೂ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಕೋಲಾರ, ಚಿಕ್ಕಬಳ್ಳಾಪುರ, ನೆಲಮಂಗಲ ಮತ್ತು ಮಧುಗಿರಿ ವಿಧಾನಸಭಾ ಕ್ಷೇತ್ರಗಳ ಮುಖಂಡರೊಂದಿಗೆ ವಿಸ್ತೃತ ಸಮಾಲೋಚನೆ ನಡೆಸಿದರು.

ಜಿಲ್ಲಾಧ್ಯಕ್ಷರು, ಶಾಸಕರು, ಮಾಜಿ ಶಾಸಕರು, ತಾಲೂಕು ಘಟಕಗಳ ಅಧ್ಯಕ್ಷರು ಸೇರಿದಂತೆ ಪ್ರಮುಖ ಮುಖಂಡರೊಂದಿಗೆ ಸಭೆ ನಡೆಸಿದ ಕುಮಾರಸ್ವಾಮಿ, "ಪಕ್ಷದಲ್ಲಿ ಕಾರ್ಯಕರ್ತರೇ ಮೊದಲ ಆದ್ಯತೆ" ಎಂಬ ಸ್ಪಷ್ಟ ಸಂದೇಶ ನೀಡಿ, ಮುಂದಿನ ಎರಡು ವರ್ಷಗಳಲ್ಲಿ ಪಕ್ಷವನ್ನು ತಳಮಟ್ಟದಿಂದ ಬಲಪಡಿಸುವಂತೆ ಸೂಚಿಸಿದರು.

ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳು ಜೆಡಿಎಸ್‌ಗೆ ಒಮ್ಮೆ ಭದ್ರ ನೆಲೆಗಳಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಸಂಘಟನೆ ದುರ್ಬಲವಾಗಿದೆ ಎಂಬ ಬಗ್ಗೆ ಕಾರ್ಯಕರ್ತರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ. ಜಿಲ್ಲೆಗಳಲ್ಲಿ ಶಾಸಕರು, ಸಂಸದರು ಹಾಗೂ ಹಿರಿಯ ಮುಖಂಡರಿದ್ದರೂ ಸಂಘಟನೆ ಏಕೆ ಬಲಗೊಳ್ಳುತ್ತಿಲ್ಲ ಎಂದು ಅವರು ಪ್ರಶ್ನಿಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದು, ಜನರ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರ ಹೋರಾಟ ನಡೆಸಬೇಕು. ಯುವಜನರನ್ನು ಹೆಚ್ಚಿನ ಸಂಖ್ಯೆಯಲ್ಲಿ ಪಕ್ಷಕ್ಕೆ ಸೇರ್ಪಡೆಗೊಳಿಸಬೇಕು. ಮುಂದಿನ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಎಲ್ಲ ಮುಖಂಡರು ಈಗಿನಿಂದಲೇ ಸಕ್ರಿಯವಾಗಿ ಕೆಲಸ ಆರಂಭಿಸಬೇಕು ಎಂದು ಅವರು ಸೂಚಿಸಿದರು.

ಜಿಲ್ಲೆ ಹಾಗೂ ತಾಲೂಕು ಮಟ್ಟದ ಪದಾಧಿಕಾರಿಗಳ ನೇಮಕವನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದ ಕುಮಾರಸ್ವಾಮಿ, ಕಾರ್ಯಕರ್ತರ ವಿಶ್ವಾಸ ಗಳಿಸಿ ಹಳ್ಳಿ ಹಳ್ಳಿಗೂ ಪಕ್ಷದ ಸಂಘಟನೆಯನ್ನು ವಿಸ್ತರಿಸುವಂತೆ ಮುಖಂಡರಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆ ಕುರಿತೂ ಚರ್ಚೆ ನಡೆಯಿತು. ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಬಗ್ಗೆ ಭಯದ ವಾತಾವರಣ ಸೃಷ್ಟಿಸಿ ಪ್ರಕ್ರಿಯೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂಬ ಆರೋಪ ಮಾಡಿದ ಅವರು, ಕಾರ್ಯಕರ್ತರು ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯನ್ನು ಎಚ್ಚರಿಕೆಯಿಂದ ಗಮನಿಸಬೇಕು ಎಂದು ಹೇಳಿದರು.

ಕೋಲಾರ ಸಭೆಯಲ್ಲಿ ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಜಿಲ್ಲಾಧ್ಯಕ್ಷ ವೆಂಕಟಶಿವಾರೆಡ್ಡಿ, ಸಂಸದ ಮಲ್ಲೇಶ್ ಬಾಬು, ಶಾಸಕ ಮೇಲೂರು ರವಿ, ಮಾಜಿ ಶಾಸಕರಾದ ತಿಪ್ಪೇಸ್ವಾಮಿ, ಚೌಡರೆಡ್ಡಿ ತೂಪಲ್ಲಿ, ಇಂಚರ ಗೋವಿಂದರಾಜು, ಮಹಿಳಾ ಘಟಕದ ಅಧ್ಯಕ್ಷೆ ರಶ್ಮಿ ರಾಮೇಗೌಡ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.



ಮಾಜಿ ಸಚಿವ ದಿವಂಗತ ಡಿ. ಸುಧಾಕರ್ ಅವರ ಪುತ್ರ ಸುಹಾಸ್ ಸುಧಾಕರ್ ಅವರು ಹಿರಿಯೂರು ಕ್ಷೇತ್ರದ ರೈತ ಬಾಂಧವರು ಹಾಗೂ ಸಾರ್ವಜನಿಕರೊಂದಿಗೆ ನನ್ನನ್ನು ಭೇಟಿಯಾಗಿ, ಹಿರಿಯೂರು ತಾಲ್ಲೂಕಿನ ಐಮಂಗಲ ಹೋಬಳಿಯ ಕೆರೆಗಳಿಗೆ ನೀರು ತುಂಬಿಸುವ ಹಾಗೂ ಹನಿ ನೀರಾವರಿ ಯೋಜನೆ ಕಾಮಗಾರಿಗಳಿಗೆ ಚಾಲನೆ ನೀಡುವ ಬಗ್ಗೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

## ಭಾರತ-ಜಪಾನ್ ನಡುವೆ ಮಹತ್ವದ ಒಪ್ಪಂದ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಜಪಾನ್ ಪ್ರಧಾನಿ ಸನಾಯೆ ತಕೈಚಿ ಅವರೊಂದಿಗೆ 16ನೇ ಭಾರತ-ಜಪಾನ್ ವಾರ್ಷಿಕ ಶೃಂಗಸಭೆಯ ಅಂಗವಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳು ವಿಶೇಷ ಕಾರ್ಯತಂತ್ರ ಮತ್ತು ಜಾಗತಿಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ 120ಕ್ಕೂ ಹೆಚ್ಚು ಒಪ್ಪಂದಗಳಿಗೆ ಸಹಿ ಹಾಕಿದವು.

ಜಪಾನ್‌ನ ಮೊದಲ ಮಹಿಳಾ ಪ್ರಧಾನಿಯಾಗಿ ಭಾರತಕ್ಕೆ ಮೊದಲ ಅಧಿಕೃತ ಭೇಟಿ ನೀಡಿದ ಸನಾಯೆ ತಕೈಚಿ ಅವರನ್ನು ಪ್ರಧಾನಿ ಮೋದಿ ಆತ್ಮೀಯವಾಗಿ ಸ್ವಾಗತಿಸಿದರು. ಬಳಿಕ ನಡೆದ ಮಾತುಕತೆಯಲ್ಲಿ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ (ಎಐ), ರಕ್ಷಣೆ, ಇಂಧನ, ಆರ್ಥಿಕ ಭದ್ರತೆ ಹಾಗೂ ಬಂಡವಾಳ ಹೂಡಿಕೆ ಸೇರಿದಂತೆ ಹಲವು ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರ ವಿಸ್ತರಿಸಲು ಉಭಯ ನಾಯಕರು ಒಪ್ಪಿಗೆ ಸೂಚಿಸಿದರು.

ಈ ಒಪ್ಪಂದಗಳ ಮೂಲಕ ಭಾರತಕ್ಕೆ ಸುಮಾರು 10 ಟ್ರಿಲಿಯನ್ ಯೆನ್ (ಸುಮಾರು 5.92 ಲಕ್ಷ ಕೋಟಿ) ಜಪಾನಿನ ಹೂಡಿಕೆಯನ್ನು ಆಕರ್ಷಿಸುವ ಗುರಿ ಹೊಂದಲಾಗಿದೆ. ಜೊತೆಗೆ ಸುಮಾರು 10 ಶತಕೋಟಿ ಡಾಲರ್ (ಸುಮಾರು ರೂ.95,330 ಕೋಟಿ) ಮೌಲ್ಯದ ಹೊಸ ಹೂಡಿಕೆ ಯೋಜನೆಗಳಿಗೆ ವೇಗ ಸಿಗುವ ನಿರೀಕ್ಷೆಯಿದೆ. ಹಣಕಾಸು ಸೇವಾ ಸಂಸ್ಥೆಗಳ ನಡುವಿನ ಹೊಸ ಒಪ್ಪಂದದಿಂದ ಬಂಡವಾಳ ಹರಿವು ಮತ್ತಷ್ಟು ಸುಗಮವಾಗಲಿದೆ ಎಂದು ತಿಳಿಸಲಾಯಿತು.



ಬೆಂಗಳೂರು ನಗರದ ಬನ್ನೇರುಘಟ್ಟದಲ್ಲಿರುವ ಬಿಜಿಎಸ್ ನ್ಯಾಷನಲ್ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗ ಳಿಗಾಗಿ ನೂತನವಾಗಿ ನಿರ್ಮಿಸಲಾದ 'ಬಿಜಿಎಸ್ ಅಕ್ವಾಟಿಕ್ ಸೆಂಟರ್' ಈಜುಕೊಳವನ್ನು ಬಿಜಿಎಸ್ ಮತ್ತು ಎಸ್‌ಜೆಬಿ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರಾದ ಪರಮ ಪೂಜ್ಯ ಶ್ರೀ ಶ್ರೀ ಡಾ. ಪ್ರಕಾಶನಾಥ ಸ್ವಾಮೀಜಿ ಗಳು ದಿವ್ಯಸಾನಿಧ್ಯದಲ್ಲಿ ಉದ್ಘಾಟಿಸಿದರು.

## ವಿಬಿಜಿ ರಾಮ್ ಜಿ ಯೋಜನೆಗೆ ಆದೇಶ

ಬೆಂಗಳೂರು: ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ (ಮನ್ರೇಗಾ) ಪರಿಷ್ಕೃತ ರೂಪವಾದ ವಿಬಿಜಿ ರಾಮ್ ಜಿ ಯೋಜನೆಯನ್ನು ರಾಜ್ಯ ಸರ್ಕಾರ ಆಕ್ಷೇಪಣೆಗಳ ನಡುವೆಯೇ ಜಾರಿಗೆ ತರಲು ನಿರ್ಧರಿಸಿದ್ದು, ಈ ಸಂಬಂಧದ ಅಧಿಸೂಚನೆ ಇಂದು ಹೊರಬೀಳಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟ ಸಭೆಯಲ್ಲಿ ಯೋಜನೆಗೆ ರಾಜ್ಯದ ಪಾಲಿನ ಅನುದಾನ ಕುರಿತು ಚರ್ಚೆ ನಡೆದಿದ್ದು, ಇದರಿಂದ ರಾಜ್ಯದ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬೀಳಲಿದ್ದರೂ ಬಡವರು, ದಲಿತರು, ರೈತರು, ಮಹಿಳೆಯರು ಹಾಗೂ ವಂಚಿತ ವರ್ಗಗಳ ಹಿತದೃಷ್ಟಿಯಿಂದ ಯೋಜನೆ ಜಾರಿಗೆ ಸರ್ಕಾರ ತೀರ್ಮಾನಿಸಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಹೊಸ ನಿಯಮದಿಂದ ರಾಜ್ಯದ ಮೇಲಿನ ಆರ್ಥಿಕ ಹೊರೆ ಸುಮಾರು ಆರು ಪಟ್ಟು ಹೆಚ್ಚಾಗಲಿದೆ ಎಂದು ಖಂಡ್ರೆ ತಿಳಿಸಿದರು.

ಈ ಹಿಂದೆ 20 ವರ್ಷಗಳಿಂದ ಜಾರಿಯಲ್ಲಿದ್ದ ಮನ್ರೇಗಾ ಯೋಜನೆಯಲ್ಲಿ ಕೇಂದ್ರ ಮತ್ತು ರಾಜ್ಯದ ವೆಚ್ಚದ ಅನುಪಾತ 90:10 ಆಗಿತ್ತು. ಒಟ್ಟು ಸುಮಾರು 61 ಸಾವಿರ ಕೋಟಿ ರೂ. ವೆಚ್ಚದಲ್ಲಿ ಕೇಂದ್ರ ಸರ್ಕಾರ 56 ಸಾವಿರ ಕೋಟಿ ರೂ.ಗೂ ಅಧಿಕ ಅನುದಾನ ನೀಡಿದ್ದರೆ, ರಾಜ್ಯ ಸರ್ಕಾರದ ಪಾಲು ಕೇವಲ 4,800 ಕೋಟಿ ರೂ. ಆಗಿತ್ತು ಎಂದು ಅವರು ವಿವರಿಸಿದರು.

ಆದರೆ ಹೊಸ ವಿಬಿಜಿ ರಾಮ್ ಜಿ ಯೋಜನೆಯಡಿ ಕೇಂದ್ರ ಸರ್ಕಾರ ರಾಜ್ಯಕ್ಕೆ 5,709 ಕೋಟಿ ರೂ. ಅನುದಾನ ನಿಗದಿಪಡಿಸಿದ್ದು, ರಾಜ್ಯ ಸರ್ಕಾರವೇ ಒಂದೇ ವರ್ಷದಲ್ಲಿ 3,806 ಕೋಟಿ ರೂ. ಭರಿಸಬೇಕಾಗಿದೆ. ಈ ಕಾರಣದಿಂದ ಹಿಂದಿನ 90:10 ವೆಚ್ಚ ಹಂಚಿಕೆ ಮಾದರಿಯನ್ನೇ ಮುಂದುವರಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗಿದೆ ಎಂದು ಹೇಳಿದರು.

ಇದರ ಜೊತೆಗೆ, ಸುಗ್ಗಿ ಅವಧಿಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರ ಯೋಜನೆಯಲ್ಲಿ 60 ದಿನಗಳ ವಿರಾಮ ನೀಡಿದೆ. ಜುಲೈ 1ರಿಂದ ಯೋಜನೆ ಜಾರಿಯಾಗಿದ್ದು, ಈ ವಿರಾಮದ ಬಳಿಕ ಪರಿಣಾಮಕಾರಿ ಅನುಷ್ಠಾನಕ್ಕೆ ಕೇವಲ ಒಂಬತ್ತು ತಿಂಗಳ ಅವಧಿ ಮಾತ್ರ ಉಳಿಯುತ್ತದೆ. ಈ ಅವಧಿಯಲ್ಲಿ ರಾಜ್ಯವು ತನ್ನ ಶೇ.40ರಷ್ಟು ಪಾಲಿನ ವೆಚ್ಚ ಭರಿಸಲು ವಿಫಲವಾದರೆ ಕೇಂದ್ರದ ಅನುದಾನವೂ ದೊರೆಯುವುದಿಲ್ಲ. ಇದು ಯೋಜನೆಯ ಮೂಲ ಉದ್ದೇಶವನ್ನೇ ಹಾಳು ಮಾಡುತ್ತದೆ ಎಂದು ಖಂಡ್ರೆ ಆತಂಕ ವ್ಯಕ್ತಪಡಿಸಿದರು. ಇತ್ತೀಚೆಗೆ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿಯೂ ಈ ಎಲ್ಲ ವಿಚಾರಗಳನ್ನು ಪ್ರಸ್ತಾಪಿಸಲಾಗಿದೆ. ಜೊತೆಗೆ, ಪ್ರತಿ ರಾಜ್ಯವೂ ತನ್ನ ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಕಾಮಗಾರಿಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ನೀಡಬೇಕು ಎಂಬುದು ಕರ್ನಾಟಕದ ನಿಲುವಾಗಿದೆ ಎಂದು ಸಚಿವರು ತಿಳಿಸಿದರು.

## ಬರಗಾಲ: ಎಚ್ಚರಿಕೆಯಿಂದ ಬಿತ್ತನೆ ಮಾಡುವಂತೆ ರೈತರಿಗೆ ಸಲಹೆ

ಬೆಂಗಳೂರು: ದೇಶದಲ್ಲಿ ಭೀಕರ ಬರ ಪರಿಸ್ಥಿತಿ ಎದುರಾಗುವ ಮುನ್ಸೂಚನೆ ಇರುವ ಹಿನ್ನೆಲೆಯಲ್ಲಿ ರೈತರು ಅಣೆಕಟ್ಟು ನೀರನ್ನು ಮಾತ್ರ ಅವಲಂಬಿಸಿ ಬೆಳೆ ಬೆಳೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆಯ ಬಳಿಕ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಬಹುತೇಕ ಪ್ರಮುಖ ಅಣೆಕಟ್ಟುಗಳಲ್ಲಿ ಒಳಹರಿವು ಶೂನ್ಯಕ್ಕೆ ತಲುಪಿದ್ದು, ನೀರಿನ ಸಂಗ್ರಹವೂ ಕಳೆದ ವರ್ಷಕ್ಕೆ ಹೋಲಿಸಿದರೆ ಗಣನೀಯವಾಗಿ ಕುಸಿದಿದೆ ಎಂದು ತಿಳಿಸಿದರು.

ಕಳೆದ ವರ್ಷ ಇದೇ ಅವಧಿಯಲ್ಲಿ ಹೇಮಾವತಿ ಅಣೆಕಟ್ಟಿನಲ್ಲಿ 80 ಅಡಿ ನೀರಿದ್ದರೆ, ಈ ವರ್ಷ ಅದು 40 ಅಡಿಗೆ ಇಳಿದಿದೆ. ಕೆಆರ್‌ಎಸ್‌ನಲ್ಲಿ 100 ಅಡಿ ಇದ್ದ ನೀರಿನ ಮಟ್ಟ 22 ಅಡಿಗೆ, ಕಬಿನಿಯಲ್ಲಿ 79 ಅಡಿಯಿಂದ 26 ಅಡಿಗೆ ಕುಸಿದಿದೆ. ತುಂಗಭದ್ರಾ, ಘಟಪ್ರಭಾ, ಮಲಪ್ರಭಾ, ನಾರಾಯಣಪುರ ಹಾಗೂ ವಾಣಿವಿಲಾಸ ಅಣೆಕಟ್ಟುಗಳ ಒಳಹರಿವು ಬಹುತೇಕ ಶೂನ್ಯವಾಗಿದ್ದು, ಕಾವೇರಿ ಜಲಾನಯನ ಪ್ರದೇಶದಲ್ಲೂ ಮಳೆಯ ಕೊರತೆ ಎದುರಾಗಿದೆ ಎಂದು ವಿವರಿಸಿದರು.

ಮಳೆ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಮಾತ್ರ ರೈತರು ಬಿತ್ತನೆ ಮಾಡಬೇಕು. ಮಳೆ ಬಂದರೆ ಅಗತ್ಯ ನೀರನ್ನು ಸರ್ಕಾರ ಒದಗಿಸುತ್ತದೆ. ನೀರು ಬಿಡುಗಡೆ ಮಾಡುವಂತೆ ಅನಗತ್ಯ ಒತ್ತಡ ತರಬಾರದು ಎಂದು ಅವರು ಮನವಿ ಮಾಡಿದರು.

ಬರ ನಿರ್ವಹಣೆಗೆ ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರಿಗೆ ಪ್ರವಾಸ ಕೈಗೊಳ್ಳುವಂತೆ ಸೂಚನೆ ನೀಡಲಾಗಿದ್ದು, ಮೇವು ಹಾಗೂ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಅಗತ್ಯವಿರುವ ಕಡೆ ತುರ್ತಾಗಿ ಕೊಳವೆಬಾವಿ ಕೊರೆಯಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ತಾವು ಕೂಡ ರಾಜ್ಯದ ನಾಲ್ಕು ವಿಭಾಗಗಳಿಗೆ ಭೇಟಿ ನೀಡಿ ಪರಿಸ್ಥಿತಿ ಪರಿಶೀಲಿಸಲಿರುವುದಾಗಿ ತಿಳಿಸಿದರು.

ಆಕ್ಯುಪೆನ್ಸಿ ಸರ್ಟಿಫಿಕೇಟ್ (ಒಸಿ) ಮತ್ತು ಕಂಪ್ಲೀಷನ್ ಸರ್ಟಿಫಿಕೇಟ್ (ಸಿಸಿ) ಸಂಬಂಧ ಈಗಾಗಲೇ ನೀಡಿರುವ ವಿನಾಯಿತಿಯಡಿ, ವಸತಿ ಕಟ್ಟಡ ನಿರ್ಮಿಸಿರುವವರು ವಿದ್ಯುತ್ ಸಂಪರ್ಕಕ್ಕಾಗಿ ದಾಖಲೆಗಳು ಹಾಗೂ ಛಾಯಾಚಿತ್ರಗಳೊಂದಿಗೆ ಆಗಸ್ಟ್ 15ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ವಾಣಿಜ್ಯ ಕಟ್ಟಡಗಳಿಗೆ ಇದೇ ವಿನಾಯಿತಿ ನೀಡುವ ಪ್ರಶ್ನೆಗೆ, ಸುಪ್ರೀಂ ಕೋರ್ಟ್ ಆದೇಶದ ವ್ಯಾಪ್ತಿಯಲ್ಲಿಯೇ ಸರ್ಕಾರ ಕ್ರಮ ಕೈಗೊಳ್ಳಬೇಕಿದೆ ಎಂದು ಸ್ಪಷ್ಟಪಡಿಸಿದರು.

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮುಂಗಾರು ಅಧಿವೇಶನವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟವಾದ ಬಳಿಕ ಮೊದಲ ಅಥವಾ ಎರಡನೇ ವಾರದಲ್ಲಿ ಅಧಿವೇಶನದ ದಿನಾಂಕ ನಿಗದಿಪಡಿಸಲಾಗುವುದು ಎಂದು ಮಾಹಿತಿ ನೀಡಿದರು.

ಮತದಾರರ ಗಣತಿ ನಮೂನೆಗಳನ್ನು ಬಿಎಗಳೇ ಮನೆ ಮನೆಗೆ ತೆರಳಿ ವಿತರಿಸಬೇಕು. ಜನಪ್ರತಿನಿಧಿಗಳು ಅಥವಾ ರಾಜಕೀಯ ಕಾರ್ಯಕರ್ತರಿಂದ ವಿತರಣೆ ನಡೆಯಬಾರದು ಎಂದು ಮುಖ್ಯಮಂತ್ರಿ ಸ್ಪಷ್ಟ ಸೂಚನೆ ನೀಡಿದರು. ಭರ್ತಿ ಮಾಡಿದ ನಮೂನೆಗಳನ್ನು ಮಾತ್ರ ಬಿಎಲ್‌ಎಗಳು ಸಂಗ್ರಹಿಸಿ ಬಿಎಗಳಿಗೆ ಸಲ್ಲಿಸಬಹುದು ಎಂದರು.

ಕಲ್ಯಾಣ ಮಂಟಪಗಳಲ್ಲಿ ಗಣತಿ ನಮೂನೆ ವಿತರಿಸಲಾಗುತ್ತಿದೆ ಎಂಬ ಆರೋಪಗಳ ಕುರಿತು ಪ್ರತಿಕ್ರಿಯಿಸಿದ ಅವರು, ಅದು ಕಾನೂನುಬಾಹಿರ. ಯಾರೇ ಮಾಡಿದ್ದರೂ ಸರ್ಕಾರ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿ ಪರಿಹರಿಸುವ ಉದ್ದೇಶದಿಂದ "ಪ್ರಜಾಸೇವೆ" ಎಂಬ ಹೊಸ ಇಲಾಖೆಯನ್ನು ಸ್ಥಾಪಿಸಲು ಸಚಿವ ಸಂಪುಟ ತೀರ್ಮಾನಿಸಿದೆ. ಇಲಾಖೆಗೆ ಐಎಎಸ್ ಅಧಿಕಾರಿಯನ್ನು ಕಾರ್ಯದರ್ಶಿಯಾಗಿ ನೇಮಿಸಲಾಗುತ್ತಿದ್ದು, ಪ್ರತಿಭಟನೆಗಳು, ಸಾರ್ವಜನಿಕ ದೂರುಗಳು ಹಾಗೂ ವಿವಿಧ ಇಲಾಖೆಗಳ ಸಮಸ್ಯೆಗಳ ಪರಿಹಾರಕ್ಕೆ ಸಮನ್ವಯ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ.

## ಬ್ರಾಹ್ಮಣ ನೌಕರರ ಸಂಘದಿಂದ ರಜತ ಮಹೋತ್ಸವ, ಪ್ರತಿಭಾ ಪುರಸ್ಕಾರ

ತುಮಕೂರು

ತುಮಕೂರು ಜಿಲ್ಲಾ ಬ್ರಾಹ್ಮಣ ನೌಕರರ ಕ್ಷೇಮಾಭಿವೃದ್ಧಿ ಸಂಘವು ಸ್ಥಾಪನೆಯಾಗಿ 25 ವರ್ಷಗಳನ್ನು ಪೂರೈಸಿದೆ. ಈ ಹಿನ್ನೆಲೆಯಲ್ಲಿ ಬ್ರಾಹ್ಮಣ ನೌಕರರ ಸಂಘದ ರಜತ ಮಹೋತ್ಸವವನ್ನು ಸೆಪ್ಟೆಂಬರ್ ತಿಂಗಳಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಹೆಚ್.ಎಸ್. ರಾಘವೇಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ 2026ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳಲ್ಲಿ ಶೇ.90 ಮತ್ತು ಅದಕ್ಕಿಂತ ಹೆಚ್ಚು ಅಂಕಗಳಿಸಿರುವ ತುಮಕೂರು ನಗರ ಪ್ರದೇಶದ ವಿದ್ಯಾರ್ಥಿಗಳು ಹಾಗೂ ಜಿಲ್ಲೆಯ ಎಲ್ಲ ತಾಲ್ಲೂಕುಗಳ ಹಾಗೂ ತುಮಕೂರು ಗ್ರಾಮಾಂತರ ಪ್ರದೇಶದ ಶೇ. 85 ಮತ್ತು ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ತ್ರಿಮತಸ್ಥ ವಿಪ್ರ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಗುವುದು. ವಿಶೇಷ ಚೇತನ ವಿಪ್ರ ವಿದ್ಯಾರ್ಥಿಗಳು ಆರ್ಥಿಕ ಸಹಾಯಕ್ಕಾಗಿ ಕೂಡ ಅರ್ಜಿ ಸಲ್ಲಿಸಬಹುದಾಗಿದೆ. ಜೊತೆಗೆ ಕ್ರೀಡೆ, ಸಂಗೀತ, ಸಾಹಿತ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಉನ್ನತ ಸಾಧನೆ ಮಾಡಿರುವ ವಿಪ್ರರನ್ನು ಗೌರವಿಸಲಾಗುವುದು.

ಆಸಕ್ತ ವಿಪ್ರ ವಿದ್ಯಾರ್ಥಿಗಳು ತಮ್ಮ ಭಾವಚಿತ್ರ ಹಾಗೂ ಅಂಕಪಟ್ಟಿಯ ಪ್ರತಿಯೊಂದಿಗೆ ತಮ್ಮ ಸ್ವವಿವರದ ಅರ್ಜಿಯನ್ನು ಜುಲೈ 20 ರೊಳಗಾಗಿ ಹೆಚ್.ಎಸ್.ರಾಘವೇಂದ್ರ, ಪ್ರಧಾನ ಕಾರ್ಯದರ್ಶಿ, ಮಲ್ಹಾರಿ ಕೃಪ, 3 ನೇ ಮುಖ್ಯರಸ್ತೆ, ಶಿವಮೂಕಾಂಬಿಕ ನಗರ, ಉಪ್ಪಾರಹಳ್ಳಿ, ತುಮಕೂರು ಈ ವಿಳಾಸಕ್ಕೆ ತಲುಪಿಸಬೇಕೆಂದು, ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9739508838 ಅನ್ನು ಸಂಪರ್ಕಿಸಬಹುದೆಂದು ಹೆಚ್.ಎಸ್.ರಾಘವೇಂದ್ರ ಮನವಿ ಮಾಡಿದ್ದಾರೆ.

## ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ 3ಕ್ಕೆ ಪ್ರತಿಭಟನೆ

ತುಮಕೂರು

ಭೂಮಿ, ವಸತಿ, ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ, ವಿಶೇಷ ಘಟಕ ಯೋಜನೆಯ ಏಕಗವಾಕ್ಷಿ ನೀತಿ ಹಾಗೂ ಇನ್ನಿತರ ಬೇಡಿಕೆಗಳಿಗೆ ಒತ್ತಾಯಿಸಿ, ಜುಲೈ 03 ರಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ(ಅಂಬೇಡ್ಕರ್ ವಾದ) ರಾಜ್ಯ ಸಮಿತಿಯಿಂದ ದಲಿತ ಜನಾಗ್ರಹ ಸಮಾವೇಶವನ್ನು ಬೆಂಗಳೂರಿನ ಫ್ರಿಡಂ ಪಾರ್ಕಿನಲ್ಲಿ ಹಮ್ಮಿಕೊಂಡಿರುವುದಾಗಿ ದಸಂಸ ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು, ದಲಿತರ ಭೂಮಿ ಹಕ್ಕಿಗಾಗಿ ದಸಂಸ ಹಲವಾರು ದಶಕಗಳಿಂದ ಹೋರಾಟ ಮಾಡುತ್ತಲೇ ಬಂದಿದೆ.ನಮ್ಮ ಹೋರಾಟದ ಭಾಗವಾಗಿಯೇ ಪಿಟಿಸಿಎಲ್ ಕಾಯ್ದೆ ಜಾರಿಗೆ ಬಂದರೂ ಸಮರ್ಪಕವಾಗಿ ದಲಿತರ ಜಮೀನು ಅವರಿಗೆ ದೊರೆತ್ತಿಲ್ಲ.ಪ್ರಸ್ತುತ ಡಿಸಿಎಂ ಆಗಿರುವ ದಲಿತ ಸಮುದಾಯಕ್ಕೆ ಸೇರಿದ ಡಾ.ಜಿ.ಪರಮೇಶ್ವರ್ ಕಂದಾಯ ಮಂತ್ರಿಗಳು ಆಗಿದ್ದು, ಅದ್ಯತೆಯ ಮೇರೆಗೆ ದಲಿತರಿಗೆ ಭೂ ಹಕ್ಕು ಹೋರಾಟಗಳಿಗೆ ನ್ಯಾಯ ಒದಗಿಸಬೇಕೆಂಬುದು ನಮ್ಮ ಆಗ್ರಹವಾಗಿದೆ ಎಂದರು.

ದಲಿತ ಸಂಘರ್ಷ ಸಮಿತಿಯ ಪ್ರೊ.ಬಿ.ಕೆ.ಅವರ ಸಿದ್ದೀಪುರ ಭೂ ಹೋರಾಟದ ಫಲವಾಗಿ ಸರಕಾರ 1978-79ರಲ್ಲಿ ಪಿ.ಟಿ.ಸಿ.ಎಲ್ ಕಾಯ್ದೆ ಜಾರಿಗೆ ಬಂದಿದೆ.ಅದರೆ ಇದುವರೆಗೂ ಶೇ11ರಷ್ಟು ಪ್ರಮಾಣದ ಭೂಮಿ ಮಾತ್ರ ದಲಿತರಿಗೆ ಮರಳಿದೆ. ಅದು ಕೂಡ ಬಂಜರು ಮತ್ತು ವ್ಯವಸಾಯಕ್ಕೆ ಯೋಗ್ಯವಲ್ಲದ ಭೂಮಿಯಾಗಿದೆ.

ಹತ್ತಾರು ವರ್ಷಗಳಿಂದ ನ್ಯಾಯಾಲಯದಲ್ಲಿ ಪ್ರಕರಣಗಳಿದ್ದರೂ ದಲಿತರಿಗೆ ನ್ಯಾಯ ಸಿಕ್ಕಿಲ್ಲ.ಭೂ ಸುಧಾರಣೆ ಕಾಯ್ದೆಗೆ ತಿದ್ದುಪಡಿ ತಂದು ಗೋಮಾಳಗಳಲ್ಲಿ ಉಳುಮೆ ಮಾಡುತ್ತಿರುವ ದಲಿತರಿಗೆ ಸಾಗುವಳಿ ಚೀಟಿ ನೀಡಬೇಕು ಎಂದು ಜುಲೈ 03 ದಲಿತರ ಜನಾಗ್ರಹ ಸಮಾವೇಶದಲ್ಲಿ ಮುಖ್ಯಮಂತ್ರಿಗಳು ಹಾಗೂ ಕಂದಾಯ ಮಂತ್ರಿಗಳನ್ನು ಒತ್ತಾಯಿಸಲಾಗುವುದು ಎಂದು ಮಾವಳ್ಳಿ ಶಂಕರ್ ತಿಳಿಸಿದರು.

ದಲಿತರ ಹೋರಾಟದ ಫಲವಾಗಿ ಜಾರಿಗೆ ಬಂದ ಎಸ್.ಸಿ.ಪಿ ಮತ್ತು ಟಿ.ಎಸ್‌ಪಿ ಯೋಜನೆಯ ನಿಯಮಗಳನ್ನು ಮೀರಿ ಹಣ ಖರ್ಚು ಮಾಡಲಾಗಿದೆ. ಕಾಯ್ದೆ ಬಂದು ದಿನದಿಂದ ಇದುವರೆಗೂ ಸುಮಾರು 3-4.50 ಲಕ್ಷ ಕೋಟಿ ರೂಗಳನ್ನು ಈ ವರ್ಗಗಳಿಗೆ ಖರ್ಚು ಮಾಡಿರುವುದಾಗಿ ಸರಕಾರ ಹೇಳುತ್ತಿದೆ. ಆದರೆ ಬಹುತೇಕ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ, ರಸ್ತೆ ನಿರ್ಮಾಣದಂತಹ ಅನ್ಯ ಉದ್ದೇಶಗಳಿಗೆ ಬಳಕೆ ಮಾಡಲಾಗಿದೆ.

ದಲಿತ ಸಂಘರ್ಷ ಸಮಿತಿಯ ಪ್ರೊ.ಬಿ.ಕೆ.ಅವರ ಸಿದ್ದೀಪುರ ಭೂ ಹೋರಾಟದ ಫಲವಾಗಿ ಸರಕಾರ 1978-79ರಲ್ಲಿ ಪಿ.ಟಿ.ಸಿ.ಎಲ್ ಕಾಯ್ದೆ ಜಾರಿಗೆ ಬಂದಿದೆ.ಅದರೆ ಇದುವರೆಗೂ ಶೇ11ರಷ್ಟು ಪ್ರಮಾಣದ ಭೂಮಿ ಮಾತ್ರ ದಲಿತರಿಗೆ ಮರಳಿದೆ. ಅದು ಕೂಡ ಬಂಜರು ಮತ್ತು ವ್ಯವಸಾಯಕ್ಕೆ ಯೋಗ್ಯವಲ್ಲದ ಭೂಮಿಯಾಗಿದೆ.

ಇದರ ಬಗ್ಗೆ ಲೆಕ್ಕ ಕೇಳಿದರೂ ಸರಕಾರದಿಂದ ಉತ್ತರವಿಲ್ಲ.ಈ ಬಗ್ಗೆ ವಿಶೇಷ ಅಧಿವೇಶನ ಕರೆದು ಚರ್ಚೆ ನಡೆಸುವುದಾಗಿ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರೂ, ಪ್ರಸ್ತುತ ಮುಖ್ಯಮಂತ್ರಿಗಳಾಗಿರುವ ಡಿ.ಕೆ.ಶಿವಕುಮಾರ ಆದರೂ ವಿಶೇಷ ಅಧಿವೇಶನ ಕರೆದು ದಲಿತರಿಗೆ ಮೀಸಲಿಟ್ಟ ಹಣವೆಷ್ಟು, ಎಷ್ಟು ಅನುದಾನವನ್ನು ದಲಿತರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಅಭಿವೃದ್ದಿಗೆ ಖರ್ಚು ಮಾಡಲಾಗಿದೆ ಎಂದು ಅಂಕಿ ಅಂಶದ ಸಮೇತ ಚರ್ಚೆ ನಡೆಸಿ, ಸತ್ಯಾಂಶವನ್ನು ಜನತೆಯ ಮುಂದಿಡಲಿ ಎಂಬುದು ನಮ್ಮ ಒತ್ತಾಯವಾಗಿದೆ. ಜುಲೈ 03 ರಂದು ಫ್ರೀಡಂ ಪಾರ್ಕಿನಲ್ಲಿ ನಡೆಯುವ ದಲಿತ ಜನಾಗ್ರಹ ಸಮಾವೇಶದ ಸ್ಥಳಕ್ಕೆ ಸಿ.ಎಂ. ಹಾಗೂ ಡಿಸಿಎಂ ಆಗಮಿಸಿ ಮನವಿ ಪಡೆದು, ಸ್ಪಷ್ಟ ಭರವಸೆ ನೀಡಬೇಕು ಎಂದು ಮಾವಳ್ಳಿ ಶಂಕರ್ ಒತ್ತಾಯಿಸಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ(ಅಂಬೇಡ್ಕರ್ ವಾದ) ರಾಜ್ಯ ಸಮಿತಿ ಸದಸ್ಯ ಕುಂದೂರು ತಿಮ್ಮಯ್ಯ ಮಾತನಾಡಿ,ದಲಿತ ಚಳವಳಿಗೆ ಹೆಚ್ಚು ಪ್ರಾಧಾನ್ಯತೆ ನೀಡಿದ್ದ ತುಮಕೂರು ಜಿಲ್ಲೆ. ಜಿಲ್ಲೆಯ ಅಲ್ಲದೆ ರಾಜ್ಯದ ಯಾವುದೇ ಭಾಗದಲ್ಲಿ ದಲಿತರ ಮೇಲೆ ದೌರ್ಜನ್ಯ, ಅತ್ಯಾಚಾರ, ಅನಾಚಾರಗಳಂತಹ ಪ್ರಕರಣಗಳು ನಡೆದಾಗ ದಸಂಸ ಮುಂಚೂಣಿಯಲ್ಲಿದ್ದು, ಹೋರಾಟ ರೂಪಿಸಿ, ನ್ಯಾಯ ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನ ನಡೆಸಿದೆ. ಹಾಗಾಗಿ ಜುಲೈ 03 ರ ದಲಿತ ಜನಾಗ್ರಹ ಸಮಾವೇಶದಲ್ಲಿ ತುಮಕೂರು ಜಿಲ್ಲೆಯಿಂದ 1500ಕ್ಕೂ ಹೆಚ್ಚು ಕಾರ್ಯಕರ್ತರು ಪಾಲ್ಗೊಳ್ಳಲಿದ್ದೇವೆ. ಅಂದು ಕಂದಾಯ ಸಚಿವರಾಗಿರುವ ಡಾ.ಜಿ.ಪರಮೇಶ್ವರ ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ, ನಮ್ಮ ಮನವಿ ಆಲಿಸಬೇಕೆಂಬುದು ನಮ್ಮಗಳ ಆಗ್ರಹವಾಗಿದೆ ಎಂದರು.

ದಸಂಸ ಸಂಘಟನಾ ಸಂಚಾಲಕರಾದ ವಿರೂಪಾಕ್ಷ ಡ್ಯಾಗೇರಹಳ್ಳಿ,ಚೇಳೂರು ಶಿವನಂಜಪ್ಪ ಅವರುಗಳು ಮಾತನಾಡಿ, ಜುಲೈ 03ರ ಸಮಾವೇಷಕ್ಕೆ ಜಿಲ್ಲೆಯಿಂದ ಹೆಚ್ಚು ಜನರು ಸ್ವಯಂ ಪ್ರೇರಣೆಯಿಂದ ಭಾಗವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸಂಚಾಲಕರಾದ ಕುಂದೂರು ಮುರುಳಿ,ಮುಖಂಡರಾದ ಬಿ.ಕೆ.ಕೃಷ್ಣಕುಮಾರ್, ನರಸೀಯಪ್ಪ, ಚಂದ್ರಶೇಖರ್, ದಾದಾಪೀರ್ ಕೊರಟಗೆರೆ, ಚೇತನ್ ಗುಬ್ಬಿ, ರಂಜನ್ ತುಮಕೂರು, ಕೃಷ್ಣಸ್ವಾಮಿ, ಸುರೇಶ್, ಕರುಣಾಕರ್, ನರಸಿಂಹಮೂರ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶ್ರೀಸಿಟಿ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯಕ್ಕೆ ಅಧಿಕೃತ ಚಾಲನೆ



ಆಂಧ್ರಪ್ರದೇಶ

ಶಿಕ್ಷಣ ಮತ್ತು ಉದ್ಯಮ ಕ್ಷೇತ್ರಗಳ ನಡುವಿನ ಅಂತರವನ್ನು ಕಡಿಮೆಗೊಳಿಸಿ ವಿದ್ಯಾರ್ಥಿಗಳನ್ನು ಉದ್ಯೋಗಕ್ಕೆ ಸಜ್ಜುಗೊಳಿಸುವ ಉದ್ದೇಶದಿಂದ ರೂಪಿಸಲಾದ ಕೆಲಸ-ಅಧ್ಯಯನ ದ್ವಂದ್ವ ಮಾದರಿ ಶಿಕ್ಷಣ ವ್ಯವಸ್ಥೆಗೆ ಶ್ರೀಸಿಟಿ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯದಲ್ಲಿ ಅಧಿಕೃತ ಚಾಲನೆ ನೀಡಲಾಯಿತು.

ಆಂಧ್ರಪ್ರದೇಶ ಸರ್ಕಾರದ ಮಾನವ ಸಂಪನ್ಮೂಲ, ಮಾಹಿತಿ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಸಚಿವ ನಾರಾ ಲೋಕೇಶ್ ಅವರು ವಿಶ್ವವಿದ್ಯಾಲಯದ ಮಧ್ಯಂತರ ಕ್ಯಾಂಪಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಾಗತಿಕ ಸಲಹಾ ಮಂಡಳಿ, ಆಡಳಿತ ಮಂಡಳಿ ಸದಸ್ಯರು ಹಾಗೂ ವಿವಿಧ ಕೈಗಾರಿಕಾ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ದೇಶದಲ್ಲಿ ಪ್ರತಿ ವರ್ಷ ಲಕ್ಷಾಂತರ ವಿದ್ಯಾರ್ಥಿಗಳು ಪದವಿ ಪಡೆದರೂ, ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯದ ಕೊರತೆಯಿಂದ ಹೆಚ್ಚಿನವರಿಗೆ ಉದ್ಯೋಗ ದೊರೆಯುತ್ತಿಲ್ಲ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ವಿಶ್ವವಿದ್ಯಾಲಯವು ಹೊಸ ಶಿಕ್ಷಣ ಮಾದರಿಯನ್ನು ಪರಿಚಯಿಸಿದೆ.

ಈ ದ್ವಂದ್ವ ಮಾದರಿಯಲ್ಲಿ ವಿದ್ಯಾರ್ಥಿಗಳು ತಮ್ಮ ಸಮಯದ ಒಂದು ಭಾಗವನ್ನು ತರಗತಿ ಕಲಿಕೆಗೆ ಮೀಸಲಿಡಲಿದ್ದು, ಉಳಿದ ಸಮಯವನ್ನು ವಿವಿಧ ಕೈಗಾರಿಕಾ ಸಂಸ್ಥೆಗಳಲ್ಲಿ ತರಬೇತಿ ಪಡೆಯುತ್ತಾ ಕೆಲಸ ಮಾಡುವ ಮೂಲಕ ಪ್ರಾಯೋಗಿಕ ಅನುಭವ ಸಂಪಾದಿಸಲಿದ್ದಾರೆ.

ಮೊದಲ ವರ್ಷದಂದೇ ತರಬೇತಿ ಪಡೆಯುವ ವಿದ್ಯಾರ್ಥಿಗಳಿಗೆ ತಿಂಗಳಿಗೆ ಕನಿಷ್ಠ 10,000 ಗೌರವಧನ ನೀಡಲಾಗುತ್ತದೆ. ವಿದ್ಯಾರ್ಥಿಗಳ ಅನುಭವ ಮತ್ತು ಕಾರ್ಯಕ್ಷಮತೆ ಹೆಚ್ಚಿದಂತೆ ಗೌರವಧನದ ಮೊತ್ತವೂ ಹೆಚ್ಚಾಗಲಿದೆ. ನಾಲ್ಕು ವರ್ಷದ ಪದವಿ ಪೂರ್ಣಗೊಳಿಸುವ ವೇಳೆಗೆ ವಿದ್ಯಾರ್ಥಿಗಳು ಎರಡು ವರ್ಷಕ್ಕಿಂತ ಹೆಚ್ಚು ನೈಜ ಕೆಲಸದ ಅನುಭವದೊಂದಿಗೆ ಪದವೀಧರರಾಗಲಿದ್ದಾರೆ.

ವಿಶ್ವವಿದ್ಯಾಲಯದ ಪಠ್ಯಕ್ರಮವನ್ನು ಕೈಗಾರಿಕಾ ಸಂಸ್ಥೆಗಳ ಸಹಭಾಗಿತ್ವದಲ್ಲಿ ರೂಪಿಸಲಾಗಿದ್ದು, ಕೃತಕ ಬುದ್ಧಿಮತ್ತೆ ಸೇರಿದಂತೆ ಬದಲಾಗುತ್ತಿರುವ ತಂತ್ರಜ್ಞಾನ ಮತ್ತು ಉದ್ಯಮದ ಅಗತ್ಯಗಳಿಗೆ ಅನುಗುಣವಾಗಿ ಪ್ರತಿವರ್ಷ ಪರಿಷ್ಕರಿಸಲಾಗುತ್ತದೆ. ಇದರಿಂದ ವಿದ್ಯಾರ್ಥಿಗಳು ಭವಿಷ್ಯದ ಉದ್ಯೋಗಗಳಿಗೆ ಅಗತ್ಯವಾದ ಜ್ಞಾನ, ಕೌಶಲ್ಯ ಮತ್ತು ಸಾಮರ್ಥ್ಯಗಳನ್ನು ಬೆಳೆಸಿಕೊಳ್ಳಲಿದ್ದಾರೆ.

ಉದ್ಯಮಶೀಲತೆಯನ್ನು ಉತ್ತೇಜಿಸುವ ಉದ್ದೇಶದಿಂದ ವಿಶ್ವವಿದ್ಯಾಲಯದ ಆವರಣದಲ್ಲಿ ನವೋದ್ಯಮ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲಾಗಿದೆ.

ಇದರ ಮೂಲಕ ಈಗಾಗಲೇ ಸುಮಾರು ಹತ್ತು ನವೋದ್ಯಮಗಳು ಕಾರ್ಯಾರಂಭ ಮಾಡಿದ್ದು, ಹೊಸ ಉದ್ಯಮಿಗಳಿಗೆ ಮಾರ್ಗದರ್ಶನ ಮತ್ತು ಅಗತ್ಯ ಬೆಂಬಲ ಒದಗಿಸಲಾಗುತ್ತಿದೆ.

## ಎಂಎಸ್ಎಂಇ ವಲಯಕ್ಕೆ ಟೋನ್‌ಟ್ಯಾಗ್‌ನ 'ಇ-ಕೋಶ'

ಬೆಂಗಳೂರು

ಭಾರತದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ (ಎಂಎಸ್‌ಎಂಇ) ವಲಯಕ್ಕೆ ಡಿಜಿಟಲ್ ಬ್ಯಾಂಕಿಂಗ್ ಸೇವೆಗಳನ್ನು ಮತ್ತಷ್ಟು ಸುಲಭಗೊಳಿಸುವ ಉದ್ದೇಶದಿಂದ ಪ್ರಮುಖ ಡೀಪ್-ಟೆಕ್ ಸಂಸ್ಥೆ ಟೋನ್‌ಟ್ಯಾಗ್ ಧ್ವನಿ ಆಧಾರಿತ ಬಿಸಿನೆಸ್ ಅಸಿಸ್ಟೆಂಟ್ 'ಇ-ಕೋಶ' ಅನ್ನು ಬಿಡುಗಡೆ ಮಾಡಿದೆ.



ಭಾರತದ 8 ಕೋಟಿಗೂ ಅಧಿಕ ಎಂಎಸ್‌ಎಂಇ ಉದ್ಯಮಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸಗೊಳಿಸಲಾದ ಈ ವ್ಯವಸ್ಥೆ, ವ್ಯಾಪಾರಿಗಳ ಮಳಿಗೆಯನ್ನೇ ಬ್ಯಾಂಕಿಂಗ್ ಸೇವೆಗಳ ಕೇಂದ್ರವಾಗಿ ಪರಿವರ್ತಿಸುವ ಸಾಮರ್ಥ್ಯ ಹೊಂದಿದೆ. ಯಾವುದೇ ಹೆಚ್ಚುವರಿ ಮೂಲಸೌಕರ್ಯ ಹೂಡಿಕೆಯ ಅಗತ್ಯವಿಲ್ಲದೆ, ವ್ಯಾಪಾರ ಕೌಂಟರ್‌ನಲ್ಲೇ ಬ್ಯಾಂಕಿಂಗ್ ಸೇವೆಗಳನ್ನು ಒದಗಿಸಲು ಇದು ಬ್ಯಾಂಕುಗಳಿಗೆ ನೆರವಾಗಲಿದೆ.

ಇ-ಕೋಶ ಸಾಧನವು ಪಾವತಿ ಸೇವೆಗಳು, ಬ್ಯಾಂಕಿಂಗ್ ಸೌಲಭ್ಯಗಳು ಹಾಗೂ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಒಂದೇ ವೇದಿಕೆಯಲ್ಲಿ ಸಂಯೋಜಿಸಿದೆ. ಇದರಿಂದ ಪ್ರತಿಯೊಂದು ವ್ಯಾಪಾರ ಮಳಿಗೆಯೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ಬ್ಯಾಂಕಿಂಗ್ ಸಂಪರ್ಕ ಕೇಂದ್ರವಾಗಿ ರೂಪುಗೊಳ್ಳಲಿದೆ.

ಎಡ್ಜ್ ಎಐ ಹಾಗೂ ಕಾಂಟೆಕ್ಚುಯಲ್ ಇಂಟೆಲಿಜೆನ್ಸ್ ತಂತ್ರಜ್ಞಾನವನ್ನು ಒಳಗೊಂಡಿರುವ ಈ ವ್ಯವಸ್ಥೆ, ಸಾಂಪ್ರದಾಯಿಕ ಪಾವತಿ ಸಾಧನಗಳನ್ನು ಸ್ಮಾರ್ಟ್ ಬ್ಯಾಂಕಿಂಗ್ ಟಚ್‌ಪಾಯಿಂಟ್‌ಗಳಾಗಿ ಪರಿವರ್ತಿಸುತ್ತದೆ. ಇದರ ಮೂಲಕ ಬ್ಯಾಂಕುಗಳು ವ್ಯಾಪಾರಿಗಳೊಂದಿಗೆ ನೇರ ಸಂಪರ್ಕ ಸಾಧಿಸಿ, ಹಣಕಾಸು ಸೇವೆಗಳನ್ನು ವೇಗವಾಗಿ ಹಾಗೂ ಪರಿಣಾಮಕಾರಿಯಾಗಿ ಒದಗಿಸಬಹುದಾಗಿದೆ.

## ಏಕೀಕೃತ ಉತ್ಪಾದನಾ ಕೇಂದ್ರ ಆರಂಭಿಸಿದ ಹೋಮ್‌ವಿಸ್ಟಾ

ಮುಂಬೈ

ಭಾರತದ ಗೃಹ ಒಳಾಂಗಣ (ಹೋಮ್ ಇಂಟೀರಿಯರ್ಸ್) ಕ್ಷೇತ್ರದಲ್ಲಿ ಗುಣಮಟ್ಟ, ನಿಖರತೆ ಹಾಗೂ ತಂತ್ರಜ್ಞಾನ ಆಧಾರಿತ ಉತ್ಪಾದನೆಗೆ ಉತ್ತೇಜನ ನೀಡುವ ಮಹತ್ವದ ಹೆಜ್ಜೆಯಾಗಿ, ಹೋಮ್‌ಲೀನ್ ಮತ್ತು ಡಿಸೈನ್‌ಕೆಫೆಯ ಮಾತೃಸಂಸ್ಥೆಯಾದ ಹೋಮ್‌ವಿಸ್ಟಾ ಮಹಾರಾಷ್ಟ್ರದ ಭಿವಾಂಡಿಯಲ್ಲಿ 56,000 ಚದರ ಅಡಿ ವಿಸ್ತೀರ್ಣದ ಹೊಸ ಏಕೀಕೃತ ಉತ್ಪಾದನಾ ಹಾಗೂ ಗೋದಾಮು ಕೇಂದ್ರವನ್ನು ಆರಂಭಿಸಿದೆ.

ಈ ಹೊಸ ಘಟಕದ ಮೂಲಕ ಹೋಮ್‌ಲೀನ್ ಹಾಗೂ ಡಿಸೈನ್‌ಕೆಫೆ ಬ್ರ್ಯಾಂಡ್‌ಗಳ ಉತ್ಪಾದನಾ ವ್ಯವಸ್ಥೆಯನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಲಾಗಿದ್ದು, ಉತ್ತರ ಹಾಗೂ ಪಶ್ಚಿಮ ಭಾರತದ ಗ್ರಾಹಕರಿಗೆ ವೇಗವಾಗಿ, ಗುಣಮಟ್ಟದ ಸೇವೆ ಒದಗಿಸುವ ಗುರಿಯನ್ನು ಹೊಂದಿದೆ.

ಗೃಹ ಒಳಾಂಗಣ ಕ್ಷೇತ್ರವು ಸಾಂಪ್ರದಾಯಿಕ ಗುತ್ತಿಗೆದಾರರ ಮಾದರಿಯಿಂದ ಸಂಘಟಿತ, ತಂತ್ರಜ್ಞಾನ ಆಧಾರಿತ ಸೇವೆಯತ್ತ ಸಾಗುತ್ತಿರುವ ಸಂದರ್ಭದಲ್ಲಿ, ಉತ್ಪಾದನಾ ಸಾಮರ್ಥ್ಯವೇ ಯಶಸ್ಸಿನ ಪ್ರಮುಖ ಅಂಶವಾಗಿದೆ. ಈ ಹಿನ್ನೆಲೆಯಲ್ಲಿ ಉತ್ಪಾದನಾ ಪ್ರಕ್ರಿಯೆಯಲ್ಲಿ ನಿಖರತೆ, ವಸ್ತುಗಳ ಟ್ರೇಸ್‌ಬಿಲಿಟಿ ಹಾಗೂ ಗುಣಮಟ್ಟದ ನಿಯಂತ್ರಣಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಹೊಸ ಉತ್ಪಾದನಾ ಕೇಂದ್ರದಲ್ಲಿ ಅತ್ಯಾಧುನಿಕ ಸಿಎನ್‌ಸಿ ಮಷೀನಿಂಗ್ ಸೆಂಟರ್‌ಗಳು, ಸ್ವಯಂಚಾಲಿತ ಬೀಮ್ ಸಾ ಯಂತ್ರಗಳು, ನಿಖರ ಎಡ್ಜ್-ಬ್ಯಾಂಡಿಂಗ್ ವ್ಯವಸ್ಥೆಗಳು, ರೋಬೋಟಿಕ್ ಫಿನಿಶಿಂಗ್ ತಂತ್ರಜ್ಞಾನ ಹಾಗೂ ಕನ್ವೇಯರ್ ಆಧಾರಿತ ಅಸೆಂಬ್ಲಿ ಲೈನ್‌ಗಳನ್ನು ಅಳವಡಿಸಲಾಗಿದೆ.

ಇದರಿಂದ ಉತ್ಪಾದನಾ ಪ್ರಕ್ರಿಯೆ ಮತ್ತಷ್ಟು ವೇಗವಾಗಿ ಹಾಗೂ ದೋಷರಹಿತವಾಗಿ ನಡೆಯಲಿದೆ.

# ಪೌಷ್ಟಿಕಾಂಶ ಜಾಗೃತಿ ಕಾರ್ಯಕ್ರಮ



ಬೆಂಗಳೂರು

ಜಿಇಎಫ್ ಇಂಡಿಯಾ ಹಾಗೂ ಇಂಡಿಯನ್ ಅಸೋಸಿಯೇಷನ್ ಫಾರ್ ಪ್ಯಾರೆಂಟರಲ್ ಅಂಡ್ ಎಂಟರಲ್ ನ್ಯೂಟ್ರಿಷನ್ ಸಹಯೋಗದಲ್ಲಿ "ಪೌಷ್ಟಿಕಾಂಶದ ಅರಿವು ಮತ್ತು ಅಕ್ಕಿ ಹೊಟ್ಟಿನ ಎಣ್ಣೆಯ ದೈನಂದಿನ ಮಹತ್ವ" ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಪೌಷ್ಟಿಕ ತಜ್ಞರು, ಆಹಾರ ತಜ್ಞರು, ಆರೋಗ್ಯ ವೃತ್ತಿಪರರು ಹಾಗೂ ವಿವಿಧ ಕ್ಷೇತ್ರಗಳ ಪ್ರತಿನಿಧಿಗಳು ಭಾಗವಹಿಸಿ, ವೈಜ್ಞಾನಿಕ ಆಧಾರಿತ ಪೌಷ್ಟಿಕಾಂಶ ಮತ್ತು ಆರೋಗ್ಯಕರ ಅಡುಗೆ ಎಣ್ಣೆಗಳ ಮಹತ್ವದ ಕುರಿತು ಚರ್ಚಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಮಾಡಿದ ಖ್ಯಾತ ಪೌಷ್ಟಿಕ ತಜ್ಞ ಡಾ. ಮತೀನ್ ಅಸ್ರಾರ್, ಹೃದಯ ಸಂಬಂಧಿ ಕಾಯಿಲೆಗಳು, ಮಧುಮೇಹ ಹಾಗೂ ಬೊಜ್ಜಿನಂತಹ ಸಾಂಕ್ರಾಮಿಕವಲ್ಲದ ಕಾಯಿಲೆಗಳನ್ನು ತಡೆಗಟ್ಟಲು ಸಮತೋಲಿತ ಆಹಾರ ಪದ್ಧತಿ ಮತ್ತು ಉತ್ತಮ ಗುಣಮಟ್ಟದ ಅಡುಗೆ ಎಣ್ಣೆಯ ಆಯ್ಕೆ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದರು.

ಕೊಬ್ಬಿನಂಶವನ್ನು ಸಂಪೂರ್ಣವಾಗಿ ತ್ಯಜಿಸುವ ಬದಲು, ದೇಹಕ್ಕೆ ಅಗತ್ಯವಾದ ಉತ್ತಮ ಗುಣಮಟ್ಟದ ಕೊಬ್ಬನ್ನು ಮಿತ ಪ್ರಮಾಣದಲ್ಲಿ ಸೇವಿಸುವುದು ಆರೋಗ್ಯಕ್ಕೆ ಅವಶ್ಯಕವಾಗಿದೆ ಎಂದು ಅವರು ಹೇಳಿದರು.

ಅಕ್ಕಿ ಹೊಟ್ಟಿನ ಎಣ್ಣೆಯಲ್ಲಿ ಏಕ ಅಸಂತೃಪ್ತ ಮತ್ತು ಬಹು ಅಸಂತೃಪ್ತ ಕೊಬ್ಬಿನಾಂಶಗಳ ಜೊತೆಗೆ ಒರೈಝನಾಲ್, ಟೋಕೋಫೆರಾಲ್ ಹಾಗೂ ಟೋಕೋಟ್ರಿಯೆನಾಲ್‌ನಂತಹ ಪೌಷ್ಟಿಕ ಅಂಶಗಳು ಸಮೃದ್ಧವಾಗಿದ್ದು, ದೇಹದಲ್ಲಿನ ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣವನ್ನು ನಿಯಂತ್ರಿಸಲು ನೆರವಾಗುತ್ತವೆ ಎಂದು ವಿವರಿಸಿದರು.

ವೈಜ್ಞಾನಿಕ ಅಧ್ಯಯನಗಳ ಪ್ರಕಾರ, ಅಕ್ಕಿ ಹೊಟ್ಟಿನ ಎಣ್ಣೆಯ ನಿಯಮಿತ ಬಳಕೆಯಿಂದ ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣದಲ್ಲಿ ಇಳಿಕೆ ಕಂಡುಬಂದಿದೆ. ಭಾರತೀಯ ಅಡುಗೆ ಪದ್ಧತಿಗೆ ಇದು ಸೂಕ್ತವಾದ ಎಣ್ಣೆಯಾಗಿದ್ದು, ಆರೋಗ್ಯಕರ ಆಹಾರ ಪದ್ಧತಿಯ ಭಾಗವಾಗಬಹುದು ಎಂದು ಅವರು ತಿಳಿಸಿದರು.

## ಹೆಚ್ಚುತ್ತಿರುವ ದಣಿವು ಮತ್ತು ನಿರಾಸಕ್ತಿ

ಬೆಂಗಳೂರು

ಇತರರ ಆರೋಗ್ಯ ರಕ್ಷಣೆಗೆ ತಮ್ಮ ಜೀವನವನ್ನು ಮುಡಿಪಾಗಿಡುವ ವೈದ್ಯರೇ, ತೀವ್ರ ಕೆಲಸದ ಒತ್ತಡ, ನಿದ್ರಾಹೀನತೆ ಮತ್ತು ನಿರಂತರ ಮಾನಸಿಕ ಒತ್ತಡದಿಂದ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ವೈದ್ಯಕೀಯ ತಜ್ಞರು ಎಚ್ಚರಿಸಿದ್ದಾರೆ.

ಸುದೀರ್ಘ ಕೆಲಸದ ಅವಧಿ, ತುರ್ತು ಸೇವೆಗಳು, ಅನಿಯಮಿತ ಆಹಾರ ಪದ್ಧತಿ ಹಾಗೂ ವಿಶ್ರಾಂತಿಯ ಕೊರತೆಯಿಂದ ವೈದ್ಯರಲ್ಲಿ ಅತಿಯಾದ ದಣಿವಿನಿಂದ ಉಂಟಾಗುವ 'ಬರ್ನೌಟ್' ಸಮಸ್ಯೆ ಹೆಚ್ಚುತ್ತಿದ್ದು, ಇದು ಅವರ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ.

ರೋಗಿಗಳಿಗೆ ವಾರ್ಷಿಕ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವಂತೆ ಸಲಹೆ ನೀಡುವ ವೈದ್ಯರೇ, ಬಿಡುವಿಲ್ಲದ ಕೆಲಸದ ವೇಳಾಪಟ್ಟಿ ಮತ್ತು ರೋಗಿಗಳ ಆರೈಕೆಗೆ ಮೊದಲ ಆದ್ಯತೆ ನೀಡುವ ಮನೋಭಾವದಿಂದ ತಮ್ಮದೇ ಆರೋಗ್ಯ ತಪಾಸಣೆಯನ್ನು ಮುಂದೂಡುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ.

ತಜ್ಞರ ಪ್ರಕಾರ, ರಕ್ತದೊತ್ತಡ, ರಕ್ತದಲ್ಲಿನ ಸಕ್ಕರೆ ಪ್ರಮಾಣ, ಕೊಲೆಸ್ಟ್ರಾಲ್, ಯಕೃತ್ತು ಮತ್ತು ಮೂತ್ರಪಿಂಡಗಳ ಕಾರ್ಯಕ್ಷಮತೆ, ಥೈರಾಯ್ಡ್ ಪರೀಕ್ಷೆ, ಹೃದಯದ ಆರೋಗ್ಯ, ವಿಟಮಿನ್ ಮಟ್ಟ, ವಯಸ್ಸಿಗೆ ಅನುಗುಣವಾದ ಕ್ಯಾನ್ಸರ್ ತಪಾಸಣೆ, ಮಾನಸಿಕ ಆರೋಗ್ಯ ಮೌಲ್ಯಮಾಪನ ಹಾಗೂ ನಿದ್ರೆಯ ಗುಣಮಟ್ಟದ ಪರಿಶೀಲನೆ ಸೇರಿದಂತೆ ನಿಯಮಿತ ಆರೋಗ್ಯ ತಪಾಸಣೆಗಳು ಯಾವುದೇ ಲಕ್ಷಣಗಳು ಕಾಣಿಸಿಕೊಳ್ಳುವ ಮುನ್ನವೇ ಆರೋಗ್ಯದ ಅಪಾಯಗಳನ್ನು ಪತ್ತೆಹಚ್ಚಲು ನೆರವಾಗುತ್ತವೆ.

ವೈದ್ಯರ ಆರೋಗ್ಯ ಕಾಪಾಡುವುದು ಅವರ ವೈಯಕ್ತಿಕ ಜವಾಬ್ದಾರಿಯಷ್ಟೇ ಅಲ್ಲ, ಆರೋಗ್ಯ ಸಂಸ್ಥೆಗಳ ಜವಾಬ್ದಾರಿಯೂ ಆಗಿದೆ. ವೈದ್ಯರಿಗೆ ಆರೋಗ್ಯ ತಪಾಸಣೆಗೆ ಮೀಸಲಾದ ಸಮಯ, ದಣಿವು ನಿರ್ವಹಣಾ ನೀತಿಗಳು, ಗೌಪ್ಯ ಮಾನಸಿಕ ಆರೋಗ್ಯ ಸಲಹಾ ಸೇವೆಗಳು ಹಾಗೂ ಸುಸ್ಥಿರ ಮಾನವ ಸಂಪನ್ಮೂಲ ವ್ಯವಸ್ಥೆಯನ್ನು ರೂಪಿಸುವುದು ಅಗತ್ಯವಾಗಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

## ಹೆಚ್ಚಿದ ಬಾರ್, ರೆಸ್ಟೋರೆಂಟ್: ಪರಿಸರ ಹಾನಿ ಆತಂಕ



ದೊಡ್ಡಬಳ್ಳಾಪುರ

ತೂಬಗೆರೆ ಹೋಬಳಿಯ ಹಾಡೋನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಶ್ರೀ ಕ್ಷೇತ್ರ ಘಾಟಿ ಸುಬ್ರಹ್ಮಣ್ಯ ದೇವಾಲಯಕ್ಕೆ ತೆರಳುವ ಹೆದ್ದಾರಿಗಳ ಅಂಚಿನಲ್ಲಿ ಬಾರ್ ಮತ್ತು ರೆಸ್ಟೋರೆಂಟ್‌ಗಳ ಸಂಖ್ಯೆ ಹೆಚ್ಚುತ್ತಿರುವುದರಿಂದ ಸುತ್ತಮುತ್ತಲಿನ ಕೃಷಿಭೂಮಿಗಳಿಗೆ ತೀವ್ರ ಪರಿಸರ ಸಮಸ್ಯೆ ಉಂಟಾಗುತ್ತಿರುವುದು ಸ್ಥಳೀಯ ರೈತರ ಆತಂಕಕ್ಕೆ ಕಾರಣವಾಗಿದೆ.

ಬಾರ್‌ಗಳು ಮತ್ತು ಹೋಟೆಲ್‌ಗಳಿಂದ ಹೊರಬರುವ ಪ್ಲಾಸ್ಟಿಕ್ ಹಾಗೂ ಗಾಜಿನ ಬಾಟಲಿ ತ್ಯಾಜ್ಯಗಳು ನೇರವಾಗಿ ಹೊಲಗದ್ದೆಗಳಿಗೆ ಸೇರುತ್ತಿದ್ದು, ಮಣ್ಣಿನ ಫಲವತ್ತತೆ ಕುಸಿಯುವ ಅಪಾಯ ಎದುರಾಗುತ್ತಿದೆ ಎಂದು ರೈತರು ಆರೋಪಿಸಿದ್ದಾರೆ.

ಗಾಜಿನ ಚೂರುಗಳು ಮಣ್ಣಿನಲ್ಲಿ ಸೇರಿ ಬೆಳೆಗಳ ಬೇರುಗಳಿಗೆ ಹಾನಿ ಮಾಡುವ ಸಾಧ್ಯತೆ ಹೆಚ್ಚಿದ್ದು, ಪ್ಲಾಸ್ಟಿಕ್ ತ್ಯಾಜ್ಯಗಳು ಕರಗದೆ ದೀರ್ಘಕಾಲ ಉಳಿದುಕೊಂಡು ಮಣ್ಣಿನ ಗುಣಮಟ್ಟವನ್ನೇ ಹಾಳುಮಾಡುತ್ತಿವೆ ಎಂದು ಅವರು ತಿಳಿಸಿದ್ದಾರೆ.

ಮಳೆಯ ನೀರು ಕಸದ ರಾಶಿಯಿಂದಾಗಿ ಭೂಮಿಯ ಒಳಗೆ ಸರಿಯಾಗಿ ಇಳಿಯದೆ ನೀರಿನ ಶೋಷಣೆಯ ಮೇಲೆ ಪರಿಣಾಮ ಬೀರುತ್ತಿದ್ದು, ಕೃಷಿ ಚಟುವಟಿಕೆಗಳಿಗೆ ತೊಂದರೆ ಉಂಟಾಗುತ್ತಿದೆ ಎಂದು ರೈತರು ಹೇಳಿದ್ದಾರೆ. ಜೊತೆಗೆ, ಮೇಯಲು ಹೋಗುವ ಜಾನುವಾರುಗಳು ಗಾಜಿನ ಚೂರುಗಳನ್ನು ತಿನ್ನುವ ಅಥವಾ ಬಾಯಿಗೆ ಸಿಲುಕುವ ಅಪಾಯ ಎದುರಿಸುತ್ತಿದ್ದು, ಇದರಿಂದ ಪ್ರಾಣಾಪಾಯ ಸಂಭವಿಸುವ ಸಾಧ್ಯತೆ ಇದೆ ಎಂಬ ಆತಂಕ ವ್ಯಕ್ತವಾಗಿದೆ.

ಇದೇ ವೇಳೆ, ಹೊಲಗಳಲ್ಲಿ ಉಳುಮೆ ಮಾಡುವಾಗ ಅಥವಾ ಕಳೆ ಕೀಳುವ ಸಂದರ್ಭದಲ್ಲಿ ರೈತರಿಗೆ ಗಾಜಿನ ಚೂರುಗಳು ಚುಚ್ಚಿ ಕೈಕಾಲುಗಳಿಗೆ ಗಾಯವಾಗುತ್ತಿರುವ ಘಟನೆಗಳೂ ವರದಿಯಾಗಿವೆ ಎಂದು ರೈತ ಮಂಜುನಾಥ ಅವರು ತಮ್ಮ ಅಳಲು ತೋಡಿಕೊಂಡಿದ್ದಾರೆ.

ಸಂಬಂಧಿತ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಸಮಸ್ಯೆಯನ್ನು ಬಗೆಹರಿಸಬೇಕು ಎಂದು ಗ್ರಾಮಸ್ಥರು ಹಾಗೂ ರೈತರು ಮನವಿ

## ಇನ್ನೋಟೆರಾ ಲಿಮಿಟೆಡ್ ಐಪಿಒಗೆ ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಕೆ

ಬೆಂಗಳೂರು: ಸ್ವಿಸ್ ಕೃಷಿ ತಂತ್ರಜ್ಞಾನದ ಪ್ರಮುಖ ಕಂಪನಿ ಇನ್ನೋಟೆರಾ ಎಜಿಯ ಅಂಗಸಂಸ್ಥೆಯಾದ ಇನ್ನೋಟೆರಾ ಲಿಮಿಟೆಡ್ (ಹಿಂದಿನ ಮಿಲ್ಕ್‌ಲೇನ್ ಡೇರಿ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್) ತನ್ನ ಆರಂಭಿಕ ಸಾರ್ವಜನಿಕ ಷೇರು ಬಿಡುಗಡೆ (ಐಪಿಒ)ಗೆ ಸಂಬಂಧಿಸಿದಂತೆ ಸೆಕ್ಯುರಿಟೀಸ್ ಅಂಡ್ ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಎಚ್‌ಪಿ) ಸಲ್ಲಿಸಿದೆ.

ಪ್ರಸ್ತಾವಿತ ಐಪಿಒದಲ್ಲಿ 105 ಕೋಟಿ ರೂಪಾಯಿವರೆಗಿನ ಹೊಸ ಈಕ್ವಿಟಿ ಷೇರುಗಳ ವಿತರಣೆ ಜೊತೆಗೆ, ಮಾರಾಟ ಷೇರುದಾರರಾದ ಮಿಲ್ಕ್‌ಲೇನ್ ಹೋಲ್ಡಿಂಗ್ ಪ್ರೈವೇಟ್ ಲಿಮಿಟೆಡ್ ಮತ್ತು ಮಹೈಕೊ ಪ್ರೈವೇಟ್ ಲಿಮಿಟೆಡ್ ಸೇರಿ 70.55 ಲಕ್ಷ ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ ಒಳಗೊಂಡಿದೆ.

ಐಪಿಒ ಮೂಲಕ ಸಂಗ್ರಹವಾಗುವ ನಿವ್ವಳ ನಿಧಿಯನ್ನು ಕಂಪನಿ ತನ್ನ ವಿಸ್ತರಣೆ ಹಾಗೂ ಕಾರ್ಯಾಚರಣಾ ಅಗತ್ಯಗಳಿಗೆ ಬಳಸಿಕೊಳ್ಳಲಿದೆ. ಹೊಸ ಬೃಹತ್ ಹಾಲು ಖರೀದಿ ಕೇಂದ್ರಗಳ ಸ್ಥಾಪನೆ ಹಾಗೂ ಈಗಿರುವ ಕೇಂದ್ರಗಳಲ್ಲಿ ಹಾಲು ತಂಪಾಗಿಸುವ ಘಟಕಗಳ ನವೀಕರಣಕ್ಕಾಗಿ 10.69 ಕೋಟಿ ರೂ. ಮೀಸಲಿಡಲಾಗಿದೆ. ಕಾರ್ಯನಿರ್ವಹಣಾ ಬಂಡವಾಳದ ಅವಶ್ಯಕತೆಗಳಿಗೆ 54.75 ಕೋಟಿ ರೂ. ಬಳಸಲಾಗಲಿದ್ದು, ಉಳಿದ ಮೊತ್ತವನ್ನು ಅಜೈವಿಕ ಸ್ವಾಧೀನಗಳು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗೆ ವಿನಿಯೋಗಿಸಲಾಗುತ್ತದೆ.

2025ರ ಡಿಸೆಂಬರ್ 31ರ ವೇಳೆಗೆ ಹಾಲು ಖರೀದಿಸಿದ ಪ್ರಮಾಣದ ಆಧಾರದ ಮೇಲೆ ಭಾರತದಲ್ಲಿನ ಅತಿದೊಡ್ಡ ಬಿ2ಬಿ ಹಾಲು ಖರೀದಿ ವೇದಿಕೆ ಎಂಬ ಹೆಗ್ಗಳಿಕೆಯನ್ನು ಇನ್ನೋಟೆರಾ ಹೊಂದಿದೆ. ಕಂಪನಿ ತಂತ್ರಜ್ಞಾನ ಆಧಾರಿತ ಕೃಷಿ-ಆಹಾರ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದ್ದು, ರೈತರು ಮತ್ತು ಕೈಗಾರಿಕಾ ಗ್ರಾಹಕರನ್ನು ನೇರವಾಗಿ ಸಂಪರ್ಕಿಸುವ ವ್ಯವಸ್ಥೆಯನ್ನು ನಿರ್ಮಿಸಿದೆ.

'ಮಿಲ್ಕ್‌ಲೇನ್' ವೇದಿಕೆಯ ಮೂಲಕ ಅಫ್ಲಾಟಾಕ್ಸಿನ್ ಹಾಗೂ ಪ್ರತಿಜೀವಕ-ಸುರಕ್ಷಿತ ಕಚ್ಚಾ ಹಾಲಿನ ಸಂಗ್ರಹಣೆ ಮತ್ತು ಪೂರೈಕೆ ನಡೆಸಲಾಗುತ್ತದೆ. 'ಮಿಲ್ಕ್‌ಲೇನ್ ಆಯುಷ್' ಬ್ರ್ಯಾಂಡ್‌ನಡಿ ವೈಜ್ಞಾನಿಕವಾಗಿ ರೂಪಿಸಲಾದ ಜಾನುವಾರು ಪೌಷ್ಟಿಕ ಆಹಾರಗಳನ್ನು ಒದಗಿಸಲಾಗುತ್ತಿದೆ. ಅಲ್ಲದೆ 'ಹ್ಯಾಪಿ ಫ್ರೂಟ್ಸ್' ಹಾಗೂ 'ಅಮರಾಹ್' ಬ್ರ್ಯಾಂಡ್‌ಗಳ ಮೂಲಕ ತಾಜಾ ಹಣ್ಣುಗಳು ಮತ್ತು ಕೃಷಿ ಉತ್ಪನ್ನಗಳ ಪೂರೈಕೆಯನ್ನೂ ಕಂಪನಿ ನಡೆಸುತ್ತಿದೆ. ಕಂಪನಿಯು ಮಿಲ್ಕಿ ಮಿಸ್ಟ್ ಡೈರಿ ಫುಡ್ಸ್ ಲಿಮಿಟೆಡ್ ಜೊತೆ ಕಚ್ಚಾ ಹಾಲಿನ ಪೂರೈಕೆಗೆ ದೀರ್ಘಾವಧಿಯ ಒಪ್ಪಂದ ಹೊಂದಿದ್ದು, ಜೈವಿಕ ತಂತ್ರಜ್ಞಾನ ಆಧಾರಿತ ಜಾನುವಾರು ಮೇವು ಅಭಿವೃದ್ಧಿಗಾಗಿ ಅಂತಾರಾಷ್ಟ್ರೀಯ ಜಾನುವಾರು ಸಂಶೋಧನಾ ಸಂಸ್ಥೆಯೊಂದಿಗೆ ಸಂಶೋಧನಾ ಸಹಭಾಗಿತ್ವವನ್ನೂ ಮುಂದುವರಿಸಿದೆ.

2025ರ ಡಿಸೆಂಬರ್ ಅಂತ್ಯದ ವೇಳೆಗೆ ಕಂಪನಿಯು ಕರ್ನಾಟಕ, ತಮಿಳುನಾಡು ಹಾಗೂ ಆಂಧ್ರಪ್ರದೇಶ ರಾಜ್ಯಗಳಲ್ಲಿ 122 ಬೃಹತ್ ಹಾಲು ಖರೀದಿ ಕೇಂದ್ರಗಳನ್ನು ನಿರ್ವಹಿಸುತ್ತಿದೆ.

# ಕೆಸ್ತೂರು ಹೆದ್ದಾರಿಯಲ್ಲಿ ಕಾರು ಪಲ್ಟಿ; ಚಾಲಕ ಪ್ರಾಣಾಪಾಯದಿಂದ ಪಾರು



ದೊಡ್ಡಬಳ್ಳಾಪುರ

ತಾಲೂಕಿನ ಬೆಳವಂಗಲ ಹೋಬಳಿ ವ್ಯಾಪ್ತಿಯ ಕೆಸ್ತೂರು ಸಮೀಪದ ಹೆದ್ದಾರಿಯಲ್ಲಿ ಕಾರು ನಿಯಂತ್ರಣ ತಪ್ಪಿ ಪಲ್ಟಿಯಾದ ಘಟನೆ ಸಂಭವಿಸಿದ್ದು, ಚಾಲಕ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ದೊಡ್ಡಬಳ್ಳಾಪುರದಿಂದ ದಾಬಸ್‌ಪೇಟೆ ಕಡೆಗೆ ತೆರಳುತ್ತಿದ್ದ ವೇಳೆ ಕಾರು ಚಾಲಕನ ನಿಯಂತ್ರಣ ತಪ್ಪಿ ಮೊದಲು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಬಳಿಕ ರಸ್ತೆ ಬದಿಯ ಗುಂಡಿಗೆ ಪಲ್ಟಿಯಾಗಿದೆ.

ಅಪಘಾತದ ವೇಳೆ ಕಾರು ಸ್ವಲ್ಪ ಮುಂದೆ ಹೋಗಿದ್ದರೆ ಸಮೀಪದಲ್ಲಿದ್ದ ಟ್ರಾನ್ಸ್‌ಫಾರ್ಮರ್‌ಗೆ ಡಿಕ್ಕಿ ಹೊಡೆದು ಭಾರೀ ಅನಾಹುತ ಸಂಭವಿಸುವ ಸಾಧ್ಯತೆ ಇತ್ತು. ಆದರೆ ಅದೃಷ್ಟವಶಾತ್ ದೊಡ್ಡ ಅಪಾಯ ತಪ್ಪಿದ್ದು, ಚಾಲಕ ಸುರಕ್ಷಿತವಾಗಿ ಪಾರಾಗಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಬೆಳವಂಗಲ ಹೋಬಳಿ ಹಾಗೂ ಸುತ್ತಮುತ್ತಲಿನ ಹೆದ್ದಾರಿಗಳಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಹೆಚ್ಚುತ್ತಿದ್ದು, ಈ ಮಾರ್ಗ ಅಪಘಾತಗಳ ತಾಣವಾಗಿ ಪರಿಣಮಿಸುತ್ತಿದೆ ಎಂಬ ಆತಂಕ ಸ್ಥಳೀಯರು ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ದೊಡ್ಡಬೆಳವಂಗಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಮೂರು ದಿನಗಳ ಉಚಿತ ಪ್ರವಾಸ

ಕೋಲಾರ

ವಿಧಾನಸಭಾ ಕ್ಷೇತ್ರದ ಶಾಸಕ ಕೊತ್ತೂರು ಮಂಜುನಾಥ್ ಹಾಗೂ ವಿಧಾನಸಭಾ ಸ್ವಂತ ಹಣದಲ್ಲಿ ನಗರದ ಹೊರವಲಯದ ಟಮಕ ಜನತೆಗೆ ಮೂರು ದಿನಗಳ ಉಚಿತ ಪ್ರವಾಸಕ್ಕೆ ಎರಡು ಬಸ್ ಗಳ ವ್ಯವಸ್ಥೆ ಮಾಡಿದ್ದರು.

ಕರ್ನಾಟಕದ ಸೌದತ್ತಿ ಎಲ್ಲಮ್ಮ ದೇವಸ್ಥಾನ, ಗೋಕರ್ಣ, ಮುರುಡೇಶ್ವರ, ಉಡುಪಿ ಮಲ್ಪೆ ಬೀಚ್, ಉಡುಪಿ

ರಾಮರ ದೇವಾಲಯ, ಶ್ರೀಕೃಷ್ಣ ಮಠ, ಧರ್ಮಸ್ಥಳ ಸೇರಿದಂತೆ ಇನ್ನೂ ಅನೇಕ ಸ್ಥಳಗಳ ಭೇಟಿಗೆ ಅವಕಾಶ ನೀಡಿದ್ದಾರೆ ಈ ಸಂದರ್ಭದಲ್ಲಿ ಟಮಕ ಕಾಂಗ್ರೆಸ್ ಮುಖಂಡರಾದ ಹರೀಷ್ ಮತ್ತು ಶ್ರೀರಾಮ್ ನೇತೃತ್ವವನ್ನು ವಹಿಸಿದ್ದಾರೆ.

## ಕೇಂದ್ರ ಸರ್ಕಾರದ ವಕೀಲರಾಗಿ ಎಸ್.ಮಧುಕರ್ ನೇಮಕ

ಕೋಲಾರ



ತಾಲೂಕಿನ ಕ್ಯಾಲನೂರು ಗ್ರಾಮದ ಹಿರಿಯ ವಕೀಲ ಎಸ್.ಮಧುಕರ್ ಅವರನ್ನು ಕೇಂದ್ರ ಸರ್ಕಾರದ ವಕೀಲರನ್ನಾಗಿ ಕೇಂದ್ರ ಕಾನೂನು ಸಚಿವಾಲಯ ನೇಮಕಗೊಳಿಸಿ ಆದೇಶಿಸಿದೆ.

ಸುಮಾರು 16 ವರ್ಷದಿಂದ ಬೆಂಗಳೂರಿನ ಹೈಕೋರ್ಟ್ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಧುಕರ್ ಪತ್ನಿ ಹಂಸ ಕೂಡ ನ್ಯಾಯವಾದಿಯಾಗಿದ್ದಾರೆ. ಪ್ರತಿಭೆ ಮಧುಕರ್ ಅವರು ಡಾ.ಕೆ.ಎಸ್.ಶಂಕರ್ ರಾವ್ ಮತ್ತು ವರಲಕ್ಷ್ಮೀ ದಂಪತಿ ಪುತ್ರ ಆಗಿದ್ದಾರೆ. ಉತ್ತಮವಾಗಿ ವಾದ ಮಂಡನೆ ಮಾಡುವ ಮೂಲಕ ಕೇಂದ್ರ ಸರ್ಕಾರದ ಎಲ್ಲ ಪ್ರಕರಣಗಳನ್ನು ಗೆಲ್ಲುವುದರೊಂದಿಗೆ ಕಕ್ಷೀದಾರರಿಗೆ ನ್ಯಾಯ ಒದಗಿಸವುದಾಗಿ ವಕೀಲ ಮಧುಕರ್ ಪ್ರತಿಕ್ರಿಯಿಸಿದ್ದಾರೆ.

## ಪ್ರತಿಭಾ ಪುರಸ್ಕಾರ ಹಾಗೂ ಸರ್ವಸದಸ್ಯರ ಸಭೆ

ಕೋಲಾರ

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು 2026ನೇ ಸಾಲಿನ ವಾರ್ಷಿಕ ಪ್ರಶಸ್ತಿಗಳನ್ನು ಪ್ರಕಟಿಸಿದೆ.

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜುಲೈ 1 ರಂದು ಬುಧವಾರ ನಗರದ ಪತ್ರಕರ್ತರ ಭವನದಲ್ಲಿ ಬೆಳಗ್ಗೆ 10-00 ಗಂಟೆಗೆ ನಡೆಯುವ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಸಂಸದ ಎಂ.ಮಲ್ಲೇಶ್ ಬಾಬು ಕಾರ್ಯಕ್ರಮವನ್ನು ಉದ್ಘಾಟಿಸುವರು. ಶಾಸಕ ಕೊತ್ತೂರು ಮಂಜುನಾಥ್, ಮುಖ್ಯಮಂತ್ರಿಗಳ ಮಾಜಿ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಪುರಸ್ಕರಿಸಲಿದ್ದಾರೆ. ಎಂ.ಎಲ್.ಸಿ ಎಂ.ಎಲ್.ಅನಿಲ್ ಕುಮಾರ್, ಕೆ.ಯು.ಡಬ್ಲ್ಯೂ.ಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಪ್ರಶಸ್ತಿ ಪುರಸ್ಕೃತ ಪತ್ರಕರ್ತರನ್ನು ಸನ್ಮಾನಿಸಲಿದ್ದಾರೆ. ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಎಸ್.ಕೆ.ಚಂದ್ರಶೇಖರ್ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದಲ್ಲಿ ಕೆ.ಯು.ಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಖಜಾಂಚಿ ಎಂ.ವಾಸುದೇವಹೊಳ್ಳ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯರಾದ ವಿ.ಮುನಿರಾಜು, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನಿಕಟಪೂರ್ವ ಅಧ್ಯಕ್ಷ ಬಿ.ವಿ.ಗೋಪಿನಾಥ್, ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ವಿವಿಧೋದೇಶ ಸಹಕಾರ ಸಂಘದ ಅಧ್ಯಕ್ಷ ಕೆ.ಎಸ್.ಗಣೇಶ್ ಮುಖ್ಯ ಅತಿಥಿಗಳಾಗಿರುವರು.

ಕಾರ್ಯಕ್ರಮಕ್ಕೆ ಜಿಲ್ಲೆಯ ಸಮಸ್ತ ಪತ್ರಕರ್ತರು ಆಗಮಿಸಲು

# 'ಲವ್ ಜಿಹಾದ್' ಕುರಿತು ಬೆಳಗಾವಿಯಲ್ಲಿ ಉಪನ್ಯಾಸ: 1,600ಕ್ಕೂ ಹೆಚ್ಚು ಮಂದಿ ಭಾಗಿ


ಬೆಳಗಾವಿ

'ಲವ್ ಜಿಹಾದ್' ವಿಷಯದ ಕುರಿತು ಬೆಳಗಾವಿಯ ಶಹಾಪುರದ ಮಹಾತ್ಮಾ ಫುಲೆ ರಸ್ತೆಯಲ್ಲಿರುವ ದಾನಮ್ಮ ದೇವಸ್ಥಾನದ ಶ್ರೀ ಜಗಜ್ಯೋತಿ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿದ್ದು, ಆಯೋಜಕರ ಪ್ರಕಾರ 1,600ಕ್ಕೂ ಹೆಚ್ಚು ಹಿಂದೂ ನಾಗರಿಕರು, ಮಹಿಳೆಯರು, ಯುವತಿಯರು ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಸನಾತನ ಸಂಸ್ಥೆಯ ಧರ್ಮಪ್ರಚಾರಕರಾದ ಸದ್ಗುರು ಸ್ವಾತಿ ಖಾಡ್ಯೆ ಮಾತನಾಡಿ, ಹಿಂದೂ ಧರ್ಮ ಹಾಗೂ ಸಂಸ್ಕೃತಿಯ ಬಗ್ಗೆ ಅರಿವು ಮತ್ತು ಅಭಿಮಾನ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು. ಹಿಂದೂ ಯುವತಿಯರು ರಾಣಿ ಚೆನ್ನಮ್ಮ, ರಾಣಿ ಪದ್ಮಾವತಿ, ರಾಣಿ ಲಕ್ಷ್ಮೀಬಾಯಿ, ಅಹಲ್ಯಾಬಾಯಿ ಹೋಳ್ಕರ್ ಹಾಗೂ ರಾಜಮಾತಾ ಜಿಜಾವು ಅವರಂತಹ ಐತಿಹಾಸಿಕ ವ್ಯಕ್ತಿತ್ವಗಳನ್ನು ಆದರ್ಶವಾಗಿಟ್ಟುಕೊಳ್ಳಬೇಕು ಎಂದು ಕರೆ ನೀಡಿದರು.

ಪ್ರತಿಯೊಂದು ಹಿಂದೂ ಕುಟುಂಬದಲ್ಲಿ ಧರ್ಮಾಭಿಮಾನ ಬೆಳೆಸಿದರೆ ಯುವತಿಯರು ಇಂತಹ ಜಾಲಗಳಿಗೆ ಬಲಿಯಾಗುವುದನ್ನು ತಡೆಯಬಹುದು ಎಂದು ಅಭಿಪ್ರಾಯಪಟ್ಟ ಅವರು, ರಕ್ಷಾಬಂಧನದ ಸಂದರ್ಭದಲ್ಲಿ ಯುವಕರು ತಮ್ಮ ಸಹೋದರಿಯರಿಗೆ 'ಲವ್ ಜಿಹಾದ್' ಕುರಿತ ಪುಸ್ತಕಗಳನ್ನು ಉಡುಗೊರೆಯಾಗಿ ನೀಡುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಹಿಂದೂ ಜನಜಾಗೃತಿ ಸಮಿತಿಯ ರಾಷ್ಟ್ರೀಯ ವಕ್ತಾರ ರಮೇಶ್ ಶಿಂದೆ ಮಾತನಾಡಿ, 'ಲವ್ ಜಿಹಾದ್' ಕುರಿತು ತಮ್ಮ ಸಂಘಟನೆಯ



ನಿಲುವು ಮತ್ತು ಐತಿಹಾಸಿಕ ಹಿನ್ನೆಲೆಯನ್ನು ವಿವರಿಸಿದರು. ದೇಶದ ವಿವಿಧ ಐತಿಹಾಸಿಕ ಘಟನೆಗಳನ್ನು ಉಲ್ಲೇಖಿಸಿದ ಅವರು, ಹಿಂದೂ ಮಹಿಳೆಯರ ಸುರಕ್ಷತೆ ಕುರಿತು ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಅವರು 'ಬೇಟಿ ಸುರಕ್ಷಿತ್, ರಾಷ್ಟ್ರ ಸುರಕ್ಷಿತ್' ಎಂಬ ಅಭಿಯಾನವನ್ನು ಉಲ್ಲೇಖಿಸಿ, ಹಿಂದೂ ಯುವತಿಯರು ಮತ್ತು ನಾಗರಿಕರು ಈ ಜಾಗೃತಿ ಅಭಿಯಾನದಲ್ಲಿ ಭಾಗವಹಿಸುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಇಸ್ಕಾನ್ ಸಂಪ್ರದಾಯದ ಶಂಕರಾರಣ್ಯ ಪ್ರಭೂಜಿ, ಸನಾತನ ಸಂಸ್ಥೆಯ ಸಂತ ಪೂಜ್ಯ ಶಂಕರ್ ಗುಂಜೆಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಮತದ ಆಸೆಗಾಗಿ ಅಭಿವೃದ್ಧಿ ಮಾಡಿಲ್ಲ: ಡಾ.ಅಶ್ವಥ್‌ನಾರಾಯಣ್

ಮಾಗಡಿ

ಕೇಂದ್ರ ಸರ್ಕಾರದ ಅನುದಾನವನ್ನು ಪ್ರವಾಸೋದ್ಯಮ ಇಲಾಖೆಯ ಮೂಲಕ ಪಡೆದು ನಾಡಪ್ರಭು ಕೆಂಪೇಗೌಡರ ಕಾಲದ ನವದುರ್ಗಗಳು ಹಾಗೂ ಕೆಂಪೇಗೌಡರ ಸಮಾಧಿ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕ ಡಾ. ಸಿ.ಎನ್. ಅಶ್ವಥ್ ನಾರಾಯಣ್ ಹೇಳಿದರು.

ತಾಲೂಕಿನ ಕೆಂಪಾಪುರದಲ್ಲಿರುವ ಕೆಂಪೇಗೌಡರ ಸಮಾಧಿಗೆ 517ನೇ ಜಯಂತಿ ಅಂಗವಾಗಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ಕೆಂಪೇಗೌಡರು ಯಾವುದೇ ಒಂದು ಸಮುದಾಯಕ್ಕೆ ಸೀಮಿತರಾಗದೆ ಎಲ್ಲ ವರ್ಗದ ಜನರಿಗೆ ಸಮಾನ ಅವಕಾಶ ಕಲ್ಪಿಸಿದ ಮಹಾನ್ ನಾಯಕರು ಎಂದು ಬಣ್ಣಿಸಿದರು. ಅವರ ದೂರದೃಷ್ಟಿಯ ಫಲವಾಗಿ ಬೆಂಗಳೂರು ಇಂದು ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ ಎಂದು ಹೇಳಿದರು.

ಕೆಂಪೇಗೌಡರ ಕಾಲದ ನವದುರ್ಗಗಳು ಹಾಗೂ ಐತಿಹಾಸಿಕ ಪರಂಪರೆಯ ಅಭಿವೃದ್ಧಿಗೆ ಕೇಂದ್ರ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಅನುದಾನ ತರುವ ಪ್ರಯತ್ನ ನಡೆಸುವುದಾಗಿ ತಿಳಿಸಿದರು.

ತಮ್ಮ ಸಚಿವರ ಅವಧಿಯಲ್ಲಿ ಮಾಗಡಿ ಕ್ಷೇತ್ರದಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿರುವುದಾಗಿ ಹೇಳಿದ ಅವರು, ಚಿಕ್ಕಕಲ್ಯದಲ್ಲಿ ಜಿಟಿಡಿಸಿ ಯೋಜನೆ, ಸಂಸ್ಕೃತ ವಿಶ್ವವಿದ್ಯಾಲಯ, ಜಲಜೀವನ್ ಮಿಷನ್ ಯೋಜನೆ, ಕಣ್ವ ಮಂಚನಬೆಲೆ ವೈಜಿಗುಡ್ಡ ಜಲಾಶಯಗಳಿಗೆ ಕಾವೇರಿ ನೀರು ಯೋಜನೆ ಹಾಗೂ ಹೇಮಾವತಿ ಪೈಪ್‌ಲೈನ್ ಕಾಮಗಾರಿಗೆ ಹೆಚ್ಚುವರಿ ಅನುದಾನ ಬಿಡುಗಡೆ ಸೇರಿದಂತೆ ಹಲವು



ಯೋಜನೆಗಳನ್ನು ಪೂರ್ಣಗೊಳಿಸಲಾಗಿದೆ ಎಂದು ವಿವರಿಸಿದರು.

ಕೆಂಪೇಗೌಡರ ಸಮಾಧಿ ಅಭಿವೃದ್ಧಿಗೆ ಬಿಜೆಪಿ ಸರ್ಕಾರ ದೊಡ್ಡ ಯೋಜನೆ ರೂಪಿಸಿತ್ತು. ಸ್ಥಳೀಯರ ಸಹಕಾರ ದೊರೆತಿದ್ದರೆ ಆಶ್ರಯ ಯೋಜನೆಯಡಿ ಮನೆ ನಿರ್ಮಾಣ ಸೇರಿದಂತೆ ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಪೂರ್ಣಗೊಳಿಸಬಹುದಾಗಿತ್ತು. ಪ್ರಸ್ತುತ ಸರ್ಕಾರದ ಯೋಜನೆಗಳ ಬಗ್ಗೆ ಸಂಪೂರ್ಣ ಮಾಹಿತಿ ಇಲ್ಲ. ಭವಿಷ್ಯದಲ್ಲಿ ಮತ್ತೊಮ್ಮೆ ಅವಕಾಶ ದೊರೆತರೆ ಸಮಾಧಿ ಅಭಿವೃದ್ಧಿ ಕಾರ್ಯವನ್ನು ಪೂರ್ಣಗೊಳಿಸುವ ವಿಶ್ವಾಸವಿದೆ ಎಂದು ಹೇಳಿದರು.

"ನಾನು ಮತಗಳ ಆಸೆಗಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಿಲ್ಲ. ಜನರ ಹಿತದೃಷ್ಟಿಯಿಂದ ಕೆಲಸ ಮಾಡಿದ್ದೇನೆ" ಎಂದು ಡಾ. ಅಶ್ವಥ್ ನಾರಾಯಣ್ ಹೇಳಿದರು.

ಕೆಂಪೇಗೌಡ ಅಭಿವೃದ್ಧಿ ಸಮಿತಿ ಅಧ್ಯಕ್ಷ ಎಚ್.ಎಂ. ಕೃಷ್ಣಮೂರ್ತಿ ಮಾತನಾಡಿ, ಕೆಂಪೇಗೌಡರ ಜಯಂತಿಯನ್ನು ರಾಜ್ಯಾದ್ಯಂತ ವಿಜೃಂಭಣೆಯಿಂದ ಆಚರಿಸಲಾಗುತ್ತಿದ್ದರೂ ಅವರ ಸಮಾಧಿ ಸ್ಥಳಕ್ಕೆ ಅಗತ್ಯ ಅಭಿವೃದ್ಧಿ ಸಿಕ್ಕಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ನಿರ್ಮಿಸಲಾದ ಬೃಹತ್ ಕೆಂಪೇಗೌಡರ ಪ್ರತಿಮೆ ಶ್ಲಾಘನೀಯ ಕಾರ್ಯವಾಗಿದ್ದು, ಅಭಿವೃದ್ಧಿ ಕಾರ್ಯ ಯಾರಿಂದ ನಡೆದರೂ ಬೆಂಬಲಿಸಬೇಕು ಎಂದು ಹೇಳಿದರು.

ಬಿಜೆಪಿ ತಾಲೂಕು ಅಧ್ಯಕ್ಷ ಪ್ರಸಾದ್‌ಗೌಡ ಮಾತನಾಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೆಂಪೇಗೌಡರ ಸಮಾಧಿ ಅಭಿವೃದ್ಧಿಗೆ ಮಹತ್ವಾಕಾಂಕ್ಷಿ ಯೋಜನೆ ರೂಪಿಸಲಾಗಿತ್ತು. ಮುಂದಿನ ದಿನಗಳಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೆ ಡಾ. ಅಶ್ವಥ್ ನಾರಾಯಣ್ ನೇತೃತ್ವದಲ್ಲಿ ಈ ಕಾಮಗಾರಿ ಪೂರ್ಣಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಚಿಕ್ಕಕಲ್ಯ ಶ್ರೀಧರ್, ಮಾಡಬಾಳ್ ಜಯರಾಂ, ದೊಡ್ಡಿ ಗೋಪಿ, ಎನ್‌ಇಎಸ್ ಆನಂದ್ ಸೇರಿದಂತೆ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಜಾಲಪ್ಪ ವಿದ್ಯಾಸಂಸ್ಥೆಯಲ್ಲಿ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ

ದೊಡ್ಡಬಳ್ಳಾಪುರ

ತಾಲೂಕಿನ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಆರ್.ಎಲ್. ಜಾಲಪ್ಪ ಪದವಿ ಪೂರ್ವ ಕಾಲೇಜಿನಲ್ಲಿ ವಿಶ್ವ ಮಾದಕ ವಸ್ತು ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಎಂ. ಕೃಷ್ಣಮೂರ್ತಿ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ವಿದ್ಯಾರ್ಥಿಗಳು ಯಾವುದೇ ರೀತಿಯ ವ್ಯಸನಗಳಿಗೆ ಒಳಗಾಗದೆ ಉತ್ತಮ ಶಿಕ್ಷಣ ಪಡೆದು ಪೋಷಕರು ಹಾಗೂ ಶಿಕ್ಷಣ ಸಂಸ್ಥೆಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು.

ಪ್ರಸ್ತಾವಿಕವಾಗಿ ಮಾತನಾಡಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಉಮರಬ್ಬ, ಇತ್ತೀಚಿನ ದಿನಗಳಲ್ಲಿ ಕೆಲವು ಶಾಲಾ-ಕಾಲೇಜುಗಳ ಸುತ್ತಮುತ್ತ ಡ್ರಗ್ಸ್, ತಂಬಾಕು, ಧೂಮಪಾನ ಹಾಗೂ ಇತರೆ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿರುವ ಬಗ್ಗೆ ಮಾಹಿತಿ ಲಭ್ಯವಾಗುತ್ತಿದೆ. ಇಂತಹ ವ್ಯಸನಗಳ ದುಷ್ಪರಿಣಾಮಗಳು ಮತ್ತು ಅವುಗಳಿಗೆ ಸಂಬಂಧಿಸಿದ ಕಾನೂನು ಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು



ಮೂಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಾಲಪ್ಪ ವಿದ್ಯಾಸಂಸ್ಥೆಯ ಉಪಾಧ್ಯಕ್ಷ ರಾಜೇಂದ್ರ ಮಾತನಾಡಿ, ತಾಲೂಕಿನಲ್ಲಿ ಶಾಲಾ-ಕಾಲೇಜುಗಳಲ್ಲಿ ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಉಮೇಶ್ ಭಾವಿಕಟ್ಟೆ ವಿದ್ಯಾರ್ಥಿಗಳಿಗೆ ಮಾದಕ ವ್ಯಸನದ ದುಷ್ಪರಿಣಾಮಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಯೋಜನಾಧಿಕಾರಿ ದಿನೇಶ್ ಎನ್.ಆರ್., ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ರಮೇಶ್, ವಾಣಿ, ಪುಷ್ಪಲತಾ, ಮಮತಾ, ವಲಯ ಮೇಲ್ವಿಚಾರಕರು ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದ ಅಂತ್ಯದಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳಿಂದ ದೂರವಿರುವ ಪ್ರತಿಜ್ಞಾವಿಧಿ ಬೋಧಿಸಲಾಯಿತು.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಆರಂಭ

ಶ್ರೀನಿವಾಸಪುರ

ಕೇಂದ್ರ ಚುನಾವಣಾ ಆಯೋಗದ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದಡಿ ನಿಖರ ಮತ್ತು ಶುದ್ಧ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಉದ್ದೇಶದಿಂದ ಗ್ರಾಮೀಣ ಮಟ್ಟದಲ್ಲಿ ಜಾಥಾ ಹಾಗೂ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಇಆರ್‌ಒ ಟಿ.ಕೆ. ರಮೇಶ್ ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ 2 ಲಕ್ಷಕ್ಕೂ ಹೆಚ್ಚು ಮತದಾರರಿದ್ದು, ಮಂಗಳವಾರದಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಮತದಾರರ ಮಾಹಿತಿ ಪರಿಶೀಲಿಸಲಿದ್ದಾರೆ. ಈ ಕಾರ್ಯಕ್ಕೆ ಸಾರ್ವಜನಿಕರು ಅಗತ್ಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಕರಡು ಮತದಾರರ ಪಟ್ಟಿಯನ್ನು ಆಗಸ್ಟ್ 5ರಂದು ಪ್ರಕಟಿಸಲಾಗುವುದು. ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಅಥವಾ ತಿದ್ದುಪಡಿಗಳಿಗೆ ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಇರುತ್ತದೆ. ಸಲ್ಲಿಕೆಯಾಗುವ ಆಕ್ಷೇಪಣೆಗಳ ವಿಲೇವಾರಿಯನ್ನು ಆಗಸ್ಟ್ 15ರಿಂದ ಅಕ್ಟೋಬರ್ 3ರವರೆಗೆ ನಡೆಸಲಾಗುವುದು. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7ರಂದು ಪ್ರಕಟಿಸಲಾಗುವುದು ಎಂದು ಮಾಹಿತಿ ನೀಡಿದರು.

ಕ್ಷೇತ್ರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ನಡೆಸಲು ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳ ಸಹಕಾರ ಪಡೆಯಲಾಗುತ್ತಿದೆ. ರಾಜಕೀಯ ಪಕ್ಷಗಳ ಏಜೆಂಟರು ಸಲ್ಲಿಸುವ ಆಕ್ಷೇಪಣೆಗಳನ್ನೂ ನಿಯಮಾನುಸಾರ ಪರಿಗಣಿಸಲಾಗುವುದು ಎಂದು ಟಿ.ಕೆ. ರಮೇಶ್ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಎಇಆರ್‌ಒ ಜಿ.ಎನ್. ಸುದೀಂದ್ರ, ಇಒ ಕೆ. ಸರ್ವೇಶ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಬ್ಯಾಟರಿ ಸ್ಪಾರ್ಕ್‌ನಿಂದ ಟಾಟಾ ಸುಮೋ ಹೊತ್ತಿ ಉರಿದು ಭಸ್ಮ

ದೊಡ್ಡಬಳ್ಳಾಪುರ

ತಾಲೂಕಿನ ಗೊಲ್ಲಹಳ್ಳಿ ಸಮೀಪದ ಯಲಹಂಕ ಹಿಂದೂಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಬ್ಯಾಟರಿಯಲ್ಲಿ ಉಂಟಾದ ಸ್ಪಾರ್ಕ್‌ನಿಂದ ಟಾಟಾ ಸುಮೋ ವಾಹನಕ್ಕೆ ಬೆಂಕಿ ಹೊತ್ತಿಕೊಂಡು ಸಂಪೂರ್ಣವಾಗಿ ಸುಟ್ಟುಹೋದ ಘಟನೆ ಮಂಗಳವಾರ ಮಧ್ಯಾಹ್ನ ನಡೆದಿದೆ.

ಮಧುಗಿರಿಯಿಂದ ಬೆಂಗಳೂರಿನ ಸಹಕಾರನಗರದ ಕಡೆಗೆ ಪ್ರಯಾಣಿಕರೊಂದಿಗೆ ತೆರಳುತ್ತಿದ್ದ ಟಾಟಾ ಸುಮೋದಲ್ಲಿ ಏಕಾಏಕಿ ಬ್ಯಾಟರಿಯಲ್ಲಿ ಸ್ಪಾರ್ಕ್ ಕಾಣಿಸಿಕೊಂಡಿದೆ. ಪರಿಸ್ಥಿತಿಯನ್ನು ಅರಿತ ಚಾಲಕ ತಕ್ಷಣ ವಾಹನವನ್ನು ರಸ್ತೆ ಬದಿಗೆ ನಿಲ್ಲಿಸಿ, ಎಲ್ಲ ಪ್ರಯಾಣಿಕರನ್ನು ಸುರಕ್ಷಿತವಾಗಿ ಕೆಳಗಿಳಿಸಿದ್ದಾನೆ.

ಕೆಲವೇ ಕ್ಷಣಗಳಲ್ಲಿ ಬೆಂಕಿ ಇಡೀ ವಾಹನವನ್ನು ಆವರಿಸಿಕೊಂಡು ಧಗಧಗನೆ ಉರಿಯತೊಡಗಿತು. ಮಾಹಿತಿ ತಿಳಿದ ತಕ್ಷಣ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿಯನ್ನು ನಂದಿಸಿದರೂ, ಅಷ್ಟರಲ್ಲಾಗಲೇ ವಾಹನ ಸಂಪೂರ್ಣ ಸುಟ್ಟು ಕರಕಲಾಗಿತ್ತು.

ಚಾಲಕನ ಸಮಯೋಚಿತ ಕ್ರಮದಿಂದ ಸಂಭವಿಸಬಹುದಾಗಿದ್ದ ಭಾರಿ ಪ್ರಾಣಾಪಾಯ ತಪ್ಪಿದ್ದು, ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಘಟನೆಯಿಂದ ಕೆಲಕಾಲ ಯಲಹಂಕ-ಹಿಂದೂಪುರ ಹೆದ್ದಾರಿಯಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು. ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿರುವ ಘಟನೆ ಕುರಿತು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಾಥಮಿಕ ಮಾಹಿತಿಯಂತೆ ಬ್ಯಾಟರಿಯಲ್ಲಿ ಉಂಟಾದ ಸ್ಪಾರ್ಕ್‌ನಿಂದಲೇ ಬೆಂಕಿ ಕಾಣಿಸಿಕೊಂಡಿದೆ ಎಂದು ತಿಳಿದುಬಂದಿದೆ.

# ಕೆಂಪೇಗೌಡರ ಪುತ್ಥಳಿ ನಿರ್ಮಾಣದಲ್ಲಿ ಯಾವುದೇ ಗೊಂದಲ ಇಲ್ಲ: ಪ್ರೇಮ್ ಕುಮಾರ್

ದೊಡ್ಡಬಳ್ಳಾಪುರ

ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಬ್ಯಾಂಕ್ ಸರ್ಕಲ್‌ನಲ್ಲಿ ಕೆಂಪೇಗೌಡರ ಕಂಚಿನ ಪುತ್ಥಳಿ ಸ್ಥಾಪನೆಗೆ ಸಂಬಂಧಿಸಿದಂತೆ ಉಂಟಾಗಿದ್ದ ಗೊಂದಲಗಳಿಗೆ ಪಟ್ಟಣ ಪಂಚಾಯಿತಿ ಅಧ್ಯಕ್ಷ ಪ್ರೇಮ್ ಕುಮಾರ್ ಸ್ಪಷ್ಟನೆ ನೀಡಿದ್ದಾರೆ.

ಸೋಮವಾರ ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 27ರಂದು ಶಾಸಕ ಧೀರಜ್ ಮುನಿರಾಜು ನೇತೃತ್ವದಲ್ಲಿ ನಡೆದ ಭೂಮಿಪೂಜೆ ಸಂಪೂರ್ಣ ಕಾನೂನುಬದ್ಧವಾಗಿದ್ದು, ಇದರಲ್ಲಿ ಯಾವುದೇ ರೀತಿಯ ಗೊಂದಲ ಅಥವಾ ನಿಯಮ ಉಲ್ಲಂಘನೆ ನಡೆದಿಲ್ಲ ಎಂದು ಹೇಳಿದರು.

ಫೆಬ್ರವರಿ 5ರಂದು ನಡೆದ ಪಟ್ಟಣ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ ಬ್ಯಾಂಕ್ ಸರ್ಕಲ್‌ನಲ್ಲಿ ಕೆಂಪೇಗೌಡರ ಕಂಚಿನ ಪುತ್ಥಳಿ ಸ್ಥಾಪಿಸುವ ಕುರಿತು ಸರ್ವಾನುಮತದ ನಿರ್ಣಯ ಕೈಗೊಳ್ಳಲಾಗಿತ್ತು. ಯೋಜನೆಯನ್ನು ಪಟ್ಟಣ ಪಂಚಾಯಿತಿ ಬಜೆಟ್‌ನಲ್ಲೂ ಸೇರಿಸಲಾಗಿದ್ದು, ತಾಂತ್ರಿಕ ಅನುಮೋದನೆ ಹಾಗೂ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಮೂರು ತಿಂಗಳೊಳಗೆ ಕಾಮಗಾರಿಯನ್ನು ಮುಗಿಸಲಾಗುವುದು ಎಂದು ತಿಳಿಸಿದರು.

ಶಾಸಕ ಧೀರಜ್ ಮುನಿರಾಜು ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಅಭಿವೃದ್ಧಿಪಡಿಸಲು ಶ್ರಮಿಸುತ್ತಿದ್ದು, ಅವರ ವಿರುದ್ಧ ಅನಗತ್ಯ ಅಪಪ್ರಚಾರ ನಡೆಸುವುದು ಸರಿಯಲ್ಲ ಎಂದು ಪ್ರೇಮ್ ಕುಮಾರ್ ಅಭಿಪ್ರಾಯಪಟ್ಟರು.

ಪಟ್ಟಣ ಪಂಚಾಯಿತಿ ಸ್ಥಾಯಿ ಸಮಿತಿ ಅಧ್ಯಕ್ಷ ನಾರಾಯಣಸ್ವಾಮಿ ಮಾತನಾಡಿ, ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ಪಡೆದ ಸಂಸ್ಥೆಯಾಗಿದ್ದು, ಫೆಬ್ರವರಿಯ ಮೊದಲ ಸಾಮಾನ್ಯ ಸಭೆಯಲ್ಲೇ ಕೆಂಪೇಗೌಡರ ಪುತ್ಥಳಿ ನಿರ್ಮಾಣಕ್ಕೆ ಎಲ್ಲ ಸದಸ್ಯರು ಸರ್ವಾನುಮತದಿಂದ ಒಪ್ಪಿಗೆ ನೀಡಿದ್ದರು. ಕಾಮಗಾರಿಗೆ ಅಗತ್ಯ ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿರಿಸಲಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಉಪಾಧ್ಯಕ್ಷೆ ಶ್ವೇತಾ ಮುರಳೀಧರ್, ಸದಸ್ಯರಾದ ಕೃಷ್ಣಪ್ಪ, ಮುನಿಶಂಕರ್, ರಾಧಾಮಣಿ, ಅಂಬುಕಾಕ್ಷಿ, ನೇತ್ರ ಮಧುಕುಮಾರ್, ರಾಮಮೂರ್ತಿ ಹಾಗೂ ಮುಖಂಡ ಬಿ. ಆನಂದ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಗಲಕೋಟೆ ಭೂ ವಿವಾದ: ಪೊಲೀಸ್ ಭದ್ರತೆಯಲ್ಲಿ ಸರ್ವೆಕಾರ್ಯ

ಮಾಲೂರು

ತಾಲೂಕಿನ ಟೇಕಲ್ ಹೋಬಳಿಯ ಅಗಲಕೋಟೆ ಗ್ರಾಮದ ಭೂ ವಿವಾದಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತದ ಆದೇಶದ ಮೇರೆಗೆ ಸೋಮವಾರ ತಹಶೀಲ್ದಾರ್ ಎಂ.ವಿ. ರೂಪ ಅವರ ನೇತೃತ್ವದಲ್ಲಿ ಪೊಲೀಸ್ ಭದ್ರತೆಯೊಂದಿಗೆ ಭೂಮಾಪನ ಇಲಾಖೆ ಸರ್ವೆ ಕಾರ್ಯ ಆರಂಭಿಸಿತು.

ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಅವರು, ಸರ್ಕಾರಿ ಗೋಮಾಳ ಹಾಗೂ ದಾನಿಗಳು ಶಿಕ್ಷಣ ಇಲಾಖೆಗೆ ನೀಡಿದ್ದ ಜಮೀನನ್ನು ಅಕ್ರಮವಾಗಿ ಕಬಳಿಸಲಾಗಿದೆ ಎಂದು ಆರೋಪಿಸಿ ಜಿಲ್ಲಾಧಿಕಾರಿ ಹಾಗೂ ಉಪ ವಿಭಾಗಾಧಿಕಾರಿಗಳಿಗೆ ದೂರು ಸಲ್ಲಿಸಿದ್ದರು. ಈ ದೂರಿನ ಮೇರೆಗೆ ಸರ್ವೆ ಕಾರ್ಯ ಕೈಗೊಳ್ಳಲಾಗಿದೆ.

ಅಗಲಕೋಟೆ ಗ್ರಾಮದ ಬಳಿ ದಾನಿಗಳು ಶಿಕ್ಷಣ ಇಲಾಖೆಗೆ ನೀಡಿದ್ದ ಜಮೀನಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಪರಭಾರೆ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿದೆ. ಅಲ್ಲದೆ, ಸರ್ಕಾರಿ ಗೋಮಾಳ, ರಾಜಕಾಲುವೆ, ಕೆರೆ



ನಕಾಶೆ, ಸಾರ್ವಜನಿಕ ರಸ್ತೆ ಹಾಗೂ ಸರ್ಕಾರಿ ಶಾಲೆಗೆ ಸಂಬಂಧಿಸಿದ ಜಾಗವನ್ನೂ ನಕಲಿ ದಾಖಲೆಗಳ ಮೂಲಕ ಖಾಸಗಿ ಸ್ವಾಧೀನಕ್ಕೆ ತೆಗೆದುಕೊಳ್ಳಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಭೂ ವಿವಾದದ ಹಿನ್ನೆಲೆಯಲ್ಲಿ ವಿವಾದಿತ ಜಾಗಕ್ಕೆ ಪ್ರವೇಶಿಸಿದ್ದ ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ, ಬಿಜೆಪಿ ತಾಲೂಕು ಅಧ್ಯಕ್ಷ ಟಿ.ಬಿ. ಕೃಷ್ಣಪ್ಪ ಸೇರಿದಂತೆ ಇತರರ ವಿರುದ್ಧ ಜಮೀನು ಖರೀದಿಸಿರುವ ಕಂಪನಿ ಹಾಗೂ ಜೆಡಿಎಸ್ ಮುಖಂಡ ಹೂಡಿ ವಿಜಯಕುಮಾರ್ ಅವರು ಮಾಸ್ತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು.

ಪ್ರಕರಣ ಗಂಭೀರ ಸ್ವರೂಪ ಪಡೆದಿರುವ ಹಿನ್ನೆಲೆಯಲ್ಲಿ ಡಿವೈಎಸ್ಪಿ ವಿ. ಕೃಷ್ಣ ನೇತೃತ್ವದಲ್ಲಿ ಪೊಲೀಸ್ ಬಂದೋಬಸ್ತು ಕಲ್ಪಿಸಿ ಭೂಮಾಪನ ಇಲಾಖೆ ಅಧಿಕಾರಿಗಳು ಸ್ಥಳದಲ್ಲಿ ಸರ್ವೆ ಕಾರ್ಯ ನಡೆಸಿದರು. ತಹಶೀಲ್ದಾರ್ ಎಂ.ವಿ. ರೂಪ ಮಾತನಾಡಿ, ಜಿಲ್ಲಾ ಉಪ ವಿಭಾಗಾಧಿಕಾರಿಗಳ ನಿರ್ದೇಶನದಂತೆ ಸರ್ವೆ ಕಾರ್ಯ ಕೈಗೊಳ್ಳಲಾಗಿದೆ. ಸರ್ವೆ ಪೂರ್ಣಗೊಂಡ ಬಳಿಕ ವರದಿ ಹಾಗೂ ದಾಖಲೆಗಳನ್ನು ಜಿಲ್ಲಾ ಉಪ ವಿಭಾಗಾಧಿಕಾರಿಗಳಿಗೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

03/07/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ



ತುಮಕೂರು

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ–2026 ಪ್ರಕ್ರಿಯೆಯನ್ನು ತುಮಕೂರು ಜಿಲ್ಲೆಯಲ್ಲಿ ಅಧಿಕೃತವಾಗಿ ಆರಂಭಿಸಲಾಗಿದ್ದು, ಮತಗಟ್ಟೆ ಅಧಿಕಾರಿಗಳು ಮಂಗಳವಾರ ಜಿಲ್ಲೆಯಾದ್ಯಂತ ಮನೆ–ಮನೆಗಳಿಗೆ ಭೇಟಿ ನೀಡಿ ಮತದಾರರ ಗಣತಿ ನಮೂನೆಯನ್ನು ವಿತರಿಸುವ ಪ್ರಕ್ರಿಯೆ ನಡೆಯಿತು.

ತುಮಕೂರು ನಗರದ ನಜ಼ರಾಬಾದ್ ಪ್ರದೇಶದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಖುದ್ದು ಮನೆ ಭೇಟಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮತದಾರರಿಗೆ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಯ ಮಹತ್ವ ಮತ್ತು ಮತದಾರರು ಮಾಡಬೇಕಿರುವ ಜವಾಬ್ದಾರಿಯ ಬಗ್ಗೆ ವಿವರಣೆ ನೀಡಿದರು.

ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಆರಂಭವಾಗಿದ್ದು, ತುಮಕೂರು ಜಿಲ್ಲೆಯಾದ್ಯಂತ ಜೂನ್ 30 ರಿಂದ ಜುಲೈ 29ರವರೆಗೆ ಮತಗಟ್ಟೆ ಅಧಿಕಾರಿಗಳು ಮನೆ–ಮನೆಗೆ ಭೇಟಿ ನೀಡಿ ಮತದಾರರ ಗಣತಿ ನಮೂನೆಯನ್ನು ವಿತರಿಸಲಿದ್ದಾರೆ ಎಂದರು.

ಗಣತಿ ನಮೂನೆಯಲ್ಲಿ 2 ಭಾಗಗಳಿದ್ದು, ಮತದಾರರು ಭಾಗ 1ರಲ್ಲಿ ಈಗಾಗಲೇ 2002ರ ಮತದಾರರ ಪಟ್ಟಿಯಲ್ಲಿ ಇರುವಂತೆ ಮುದ್ರಿಸಲಾಗಿರುತ್ತದೆ. ಭಾಗ 2ರಲ್ಲಿ ಮತದಾರರ ಪಟ್ಟಿಯಲ್ಲಿರುವಂತೆ ವಿವರಗಳನ್ನು ತುಂಬಬೇಕಿದ್ದು, ಸರಿಯಾದ ಮಾಹಿತಿಯನ್ನು ನಮೂದಿಸಿ ನೀಡಿರುವ ಮಾಹಿತಿ ಸತ್ಯವಾಗಿದೆ ಎಂದು ಪ್ರಮಾಣೀಕರಿಸಿ ಸಹಿಯೊಂದಿಗೆ ನಮೂನೆಯನ್ನು ಮತಗಟ್ಟೆ ಅಧಿಕಾರಿಗಳು ಸಂಗ್ರಹಿಸುವ ಸಂದರ್ಭದಲ್ಲಿ ತಪ್ಪದೇ ಹಿಂದಿರುಗಿಸಬೇಕು. ಇಲ್ಲವಾದರೆ ಪರಿಷ್ಕೃತ ಮತದಾರರ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗುವ ಸಾಧ್ಯತೆ ಇರುತ್ತದೆ ಎಂದು ಅವರು ಮಾಹಿತಿ ನೀಡಿದರು.

ಸಮಗ್ರ ಪರಿಷ್ಕರಣೆ ಸಂದರ್ಭದಲ್ಲಿ ಮತಗಟ್ಟೆ ಅಧಿಕಾರಿಗಳು ಪ್ರತಿ ಮನೆ–ಮನೆಗೆ ತೆರಳಿ ನಮೂನೆ ಭರ್ತಿ ಮಾಡಿಸಿಕೊಳ್ಳುವ ಪ್ರಕ್ರಿಯೆ ನಡೆಯುವುದರಿಂದ ಪ್ರತಿಯೊಬ್ಬ ಮತದಾರರೂ ಈ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಮತಗಟ್ಟೆ ಅಧಿಕಾರಿಗಳು 2–3 ಬಾರಿ ಮನೆಗಳಿಗೆ ಭೇಟಿ ಸಂದರ್ಭದಲ್ಲೂ ಮನೆ ಬಾಗಿಲು ಮುಚ್ಚಿರುವುದು ಕಂಡು ಬಂದಲ್ಲಿ ಅದನ್ನು ಬೀಗ ಹಾಕಲಾಗಿದೆ ಎಂದು ನಮೂದಿಸುವರು. ಮತದಾರರ ಪಟ್ಟಿಯ ನಮೂನೆ ಭರ್ತಿ ಮಾಡಿ ಹಿಂದಿರುಗಿಸಿದ ಮನೆಗಳಿಗೆ ಪರಿಶೀಲನೆಯಾಗಿದೆ ಎಂದು ಸ್ಟಿಕರ್ ಅಂಟಿಸಲಾಗುವುದು ಎಂದು ಅವರು ತಿಳಿಸಿದರು.

2002ರ ಮತದಾರರ ಪಟ್ಟಿಯಂತೆ ಈಗಾಗಲೇ ಮತದಾರರ ವಿವರಗಳನ್ನು ಮ್ಯಾಪಿಂಗ್ ಮಾಡಲಾಗಿದ್ದು, ಶೇ.98ರಷ್ಟು ಮತದಾರರ ಪಟ್ಟಿ ಮ್ಯಾಪಿಂಗ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಜಿಲ್ಲೆಯಲ್ಲಿ ಸುಮಾರು 22ಲಕ್ಷ ಮತದಾರರಿದ್ದಾರೆ. ಈಗಾಗಲೇ ಎಲ್ಲಾ ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಪರಿಷ್ಕರಣೆ ಪರಿಶೀಲನೆ ಸಂದರ್ಭದಲ್ಲಿ ನೀಡಬೇಕಿರುವ 12 ದಾಖಲೆಗಳನ್ನು ಈ ಸಂದರ್ಭದಲ್ಲಿ ನೀಡುವ ಅವಶ್ಯಕತೆ ಇರುವುದಿಲ್ಲವೆಂದು ಅವರು ತಿಳಿಸಿದರು.

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಇದೊಂದು ಪವಿತ್ರವಾದ ಮತ್ತು ಸದೃಢ ಪ್ರಜಾಪ್ರಭುತ್ವ ವ್ಯವಸ್ಥೆಯ ಪರಿಪೂರ್ಣ ಕೆಲಸವಾಗಿದ್ದು, ಸಾರ್ವಜನಿಕರು ಯಾವುದೇ ಗೊಂದಲಗಳಿಲ್ಲದೆ ಈ ಪ್ರಕ್ರಿಯೆಯಲ್ಲಿ ಭಾಗವಹಿಸಿ ದೇಶದ ಸಮಗ್ರತೆಯನ್ನು ಎತ್ತಿಹಿಡಿಯಬೇಕು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮಹಾನಗರಪಾಲಿಕೆಯ ಆಯುಕ್ತೆ ಬಿ. ಶುಭ, ಚುನಾವಣಾ ತಹಶೀಲ್ದಾರ್ ನಾಗಭೂಷಣ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ತಿಪಟೂರಿನಲ್ಲಿ ಯಶಸ್ವಿಯಾಗಿ ಪ್ರದರ್ಶನ ಕಂಡ 'ಒಡಲಾಳ' ನಾಟಕ

ತಿಪಟೂರು

ನಗರದ ಕಲ್ಪತರು ಆಡಿಟೋರಿಯಂ ಸಭಾಂಗಣದಲ್ಲಿ ಹಳ್ಳಿ ಥಿಯೇಟರ್ ಆಯೋಜಿಸಿದ್ದ ಸಾಹಿತಿ ದೇವನೂರು ಮಹಾದೇವ ಅವರ ಪ್ರಸಿದ್ಧ ಕೃತಿ ಆಧಾರಿತ 'ಒಡಲಾಳ' ನಾಟಕ ಪ್ರದರ್ಶನ ಯಶಸ್ವಿಯಾಗಿ ನಡೆಯಿತು. ಮಹಾರಂಗ ಸಾಂಸ್ಕೃತಿಕ ವೇದಿಕೆ ಮಟ್ಟನವಿಲೆಯ ಮಕ್ಕಳು ಅಭಿನಯಿಸಿದ ಈ ನಾಟಕವನ್ನು ನವೀನ್ ಭೂಮಿ ನಿರ್ದೇಶಿಸಿದ್ದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಮಕ್ಕಳ ಸಾಹಿತಿ ಹಾಗೂ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಟಿ.ಎಸ್. ನಾಗರಾಜ ಶೆಟ್ಟಿ, ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಮತ್ತು ಸಾಮಾಜಿಕ ಸಂವೇದನೆ ಬೆಳೆಸುವಲ್ಲಿ ಇಂತಹ ನಾಟಕಗಳ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಪ್ರಸ್ತುತ ಸಮಾಜದಲ್ಲಿ ಮಕ್ಕಳ ಮಾನಸಿಕ ಬೆಳವಣಿಗೆ ಮತ್ತು ಸಾಮಾಜಿಕ ಕಳಕಳಿಗೆ ಸಂಬಂಧಿಸಿದ ಅನೇಕ ಪ್ರಶ್ನೆಗಳನ್ನು ನಾಟಕ ಪರಿಣಾಮಕಾರಿಯಾಗಿ ಪ್ರಸ್ತುತಪಡಿಸಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಾರಂಗ ವೇದಿಕೆಯ ಮಕ್ಕಳು ತಮ್ಮ ವಯಸ್ಸಿಗೆ ಮೀರಿದ ಪಾತ್ರಗಳಲ್ಲಿ ಅಭಿನಯಿಸಿ ಪ್ರೌಢತೆ ಪ್ರದರ್ಶಿಸಿದ್ದು, ಪ್ರೇಕ್ಷಕರ ಮನಸ್ಸಿನಲ್ಲಿ ಅಚ್ಚಳಿಯದ ಛಾಪು ಮೂಡಿಸಿದ್ದಾರೆ ಎಂದು ಹೇಳಿದರು.

ಮೈಸೂರು ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು ಮಾತನಾಡಿ, ನವೀನ್ ಭೂಮಿ ನಿರ್ದೇಶನದ ಈ ನಾಟಕ ಅಂತರ ಕಾಲೇಜು ನಾಟಕ ಸ್ಪರ್ಧೆಗಳಲ್ಲಿ ಹಲವು ಪ್ರಶಸ್ತಿಗಳನ್ನು ಪಡೆದಿದ್ದು, ಸಾಮಾಜಿಕ ಕಾಳಜಿ ಮತ್ತು ಮಾನವೀಯ ಮೌಲ್ಯಗಳನ್ನು ಪರಿಣಾಮಕಾರಿಯಾಗಿ ಬಿಂಬಿಸುವ ಕೃತಿಯಾಗಿದೆ ಎಂದು ತಿಳಿಸಿದರು.

1978ರಲ್ಲಿ ಪ್ರಕಟವಾದ ದೇವನೂರು ಮಹಾದೇವರ 'ಒಡಲಾಳ' ಕೃತಿ ದಲಿತರ ಬದುಕು, ಸಂವೇದನೆ ಹಾಗೂ ಆರ್ಥಿಕ ಸಂಕಷ್ಟಗಳನ್ನು ಅತ್ಯಂತ ನೈಜವಾಗಿ ಚಿತ್ರಿಸುವ ಕನ್ನಡ ಸಾಹಿತ್ಯದ ಮಹತ್ವದ ಕೃತಿಗಳಲ್ಲೊಂದು. ಕಥೆಯ ಕೇಂದ್ರಬಿಂದುವಾಗಿರುವ ಸಾಕವ್ವ ಪಾತ್ರದ ಮೂಲಕ ಬಡತನ, ಹಸಿವು, ತಾಯ್ತನ ಮತ್ತು ಸಾಮಾಜಿಕ ಅಸಮಾನತೆಯ ನೋವನ್ನು ಮನಮುಟ್ಟುವಂತೆ ಬಿಂಬಿಸಲಾಗಿದೆ.

ಒಂದು ಹೊತ್ತಿನ ಊಟಕ್ಕೂ ಪರದಾಡುವ ಕುಟುಂಬದ ಬದುಕನ್ನು ಚಿತ್ರಿಸುವ ಈ ಕೃತಿ ಕೇವಲ ಒಂದು ಕುಟುಂಬದ ಕಥೆಯಾಗಿರದೆ, ಸಮುದಾಯದ ಸಮಗ್ರ ನೋವು ಮತ್ತು ಬದುಕಿನ ಹೋರಾಟದ ಪ್ರತೀಕವಾಗಿದೆ. ಈ ಕೃತಿಗೆ 1987ರ ಭಾರತೀಯ ಭಾಷಾ ಪರಿಷತ್ ಪ್ರಶಸ್ತಿ ಲಭಿಸಿದೆ.

ನಾಟಕದಲ್ಲಿ ಅಭಿನಯಿಸಿದ ಮಹಾರಂಗ ಸಾಂಸ್ಕೃತಿಕ ವೇದಿಕೆಯ ಮಕ್ಕಳು ತಮ್ಮ ಸಹಜ ಅಭಿನಯ ಮತ್ತು ಭಾವಪೂರ್ಣ ನಿರೂಪಣೆಯ ಮೂಲಕ ಪ್ರೇಕ್ಷಕರ ಮನಸೂರೆಗೊಂಡರು. ಕಾರ್ಯಕ್ರಮದಲ್ಲಿ ನಿರ್ದೇಶಕ ನವೀನ್ ಭೂಮಿ, ಮಮತಾ ರವಿ, ಕೃಷ್ಣ, ರೂಪ ಸತೀಶ್ ಸೇರಿದಂತೆ ವಿವಿಧ ಪ್ರಗತಿಪರ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು, ಹಳ್ಳಿ ಥಿಯೇಟರ್, ಭೂಪ್ರಿಯ ಸೂರು, ಜನಸ್ಪಂದನ ಟ್ರಸ್ಟ್, ಕಲಾಕೃತಿ, ಡಾ. ಸತ್ಯಕುಮಾರ್ ರಿಲೀಫ್ ಫೌಂಡೇಶನ್, ಕ್ಲಾಸಿ ದಿವಾಸ್, ಲಯನ್ಸ್ ಕ್ಲಬ್, ರೋಟರಿ ಕ್ಲಬ್‌ನ ಪದಾಧಿಕಾರಿಗಳು, ಸದಸ್ಯರು ಹಾಗೂ ರಂಗಭೂಮಿ ಅಭಿಮಾನಿಗಳು ಉಪಸ್ಥಿತರಿದ್ದರು.

## ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ

# 'ವಾರ್ತಾಲಾಪ' ಕಾರ್ಯಾಗಾರ

ಕೋಲಾರ

ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳ ಕುರಿತು ಮಾಧ್ಯಮ ಪ್ರತಿನಿಧಿಗಳಿಗೆ ಸಮಗ್ರ ಮಾಹಿತಿ ನೀಡುವ ಉದ್ದೇಶದಿಂದ ಭಾರತ ಸರ್ಕಾರದ ವಾರ್ತಾ ಶಾಖೆ (ಪಿಐಬಿ) ಬೆಂಗಳೂರು, ಕೋಲಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಜುಲೈ 2ರಂದು ಕೋಲಾರ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ 'ವಾರ್ತಾಲಾಪ' ಕಾರ್ಯಾಗಾರ ಆಯೋಜಿಸಲಾಗಿದೆ.

ಗುರುವಾರ ಬೆಳಗ್ಗೆ 10.30ಕ್ಕೆ ನಡೆಯಲಿರುವ ಕಾರ್ಯಕ್ರಮವನ್ನು ಕೋಲಾರ ಲೋಕಸಭಾ ಕ್ಷೇತ್ರದ ಸಂಸದ ಎಂ. ಮಲ್ಲೇಶಬಾಬು ಉದ್ಘಾಟಿಸಲಿದ್ದು, ಕೋಲಾರ ಶಾಸಕ ಡಾ. ಕೊತ್ತೂರು ಜಿ. ಮಂಜುನಾಥ್ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

> ಬೆಳಗ್ಗೆ 10.30ಕ್ಕೆ ನಡೆಯಲಿರುವ ಕಾರ್ಯಕ್ರಮವನ್ನು ಕೋಲಾರ ಲೋಕಸಭಾ ಕ್ಷೇತ್ರದ ಸಂಸದ ಎಂ. ಮಲ್ಲೇಶಬಾಬು ಉದ್ಘಾಟಿಸಲಿದ್ದು, ಕೋಲಾರ ಶಾಸಕ ಡಾ. ಕೊತ್ತೂರು ಜಿ.ಮಂಜುನಾಥ್ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಕೇಂದ್ರ ಸರ್ಕಾರದ ಆಡಳಿತದ 12ನೇ ವರ್ಷದ ವಿಶೇಷ ಅಭಿಯಾನದ ಅಂಗವಾಗಿ ಆಯೋಜಿಸಿರುವ ಈ ಕಾರ್ಯಾಗಾರದಲ್ಲಿ ವಿವಿಧ ಇಲಾಖೆಗಳ ಪ್ರಮುಖ ಯೋಜನೆಗಳು ಮತ್ತು ಸಾಧನೆಗಳ ಕುರಿತು ತಜ್ಞರು ಮಾಹಿತಿ ನೀಡಲಿದ್ದಾರೆ.

'ಸಮೃದ್ಧ ರಾಷ್ಟ್ರಕ್ಕಾಗಿ ರೈತ ಕಾರ್ಯಕ್ರಮಗಳು' ವಿಷಯದ ಕುರಿತು ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಡಾ. ಮಂಜುಳಾ ಎಂ.ಎನ್. ಉಪನ್ಯಾಸ ನೀಡಲಿದ್ದಾರೆ. ಮಹಿಳಾ ಸಶಕ್ತೀಕರಣ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಎನ್. ನಾರಾಯಣಸ್ವಾಮಿ, ಆರ್ಥಿಕ ಸೇರ್ಪಡೆ ಕುರಿತು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ಆರ್. ಶಿವಕುಮಾರ್, ಹಾಗೂ ಯುವ ಶಕ್ತಿಗೆ ಪ್ರೋತ್ಸಾಹ ವಿಷಯದ ಕುರಿತು ಯುವಜನ ಮತ್ತು ಕ್ರೀಡಾ ಸಚಿವಾಲಯದ ಮೈ ಭಾರತ್ ಜಿಲ್ಲಾ ಯುವ ಅಧಿಕಾರಿ ಎ. ಮಹೇಂದ್ರ ರೆಡ್ಡಿ ಮಾಹಿತಿ ಹಂಚಿಕೊಳ್ಳಲಿದ್ದಾರೆ.

ಕೇಂದ್ರ ಸರ್ಕಾರದ ವಿವಿಧ ಕಲ್ಯಾಣ ಕಾರ್ಯಕ್ರಮಗಳು, ಅಭಿವೃದ್ಧಿ ಯೋಜನೆಗಳು ಹಾಗೂ ಜನಸಾಮಾನ್ಯರಿಗೆ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ ಮಾಧ್ಯಮ ಪ್ರತಿನಿಧಿಗಳಿಗೆ ನೇರ ಮಾಹಿತಿ ನೀಡುವ ಉದ್ದೇಶದಿಂದ ಈ ವಿಶೇಷ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಜಿಲ್ಲೆಯ ಮುದ್ರಣ, ದೃಶ್ಯ ಹಾಗೂ ಡಿಜಿಟಲ್ ಮಾಧ್ಯಮ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆಯುವಂತೆ ಆಯೋಜಕರು ಮನವಿ ಮಾಡಿದ್ದಾರೆ.

# 'ಮಹಿಳೆಯರಿಗಾಗಿ ವಿಶೇಷ ವಾಹನ ಚಾಲನಾ ತರಬೇತಿ ಸಂಸ್ಥೆ ಸ್ಥಾಪನೆ'

ಬೆಂಗಳೂರು

ಮಹಿಳೆಯರನ್ನು ಆರ್ಥಿಕವಾಗಿ ಸ್ವಾವಲಂಬಿಗಳನ್ನಾಗಿ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆಯೊಂದನ್ನು ಇಟ್ಟಿದ್ದು, ಮಹಿಳೆಯರಿಗಾಗಿಯೇ ವಿಶೇಷ ವಾಹನ ಚಾಲನಾ ತರಬೇತಿ ಸಂಸ್ಥೆ ಆರಂಭಿಸಲು ಮುಂದಾಗಿದೆ.



ಬುಧವಾರ ಬೆಂಗಳೂರಿನಲ್ಲಿ ಸಾರಿಗೆ ಇಲಾಖೆ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯ ಬಳಿಕ ಮಾತನಾಡಿದ ಸಾರಿಗೆ ಸಚಿವ ಬೈರತಿ ಸುರೇಶ್, ರಾಮನಗರ ಜಿಲ್ಲೆಯ ಬಿಡದಿ ಕೈಗಾರಿಕಾ ಪ್ರದೇಶದಲ್ಲಿ ಮಹಿಳೆಯರಿಗಾಗಿ ಪ್ರತ್ಯೇಕ ವಾಹನ ಚಾಲನಾ ತರಬೇತಿ ಕೇಂದ್ರ, ಚಾಲನಾ ಟ್ರ್ಯಾಕ್ ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ನಿರ್ಮಿಸಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಭಾಗಿತ್ವದಲ್ಲಿ ಈ ಯೋಜನೆ ಜಾರಿಗೊಳ್ಳಲಿದ್ದು, ಮಹಿಳಾ ಸ್ವಯಂಸೇವಾ ಸಂಸ್ಥೆಯಾದ ಅವೇಕ್ ಮಹಿಳೆಯರಿಗೆ ವಾಹನ ಚಾಲನೆ ಸೇರಿದಂತೆ ವಿವಿಧ ಕೌಶಲ್ಯಾಧಾರಿತ ತರಬೇತಿಗಳನ್ನು ನೀಡಲಿದೆ ಎಂದು ಹೇಳಿದರು. ಈ ಯೋಜನೆಯಿಂದ ಮಹಿಳೆಯರಿಗೆ ಉದ್ಯೋಗಾವಕಾಶಗಳು ಹೆಚ್ಚುವುದರ ಜೊತೆಗೆ ಸ್ವಾವಲಂಬಿ ಜೀವನ ನಡೆಸಲು ನೆರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಪ್ರಸ್ತುತ ಸಾರಿಗೆ ಆಯುಕ್ತಾಲಯವು ಬೆಂಗಳೂರಿನ ಶಾಂತಿನಗರದಲ್ಲಿರುವ ಬಿಎಂಟಿಸಿ ಕಟ್ಟಡದಲ್ಲಿ ಬಾಡಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ಹಿನ್ನೆಲೆಯಲ್ಲಿ ಸಾರಿಗೆ ಇಲಾಖೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಕುರಿತು ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಸಲಾಯಿತು.

ಶಾಂತಿನಗರದಲ್ಲಿ ಕೆಎಸ್ಆರ್‌ಟಿಸಿಗೆ ಸೇರಿದ ಸುಮಾರು ಒಂದು ಎಕರೆ ಪ್ರದೇಶದಲ್ಲಿ ಸಾರಿಗೆ ಭವನ ನಿರ್ಮಿಸುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸಚಿವರು ಸೂಚನೆ ನೀಡಿದರು. ಸರ್ಕಾರಕ್ಕೆ ಹೆಚ್ಚುವರಿ ಆರ್ಥಿಕ ಹೊರೆ ಆಗದಂತೆ ಇಲಾಖೆಯ ಸಂಪನ್ಮೂಲಗಳನ್ನೇ ಬಳಸಿಕೊಂಡು ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆಯನ್ನು ಸಿದ್ಧಪಡಿಸುವಂತೆ ನಿರ್ದೇಶನ ನೀಡಿದರು.

ಸಾರಿಗೆ ಭವನ ನಿರ್ಮಾಣವಾದ ನಂತರ ಸಾರಿಗೆ ಆಯುಕ್ತಾಲಯದ ವಿವಿಧ ಕಚೇರಿಗಳನ್ನು ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುವಂತೆ ಮಾಡುವ ಉದ್ದೇಶವಿದೆ ಎಂದು ತಿಳಿಸಿದರು.

ಸಭೆಯಲ್ಲಿ ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ 150ಕ್ಕೂ ಹೆಚ್ಚು ಸಾರಿಗೆ ನಿರೀಕ್ಷಕರ (ಇನ್‌ಸ್ಪೆಕ್ಟರ್) ಹುದ್ದೆಗಳು ಸೇರಿದಂತೆ ಇತರೆ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರ ಆರಂಭಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಸಾರಿಗೆ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್, ಸಾರಿಗೆ ಆಯುಕ್ತ ಸೆಲ್ವಮಣಿ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಮಹಿಳಾ ಸಬಲೀಕರಣ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಇಲಾಖೆಯ ಆಡಳಿತಾತ್ಮಕ ಬಲವರ್ಧನೆಗೆ ಸಂಬಂಧಿಸಿದ ಹಲವು ಮಹತ್ವದ ನಿರ್ಧಾರಗಳು ಸಭೆಯಲ್ಲಿ ಚರ್ಚೆಗೆ ಬಂದವು.

# ನಿವೇಶನ ರಹಿತರಿಗೆ 5 ಎಕರೆ ಭೂಮಿ

ಬೇತಮಂಗಲ

ತಾಲ್ಲೂಕಿನ ಟಿ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಐಸಂದ್ರ ಮಿಟ್ಟೂರು ಗ್ರಾಮದ ನಿವೇಶನ ರಹಿತ ಕುಟುಂಬಗಳಿಗೆ ನಿವೇಶನ ಒದಗಿಸುವ ಸಂಬಂಧ ಕಳೆದ ಒಂಬತ್ತು ತಿಂಗಳಿನಿಂದ ನಡೆಯುತ್ತಿದ್ದ ಹೋರಾಟಕ್ಕೆ ಮಹತ್ವದ ಯಶಸ್ಸು ದೊರೆತಿದ್ದು, ಕಂದಾಯ ಇಲಾಖೆ ಸುಮಾರು 5 ಎಕರೆ ಬಂಜರು ಭೂಮಿಯನ್ನು ಗುರುತಿಸಿದೆ.



ಈ ಕುರಿತು ಮಾತನಾಡಿದ ಡಾ. ಬಿ.ಆರ್. ಅಂಬೇಡ್ಕರ್ ಯುವ ವೇದಿಕೆ ಕರ್ನಾಟಕ (ಎವೈವಿಕೆ) ಸಂಘಟನೆಯ ಅಧ್ಯಕ್ಷ ಜೈಭೀಮ್ ಶ್ರೀನಿವಾಸ್, ಗ್ರಾಮದ ನಿವೇಶನ ರಹಿತ ಕುಟುಂಬಗಳಿಗೆ ಜಾಗ ಗುರುತಿಸುವ ಉದ್ದೇಶದಿಂದ ಕಂದಾಯ ಇಲಾಖೆಯ ಅಧಿಕಾರಿಗಳು ಈ ಹಿಂದೆ ಮೂರು ಬಾರಿ ಸರ್ವೇ ಕಾರ್ಯಕ್ಕೆ ಮುಂದಾಗಿದ್ದರು. ಆದರೆ ಗುರುತಿಸಲಾದ ಸರ್ವೇ ಸಂಖ್ಯೆ ಅರಣ್ಯ ಇಲಾಖೆಗೆ ಸೇರಿದ ಪ್ರದೇಶವಾಗಿದ್ದರಿಂದ ಸರ್ವೇ ಕಾರ್ಯ ರದ್ದುಗೊಂಡಿತ್ತು ಎಂದು ತಿಳಿಸಿದರು.

ಆ ಸಂದರ್ಭದಲ್ಲಿ ತಹಸೀಲ್ದಾರ್ ಭರತ್ ಅವರು ನಿವೇಶನ ರಹಿತರಿಗೆ ಸೂಕ್ತ ಸರ್ಕಾರಿ ಭೂಮಿಯನ್ನು ಗುರುತಿಸಿ ನೀಡುವುದಾಗಿ ಭರವಸೆ ನೀಡಿದ್ದರು. ಅದರಂತೆ ಅವರ ನಿರ್ದೇಶನದ ಮೇರೆಗೆ ಕಂದಾಯ ಇಲಾಖೆಯ ಅಧಿಕಾರಿಗಳು ಐಸಂದ್ರ ಮಿಟ್ಟೂರು ಗ್ರಾಮಕ್ಕೆ ಭೇಟಿ ನೀಡಿ ಸರ್ವೇ ಸಂಖ್ಯೆ 151ರಲ್ಲಿ ಸರ್ವೇ ಕಾರ್ಯ ನಡೆಸಿ ಸುಮಾರು 5 ಎಕರೆ ಬಂಜರು ಭೂಮಿಯನ್ನು ಗುರುತಿಸಿದ್ದಾರೆ ಎಂದು ಹೇಳಿದರು.

ಕಂದಾಯ ಇಲಾಖೆ ಅಧಿಕಾರಿಗಳು ಮಾತನಾಡಿ, ತಹಸೀಲ್ದಾರ್ ಸೂಚನೆಯಂತೆ ಸರ್ವೇ ಕಾರ್ಯ ಪೂರ್ಣಗೊಳಿಸಲಾಗಿದ್ದು, ಸಂಬಂಧಿಸಿದ ವರದಿಯನ್ನು ಮೇಲಧಿಕಾರಿಗಳಿಗೆ ಸಲ್ಲಿಸಲಾಗುತ್ತದೆ. ಅಗತ್ಯ ಆಡಳಿತಾತ್ಮಕ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಅರ್ಹ ನಿವೇಶನ ರಹಿತ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ತಿಳಿಸಿದರು.

ಗ್ರಾಮಸ್ಥರು ಮಾತನಾಡಿ, ಬಡವರ ಹಕ್ಕಿಗಾಗಿ ಎವೈವಿಕೆ ಸಂಘಟನೆಯ ಅಧ್ಯಕ್ಷ ಜೈಭೀಮ್ ಶ್ರೀನಿವಾಸ್ ನಿರಂತರವಾಗಿ ಹೋರಾಟ ನಡೆಸಿದ್ದು, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುವ ಮೂಲಕ ಸಮಸ್ಯೆ ಪರಿಹಾರಕ್ಕೆ ಒತ್ತಾಯಿಸಿದ್ದರು.

ಈ ಹೋರಾಟದ ಫಲವಾಗಿ ಇಂದು ನಿವೇಶನಕ್ಕಾಗಿ ಭೂಮಿ ಗುರುತಿಸಲಾಗಿದ್ದು, ಇದಕ್ಕಾಗಿ ಜೈಭೀಮ್ ಶ್ರೀನಿವಾಸ್ ಹಾಗೂ ಸಂಘಟನೆಯ ಪದಾಧಿಕಾರಿಗಳಿಗೆ ಗ್ರಾಮಸ್ಥರು ಕೃತಜ್ಞತೆ ಸಲ್ಲಿಸಿದರು.

ಹೋರಾಟಕ್ಕೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಂಡ ತಹಸೀಲ್ದಾರ್ ಭರತ್, ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಸಂಬಂಧಿತ ಸಿಬ್ಬಂದಿಗೆ ಗ್ರಾಮಸ್ಥರು ಮತ್ತು ಸಂಘಟನೆಯ ಪದಾಧಿಕಾರಿಗಳು ಧನ್ಯವಾದ ಅರ್ಪಿಸಿದರು.

ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ಮೌಲಖಾನ್, ಗ್ರಾಮ ಲೆಕ್ಕಾಧಿಕಾರಿ ಪ್ರೇಮ, ಎವೈವಿಕೆ ಸಂಘಟನೆಯ ಜಿಲ್ಲಾಧ್ಯಕ್ಷ ಗೋವಿಂದ್, ಯುವ ಘಟಕದ ಅಧ್ಯಕ್ಷ ಸಂಜು, ಪೊಲೀಸ್ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ತಹಸೀಲ್ದಾರ್ ಅಮಾನತಿಗೆ ಆಗ್ರಹಿಸಿ ಪ್ರತಿಭಟನೆ



ಕನಕಪುರ

ಕನಕಪುರ ತಾಲೂಕು ಕಚೇರಿಯಲ್ಲಿ ಸರ್ಕಾರಿ ನೌಕರನಲ್ಲದ ವ್ಯಕ್ತಿಯೊಬ್ಬರಿಗೆ ಹಲವು ವರ್ಷಗಳಿಂದ ಅಕ್ರಮವಾಗಿ ಕೆಲಸ ನಿರ್ವಹಿಸಲು ಅವಕಾಶ ನೀಡಿರುವ ಆರೋಪದ ಹಿನ್ನೆಲೆಯಲ್ಲಿ ತಹಸೀಲ್ದಾರ್ ಹಾಗೂ ಉಪ ತಹಸೀಲ್ದಾರ್ ಅವರನ್ನು ತಕ್ಷಣ ಅಮಾನತುಗೊಳಿಸಿ ಉನ್ನತ ಮಟ್ಟದ ತನಿಖೆ ನಡೆಸುವಂತೆ ಜಯಕರ್ನಾಟಕ ಸಂಘಟನೆಯ ಮಾಜಿ ರಾಜ್ಯಾಧ್ಯಕ್ಷ ಕುಮಾರಸ್ವಾಮಿ ಆಗ್ರಹಿಸಿದರು.

ತಾಲೂಕು ಕಚೇರಿ ಮುಂಭಾಗ ನೂರಾರು ರೈತರೊಂದಿಗೆ ಪ್ರತಿಭಟನೆ ನಡೆಸಿದ ಅವರು, ಮುಖ್ಯಮಂತ್ರಿಗಳು, ಕಂದಾಯ ಸಚಿವರು ಹಾಗೂ ಜಿಲ್ಲಾಧಿಕಾರಿಗಳಿಗೆ ಉಪ ವಿಭಾಗಾಧಿಕಾರಿ ಎ.ಸಿ. ಬಿಸ್ನೋಯ್ ಅವರ ಮೂಲಕ ಮನವಿ ಪತ್ರ ಸಲ್ಲಿಸಿ ಮಾತನಾಡಿದರು.

ತಾಲೂಕು ಕಚೇರಿ ರೈತರು ಮತ್ತು ಸಾರ್ವಜನಿಕರಿಗೆ ಅತ್ಯಂತ ಪ್ರಮುಖ ಕಚೇರಿಯಾಗಿದ್ದು, ಪಹಣಿ, ಖಾತೆ, ಜಾತಿ ಮತ್ತು ಆದಾಯ ಪ್ರಮಾಣಪತ್ರ ಸೇರಿದಂತೆ ಹಲವು ದಾಖಲೆಗಳಿಗಾಗಿ ಪ್ರತಿದಿನ ನೂರಾರು ಮಂದಿ ಭೇಟಿ ನೀಡುತ್ತಾರೆ.

ಇಂತಹ ಕಚೇರಿಯಲ್ಲಿ ಯಾವುದೇ ಅಧಿಕೃತ ನೇಮಕಾತಿಯಿಲ್ಲದ ವ್ಯಕ್ತಿಗೆ ಕಂಪ್ಯೂಟರ್ ನಿರ್ವಹಣೆ, ಕಡತಗಳ ನಿರ್ವಹಣೆ ಹಾಗೂ ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಲು ಅವಕಾಶ ನೀಡಿರುವುದು ಗಂಭೀರ ಲೋಪವಾಗಿದೆ ಎಂದು ಆರೋಪಿಸಿದರು.

ರೈತ ಸಂಘದ ಸಂಚಾಲಕ ಚೀಲೂರು ಮುನಿರಾಜು ಮಾತನಾಡಿ, ಕಳೆದ ವಾರ ನಡೆದ ಲೋಕಾಯುಕ್ತ ದಾಳಿಯಲ್ಲಿ ಅನಧಿಕೃತ ವ್ಯಕ್ತಿಯ ಪಾತ್ರ ಬೆಳಕಿಗೆ ಬಂದಿರುವುದು ಆಡಳಿತ ವ್ಯವಸ್ಥೆಯ ಮೇಲಿನ ಜನರ ನಂಬಿಕೆಗೆ ಧಕ್ಕೆ ತಂದಿದೆ ಎಂದು ಹೇಳಿದರು.

ಪಹಣಿ ತಿದ್ದುಪಡಿ, ಖಾತೆ ಬದಲಾವಣೆ ಸೇರಿದಂತೆ ವಿವಿಧ ಕೆಲಸಗಳಿಗಾಗಿ ರೈತರಿಂದ ಲಂಚ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳು ಕೇಳಿಬಂದಿದ್ದು, ಭೂಮಿ ದಾಖಲೆಗಳು ಹಾಗೂ ಇತರೆ ಮಹತ್ವದ ದಾಖಲೆಗಳ ಸುರಕ್ಷತೆಗೂ ಅಪಾಯ ಎದುರಾಗಿದೆ ಎಂದು ಆರೋಪಿಸಿದರು.

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ಪ್ರಕಾರ ಅಧಿಕೃತ ನೌಕರರನ್ನು ಹೊರತುಪಡಿಸಿ ಬೇರೆ ಯಾರೂ ಸರ್ಕಾರಿ ಕಡತಗಳನ್ನು ನಿರ್ವಹಿಸುವಂತಿಲ್ಲ. ಆದ್ದರಿಂದ ಈ ಪ್ರಕರಣವನ್ನು ಮುಚ್ಚಿಹಾಕದೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ತಾಲೂಕು ಕಚೇರಿಯಲ್ಲಿ ಪಾರದರ್ಶಕತೆ ಹೆಚ್ಚಿಸಲು ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವುದು, ಅಧಿಕೃತ ಸಿಬ್ಬಂದಿಯ ಹೆಸರು ಮತ್ತು ಹುದ್ದೆ ಫಲಕಗಳನ್ನು ಪ್ರದರ್ಶಿಸುವುದು ಸೇರಿದಂತೆ ರೈತರಿಗೆ ಸುಗಮ ಸೇವೆ ಒದಗಿಸುವ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಹೋರಾಟಗಾರ ಸ್ಟುಡಿಯೋ ಚಂದ್ರು, ರೈತ ಸಂಘದ ತಾಲ್ಲೂಕು ಅಧ್ಯಕ್ಷ ಪುಟ್ಟಮಾದೇಗೌಡ, ಜಿಲ್ಲಾ ಕಾರ್ಯದರ್ಶಿ ಕುಮಾರ್, ಮುಖಂಡರಾದ ಶಿವರಾಜು, ರವಿಕುಮಾರ್, ರಂಗಪ್ಪ, ರಾಘವೇಂದ್ರ, ಮಲ್ಲಪ್ಪ, ಕೆಂಪಣ್ಣ ಸೇರಿದಂತೆ ಹಲವು ರೈತ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಮಳೆಗೆ ಇಬ್ಬರು ಬಲಿ

ಮಂಗಳೂರು

ನಗರದಲ್ಲಿ ಮಂಗಳವಾರ ರಾತ್ರಿ ಸುರಿದ ಭಾರೀ ಮಳೆಯ ಪರಿಣಾಮ ನಾಗುರಿ ಪ್ರದೇಶದಲ್ಲಿ ಭೂಕುಸಿತ ಸಂಭವಿಸಿ, ಮನೆ ಮೇಲೆ ಮಣ್ಣು ಕುಸಿದು ಬಿದ್ದ ಪರಿಣಾಮ ಇಬ್ಬರು ಹೆಣ್ಣು ಮಕ್ಕಳು ಸೇರಿದಂತೆ ಮೂವರು ಮೃತಪಟ್ಟಿರುವ ದಾರುಣ ಘಟನೆ ನಡೆದಿದೆ.

ಭೂಕುಸಿತದ ವೇಳೆ ಮನೆಯೊಳಗಿದ್ದ ಆರು ಮಂದಿ ಮಣ್ಣಿನಡಿ ಸಿಲುಕಿಕೊಂಡಿದ್ದರು. ಮಾಹಿತಿ ತಿಳಿಯುತ್ತಿದ್ದಂತೆ ರಕ್ಷಣಾ ಸಿಬ್ಬಂದಿ ಹಾಗೂ ಸ್ಥಳೀಯರು ಕಾರ್ಯಾಚರಣೆ ನಡೆಸಿ ಓರ್ವ ಪುರುಷ ಮತ್ತು ಇಬ್ಬರು ಹೆಣ್ಣು ಮಕ್ಕಳನ್ನು ಸುರಕ್ಷಿತವಾಗಿ ರಕ್ಷಿಸಿದ್ದಾರೆ.

ಆದರೆ ಮಣ್ಣಿನಡಿ ಸಿಲುಕಿದ್ದ ಓರ್ವ ಮಹಿಳೆ ಹಾಗೂ ಇಬ್ಬರು ಹೆಣ್ಣು ಮಕ್ಕಳು ಮೃತಪಟ್ಟಿದ್ದಾರೆ. ಮೃತದೇಹಗಳನ್ನು ಹೊರತೆಗೆದು ಮುಂದಿನ ಕ್ರಮಕ್ಕಾಗಿ ಅಧಿಕಾರಿಗಳು ಸ್ಥಳಕ್ಕೆ ಸಾಗಿಸಿದ್ದಾರೆ.

# ಅವಧಿಯೊಳಗೆ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಕೆ

ರಾಮನಗರ

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ (ದೌರ್ಜನ್ಯ ಪ್ರತಿಬಂಧ) ತಿದ್ದುಪಡಿ ಕಾಯ್ದೆಯನ್ವಯ ಜಿಲ್ಲೆಯಲ್ಲಿ ದಾಖಲಾಗುವ ಪ್ರಕರಣಗಳನ್ನು ವಿಳಂಬಕ್ಕೆ ಆಸ್ಪದ ನೀಡದೆ 60 ದಿನಗಳೊಳಗೆ ಅಥವಾ ಅದಕ್ಕೂ ಮುನ್ನ ತನಿಖೆ ಕೈಗೊಂಡು ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು. ಆದರೆ ಜಿಲ್ಲೆಯಲ್ಲಿ ಈ ರೀತಿಯ ಯಾವುದೇ ಪ್ರಕರಣಗಳು ಬಾಕಿ ಇರುವುದಿಲ್ಲ ಎಂದು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ತಿಳಿಸಿದರು.



ಅವರು ಜೂ. 30ರ ಮಂಗಳವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ (ದೌರ್ಜನ್ಯ ಪ್ರತಿಬಂಧ) ತಿದ್ದುಪಡಿ 2015ರ ಅಧಿನಿಯಮದ ಅನುಷ್ಠಾನ ಸಂಬಂಧ ಹಮ್ಮಿಕೊಳ್ಳಲಾಗಿದ್ದ 2ನೇ ತ್ರೈಮಾಸಿಕ ಜಿಲ್ಲಾ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ್ ಗೌಡ ಅವರು ಮಾತನಾಡಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ (ದೌರ್ಜನ್ಯ ಪ್ರತಿಬಂಧ) ತಿದ್ದುಪಡಿ ಕಾಯ್ದೆಯನ್ವಯ ದಾಖಲಾಗುವ ಪ್ರಕರಣಗಳಲ್ಲಿ 60 ದಿನಗಳ ಗಡುವು ನೀಡಲಾಗಿದೆ ಆದರೆ ಪ್ರಕರಣಗಳ ಸ್ವರೂಪವನ್ನು ಆಧರಿಸಿ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುತ್ತಿದೆ. ಕೆಲವೊಂದು ಪ್ರಕರಣಗಳಲ್ಲಿ ಎರಡೇ ದಿನದೊಳಗೆ ತನಿಖೆ ನಡೆಸಿ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುತ್ತಿದೆ. ಮತ್ತೆ ಕೆಲವು ಪ್ರಕರಣಗಳಲ್ಲಿ ಹೆಚ್ಚಿನ ಅವಧಿ ಬೇಕಾಗುತ್ತದೆ, ಆದರೆ ನಿಗದಿತ ಅವಧಿಯೊಳಗೆ ತನಿಖೆ ನಡೆಸಿ ಅಂತಿಮ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುತ್ತಿದೆ ಎಂದು ಹೇಳಿದರು.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ (ದೌರ್ಜನ್ಯ ಪ್ರತಿಬಂಧ) ತಿದ್ದುಪಡಿಸಿ 2015ರಡಿ ದಾಖಲಾದ ಪ್ರಕರಣಗಳಲ್ಲಿ ಪ್ರಥಮ ವರ್ತಮಾನ ವರದಿ ಹಂತದಲ್ಲಿ ಪೊಲೀಸ್ ಠಾಣೆಗಳಲ್ಲಿ ಸಂತ್ರಸ್ಥರುಗಳಿಗೆ ಪರಿಹಾರ ಒದಗಿಸುವ ಸಂಬಂಧ ಎಫ್‌ಐಆರ್ ದಾಖಲಾದ ಕೂಡಲೇ ಎಫ್‌ಐಆರ್ ಪ್ರತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು. ಇದರಿಂದ ಶೀಘ್ರವಾಗಿ ದೌರ್ಜನ್ಯ ಪ್ರಕಗಳಲ್ಲಿ ಸಂತ್ರಸ್ಥರಿಗೆ ಪರಿಹಾರ ಒದಗಿಸಲು ಸಾಧ್ಯ ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಪರಿಸರ ರಾಯಭಾರಿ ದಿ. ಸಾಲು ಮರದ ತಿಮ್ಮಕ್ಕ ಅವರು ವಾಸವಿದ್ದ ಮಾಗಡಿ ತಾಲ್ಲೂಕಿನ ಹುಲಿಕಲ್ ಗ್ರಾಮದಲ್ಲಿ ವಾಸವಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರಿಗೆ ನಿವೇಶನಗಳನ್ನು ಮತ್ತು ಹಕ್ಕು ಪತ್ರಗಳನ್ನು ನೀಡುವ ಸಂಬಂಧ ಈಗಾಗಲೇ ಅಧೀಕೃತ ಜ್ಞಾಪನ ಪತ್ರ ಹೊರಡಿಸಲಾಗಿದ್ದು, ಶೀಘ್ರದಲ್ಲೇ ನೋಂದಣಿ ಕಾರ್ಯವೂ ನಡೆಯಲಿದೆ ಎಂದವರು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಜನಾಂದವರ ಮೇಲೆ ದೌರ್ಜನ್ಯ ನಡೆದಲ್ಲಿ ತುರ್ತಾಗಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಅಗತ್ಯ ಸ್ವಚ್ಛತೆ ಕಾಪಾಡಿಕೊಳ್ಳಬೇಕು, ವೈದ್ಯರು ಹಾಗೂ ಸಿಬ್ಬಂದಿಗಳು ಸಮಯ ಪರಿಪಾಲನೆಗೆ ಒತ್ತು ನೀಡಬೇಕು, ಕರ್ತವ್ಯ (ಕಾಮ್ಸ್) ಆಪ್ ಮೂಲಕ ತಮ್ಮ ಹಾಜರಾತಿ ದೃಢೀಕರಿಸಬೇಕು, ಆಂಬುಲೆನ್ಸ್‌ಗಳು ಡಿಸೇಲ್ ಭರಿಸಿಕೊಂಡು ಸಿದ್ದವಾಗಿರಬೇಕು ಎಂದು ಸೂಚಿಸಿದರು.

ಜಿಲ್ಲಾ ಜಾಗೃತ ಮತ್ತು ಉಸ್ತುವಾರಿ ಸಮಿತಿಯ ಸದಸ್ಯರುಗಳಾದ ಚೆಲುವರಾಜು, ಮಹೇಶ್, ಕುಂಬಾಪುರ ಬಾಬು, ಶಿವರಾಜು, ಕೆ.ಶಿವಕುಮಾರ್, ರೋಹಿತ್ ಹಾಗೂ ಗೋಪಾಲಕೃಷ್ಣ ಅವರುಗಳು ಮಾತನಾಡಿದರು.

ಉಪವಿಭಾಗಾಧಿಕಾರಿ ಬಿನೋಯ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಾದ ಶಿವಕುಮಾರ್ ಸೇರದಿಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ‘ಉತ್ತಮ ಶಿಕ್ಷಣಕ್ಕೆ ಪೋಷಕರ ಪ್ರೇರಣೆಯೂ ಅಗತ್ಯ’

ಚಿಕ್ಕಬಳ್ಳಾಪುರ

ಕಲಿಯುವ ಮಗು ಮತ್ತು ಶಿಕ್ಷಕರ ನಡುವಿನ ಸಮನ್ವಯತೆಯಿಂದ ಉತ್ತಮ ಶಿಕ್ಷಣ ಸಾಧ್ಯವಾಗುತ್ತದೆ. ಇದಕ್ಕೆ ಪೋಷಕರ ಪ್ರೇರಣೆಯೂ ಅಗತ್ಯ ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಪೀಠಾಧ್ಯಕ್ಷರಾದ ಶ್ರೀ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿ ಹೇಳಿದರು.

ನಗರ ಹೊರವಲಯದ ಬಿಜಿಎಸ್ ಶಿಕ್ಷಣ ಸಂಸ್ಥೆಗಳ ನರ್ಸರಿ ಮತ್ತು ಎಲ್‌ಕೆಜಿ ಮಕ್ಕಳಿಗಾಗಿ ವೀರಾಂಜನೇಯ ಸ್ವಾಮಿ ದೇವಾಲಯ ಆವರಣದಲ್ಲಿ ನಡೆದ ವಿಶೇಷ ಹಾಗೂ ವಿನೂತನ ‘ಜ್ಞಾನಾಂಕುರ’ (ಅಕ್ಷರಾಭ್ಯಾಸ) ಕಾರ್ಯಕ್ರಮದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ನೂರು ವರ್ಷ ಜೀವನದ ಮೊದಲ ಕಲಿಕೆಯ ಹೆಜ್ಜೆಯೇ ಈ ‘ಜ್ಞಾನಾಂಕುರ’ವಾಗಿದ್ದು, ಪೋಷಕರು ತಮ್ಮ ಮಕ್ಕಳು ಓದುತ್ತಿರುವ ಶಾಲೆಯ ಬಗ್ಗೆ ಪ್ರೀತಿ ಬೆಳೆಸಿಕೊಳ್ಳಬೇಕು ಎಂದು ಅವರು ಹೇಳಿದರು. ಹೊಲವನ್ನು ಉಳಿಮೆ ಮಾಡಿ ಗೊಬ್ಬರ, ಬೀಜ, ನೀರು ನೀಡಿ ಪೋಷಿಸುವಂತೆ ಶಾಲೆಗೂ ಪ್ರೀತಿ ಮತ್ತು ಶ್ರಮ ನೀಡಬೇಕು, ಏಕೆಂದರೆ ಹೊಲ ಫಲ ನೀಡುವಂತೆ ಮಕ್ಕಳು ಸಹ ಫಲ ನೀಡುತ್ತಾರೆ ಎಂದು ಅವರು ಉಪಮಿಸಿದರು. ಮನಸ್ಸಿನಲ್ಲಿ ಶಾಂತಿ, ಮನೆಯಲ್ಲಿ ಶಾಂತಿ ಮತ್ತು ಜಗತ್ತಿನಲ್ಲಿ ಶಾಂತಿ ಇರಲಿ ಎಂದು ಅವರು ಆಶೀರ್ವಚನ ನೀಡಿದರು.

ಜಿಲ್ಲಾಧಿಕಾರಿ ಡಾ. ಜಿ. ಪ್ರಭು ಮಾತನಾಡಿ, ಹಿಂದಿನ ಕಾಲದಲ್ಲಿ ಪೋಷಕರು ಶೃಂಗೇರಿಯ ಶಾರದಾ ಮಾತೆಯ ಸನ್ನಿಧಿಯಲ್ಲಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುತ್ತಿದ್ದರು. ಆದರೆ ಅದು ಎಲ್ಲರಿಗೂ ಸಾಧ್ಯವಾಗುತ್ತಿರಲಿಲ್ಲ. ಆ ಅಗತ್ಯವನ್ನು ಮನಗಂಡು ಶ್ರೀಮಠವು ಎಲ್ಲ ಮಕ್ಕಳಿಗೂ ದೇವರ ಸನ್ನಿಧಿಯಲ್ಲಿ ಈ ರೀತಿಯ ಅಕ್ಷರಾಭ್ಯಾಸ ಕಾರ್ಯಕ್ರಮ ನಡೆಸುತ್ತಿರುವುದು ಸಂತಸದ ಸಂಗತಿ ಎಂದು ಹೇಳಿದರು. ಶ್ರೀಮಠವು ಜ್ಞಾನದ ಮೂಲಕ ಸುಮಾರು 1,80,000 ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ನೀಡುತ್ತಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀಗಳು ಓಂ ಶಾಂತಿ ಶಾಂತಿ ಶಾಂತಿ ಎಂದು ಶಾಂತಿ ಮಂತ್ರ ಜಪಿಸಿ, ಗುರು–ಶಿಷ್ಯರ ಸಂಬಂಧವನ್ನು ವಿವರಿಸುವ “ಓಂ ಸಹನಾವವತು, ಸಹ ನೌ ಭುನಕ್ತು, ಸಹ ವೀರ್ಯಂ ಕರವಾವಹೈ” ಮಂತ್ರದೊಂದಿಗೆ ಓಂಕಾರ ಹೇಳಿಕೊಡುವ ಮೂಲಕ ಪುಟ್ಟ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಿದರು.

ಬಿಜಿಎಸ್ ಶಿಕ್ಷಣ ಸಂಸ್ಥೆಗಳ ಮುಖ್ಯ ಆಡಳಿತಾಧಿಕಾರಿ ಡಾ. ಎನ್. ಶಿವರಾಮರೆಡ್ಡಿ ಮಾತನಾಡಿ, ಮಕ್ಕಳಿಗೆ ಮನೆಯಷ್ಟೇ ಶಾಲೆಯೂ ಮುಖ್ಯವಾಗಿದ್ದು, ತಾಯಿಯ ಗರ್ಭದಿಂದಲೇ ಕಲಿತಿರುವ ಅಂಶಗಳನ್ನು ಚಿಗುರೊಡೆಯುವಂತೆ ಮಾಡುವುದೇ ‘ಜ್ಞಾನಾಂಕುರ’ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜಿಎಸ್ ಇಂಗ್ಲಿಷ್ ಶಾಲೆ ಅಗಲಗುರ್ಕಿ, ಬಿಜಿಎಸ್ ವಿದ್ಯಾನಿಕೇತನ ಮಂಚನಬಲೆ, ಬಿಜಿಎಸ್ ವರ್ಲ್ಡ್ ಶಾಲೆ ಚಿಕ್ಕಬಳ್ಳಾಪುರ ಮತ್ತು ಎಸ್.ಜೆ.ಸಿ.ಆರ್ ವಿದ್ಯಾನಿಕೇತನ ಮೇಳೇಕೋಟೆ ಸೇರಿದಂತೆ ವಿವಿಧ ಶಾಲೆಗಳ 600ಕ್ಕೂ ಹೆಚ್ಚು ಎಲ್‌ಕೆಜಿ ಪುಟಾಣಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀ ಆದಿಚುಂಚನಗಿರಿ ಚಿಕ್ಕಬಳ್ಳಾಪುರ ಶಾಖಾ ಮಠದ ಕಾರ್ಯದರ್ಶಿ ಶ್ರೀ ಮಂಗಳನಾಥ ಸ್ವಾಮೀಜಿ, ಎಸ್.ಜೆ.ಸಿ.ಐ.ಟಿ ಕಾಲೇಜಿನ ಪ್ರಾಂಶುಪಾಲ ಡಾ. ಜಿ.ಟಿ. ರಾಜು, ಅಗಲಗುರ್ಕಿ ಬಿಜಿಎಸ್ ಆಂಗ್ಲ ಶಾಲೆಯ ಪ್ರಾಂಶುಪಾಲ ಮೋಹನ್ ಕುಮಾರ್ ಸೇರಿದಂತೆ ವಿವಿಧ ಶಾಲಾ–ಕಾಲೇಜುಗಳ ಪ್ರಾಂಶುಪಾಲರು, ಶಿಕ್ಷಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಹಲ್ಲೆ ಪ್ರಕರಣ: ಆರೋಪಿಗಳ ಬಂಧನಕ್ಕೆ ಒತ್ತಾಯ

ಕೋಲಾರ

ತಾಲೂಕಿನ ಮಡೇರಹಳ್ಳಿ ಗ್ರಾಮದ ಪರಿಶಿಷ್ಟ ಪಂಗಡದ ಶ್ರೀನಿವಾಸ್ ಅವರ ಮೇಲೆ ನಡೆದಿರುವ ಮಾರಣಾಂತಿಕ ಹಲ್ಲೆ ಪ್ರಕರಣದ ಆರೋಪಿಗಳನ್ನು ಕೂಡಲೇ ಬಂಧಿಸುವಂತೆ ಒತ್ತಾಯಿಸಿ ವಾಲ್ಮೀಕಿ ಸಮಾಜದ ಮುಖಂಡರು ಹಾಗೂ ಹಲ್ಲೆಗೆ ಒಳಗಾದವರ ಕುಟುಂಬಸ್ಥರು ಮಂಗಳವಾರ ನಗರದ ಹೊರವಲಯದಲ್ಲಿರುವ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರು ಮಾತನಾಡಿ, ಘಟನೆ ನಡೆದು 22 ದಿನಗಳು ಕಳೆದಿದ್ದರೂ ಆರೋಪಿಗಳ ವಿರುದ್ಧ ಎಫ್‌ಐಆರ್ ದಾಖಲಾಗಿದ್ದರೂ ಇದುವರೆಗೆ ಬಂಧನವಾಗಿಲ್ಲ ಎಂದು ಆರೋಪಿಸಿದರು. ಆರೋಪಿಗಳ ವಿರುದ್ಧ ಈಗಾಗಲೇ ಮೂರು–ನಾಲ್ಕು ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ.

# ಗ್ಯಾರಂಟಿ ಯೋಜನೆಗಳು ಸರಿಯಾಗಿ ನಡೆಯುತ್ತಿಲ್ಲ: ಬೇಸರ




ಕೋಲಾರ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸುವಂತೆ ಹಲವು ಬಾರಿ ಸೂಚನೆ ನೀಡಿದ್ದರೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಯೋಜನೆಗಳ ಅನುಷ್ಠಾನ ಸರಿಯಾಗಿ ನಡೆಯುತ್ತಿಲ್ಲ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ವೇಮಗಲ್ ವಿ.ಎಂ. ಮುನಿಯಪ್ಪ ಬೇಸರ ವ್ಯಕ್ತಪಡಿಸಿದರು.

ನಗರದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಸೇರಿದಂತೆ ಕಾಂಗ್ರೆಸ್ ನಾಯಕರು ತಮ್ಮ ಮೇಲೆ ವಿಶ್ವಾಸ ಇಟ್ಟು ಈ ಸ್ಥಾನಕ್ಕೆ ನೇಮಿಸಿದ್ದಾರೆ.

ಸಮಾಜಕ್ಕೆ ಏನಾದರೂ ಉತ್ತಮ ಕೆಲಸ ಮಾಡಬೇಕು ಎಂಬ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿದ್ದರೂ ಅಧಿಕಾರಿಗಳಿಂದ ನಿರೀಕ್ಷಿತ ಸಹಕಾರ ದೊರೆಯುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳು ಸಭೆಗಳಿಗೆ ಮಾತ್ರ ಸೀಮಿತರಾಗಿದ್ದು, ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಗಂಭೀರತೆ ಕಾಣಿಸುತ್ತಿಲ್ಲ ಎಂದು ಅವರು ಆರೋಪಿಸಿದರು.

ಸಭೆಯಲ್ಲಿ ಸಮಿತಿ ಸದಸ್ಯರು ಮಾತನಾಡಿ, ಗ್ರಾಮ ಮಟ್ಟದಲ್ಲೇ ಫಲಾನುಭವಿಗಳ ಸಮಸ್ಯೆಗಳನ್ನು ಪರಿಹರಿಸುವ ಉದ್ದೇಶದಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಿಡಿಒ, ಕಾರ್ಯದರ್ಶಿ, ಸಿಬ್ಬಂದಿ ಹಾಗೂ ಅಂಗನವಾಡಿ ಕಾರ್ಯಕರ್ತೆಯರನ್ನು ಒಳಗೊಂಡ ಸಭೆಗಳನ್ನು ಆಯೋಜಿಸುವ ತೀರ್ಮಾನ ಕೈಗೊಳ್ಳಲಾಯಿತು. ಜೊತೆಗೆ ತಾಲೂಕಿನ ಎಲ್ಲಾ ಆಹಾರ ಪಡಿತರ ಕೇಂದ್ರಗಳ ಮುಖ್ಯಸ್ಥರ ಸಭೆ ನಡೆಸುವಂತೆ ಸೂಚನೆ ನೀಡಿದರೂ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು. ಪದೇ ಪದೇ ಒಂದೇ ಸಮಸ್ಯೆಗಳನ್ನು ಪ್ರಸ್ತಾಪಿಸಿದರೂ ಪರಿಹಾರ ದೊರೆಯದಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಅವರು ಹೇಳಿದರು.

ಅಧ್ಯಕ್ಷ ಮುನಿಯಪ್ಪ ಮಾತನಾಡಿ, ಸರ್ಕಾರದ ಜನಪರ ಯೋಜನೆಗಳಿಂದ ಯಾವುದೇ ಅರ್ಹ ಫಲಾನುಭವಿಗಳು ವಂಚಿತರಾಗಬಾರದು ಎಂಬುದು ಎಲ್ಲರ ಜವಾಬ್ದಾರಿ ಎಂದು ಹೇಳಿದರು. ಮೃತ ಫಲಾನುಭವಿಗಳ ಹೆಸರಿನಲ್ಲಿ ಇನ್ನೂ ಗೃಹಲಕ್ಷ್ಮಿ ಯೋಜನೆಯ ಹಣ ಜಮೆಯಾಗುತ್ತಿರುವುದು ಕಂಡುಬಂದರೆ ತಕ್ಷಣವೇ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು, ಇದರಿಂದ ಸಾರ್ವಜನಿಕ ಹಣದ ದುರ್ಬಳಕೆ ತಡೆಯಬಹುದು ಎಂದು ಅವರು ತಿಳಿಸಿದರು. ಜೊತೆಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆರಂಭವಾಗಿರುವುದರಿಂದ ಸಮಿತಿ ಸದಸ್ಯರು ತಮ್ಮ ವ್ಯಾಪ್ತಿಯಲ್ಲಿ ಗಮನಹರಿಸಿ ಅರ್ಹರು ಮತದಾನದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ ಉಪಾಧ್ಯಕ್ಷ ಸೂರಜ್ ಹೆಗಡೆ ನಿಧನದ ಹಿನ್ನೆಲೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ತಾಪಂ ಸಹಾಯಕ ನಿರ್ದೇಶಕ ಮಂಜುನಾಥ್ ಪ್ರಸಾದ್, ಸಮಿತಿ ಸದಸ್ಯರಾದ ಭರತ್, ನದಂಬಳ್ಳಿ ವಿಜಯಕುಮಾರ್, ಕವಿತಾ, ವಿನೋದ್, ಬಾಬು, ಶ್ರೀನಿವಾಸರೆಡ್ಡಿ, ಅಯೂಬ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# 150ಕ್ಕೂ ಹೆಚ್ಚು ಜನರು ಅಸ್ವಸ್ಥ



ಪಾವಗಡ

ಧಾರ್ಮಿಕ ಪೂಜಾ ಪದ್ಧತಿ ವಿಧಿ ವಿಧಾನಗಳಲ್ಲಿ ಉಂಟಾದ ಲೋಪದಿಂದಾಗಿ ಭೋಜನ ಸೇವನೆಯ ನಂತರ ಸುಮಾರು 150ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿರುವ ಘಟನೆ ತಾಲೂಕಿನ ಕೆ. ಸೇವಾಲಾಲ್ ಪುರ ಗ್ರಾಮದಲ್ಲಿ ನಡೆದಿದೆ.

ಕ್ಯಾತಗಾನಕೆರೆ ಸೇವಾಲಾಲ್ ತಾಂಡದಲ್ಲಿ ಬಿ.ಕೆ. ಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎರಡು ದಿನಗಳ ಹಿಂದೆ ಲಂಬಾಣಿ ಸಮುದಾಯದ ಬುಡಕಟ್ಟು ಪದ್ಧತಿಯ ಪ್ರಕಾರ ಭೀಮ ಸತ್ತಿ ಶಕ್ತಿ ದೇವತೆಯ ಪೂಜಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಧಾರ್ಮಿಕ ಉತ್ಸವದಲ್ಲಿ ಸಮುದಾಯದ ವಿವಿಧ ತಾಂಡಗಳ ಜನರು ಪಾಲ್ಗೊಂಡಿದ್ದರು.

ಸಾಮಾನ್ಯವಾಗಿ ಇಂತಹ ಆಚರಣೆಯಲ್ಲಿ ಸಮುದಾಯದವರೇ ಸೇರಿ ಅಡುಗೆ ತಯಾರಿಸಿ ದೇವರಿಗೆ ನೈವೇದ್ಯ ಸಲ್ಲಿಸಿ ಬಳಿಕ ಭೋಜನ ಸ್ವೀಕರಿಸುವ ಪದ್ಧತಿ ಇದ್ದು, ಈ ಬಾರಿ ಹೊರಗಿನಿಂದ ಹೋಟೆಲ್ ಆಹಾರ ತರಿಸಿ ವಿತರಿಸಿದ ಪರಿಣಾಮ ಆಹಾರದಲ್ಲಿ ವ್ಯತ್ಯಯ ಉಂಟಾಗಿ ಆರೋಗ್ಯ ಸಮಸ್ಯೆ ಉಂಟಾಗಿದೆ ಎಂಬ ಆರೋಪ ಕೇಳಿಬಂದಿದೆ.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕೆ. ಸೇವಾಲಾಲ್ ಪುರ, ಉಪ್ಪಾರಹಳ್ಳಿ, ಚಳ್ಳಕೆರೆ ಜಂಬಯ್ಯನ ಹಟ್ಟಿ ಹಾಗೂ ಆಂಧ್ರ ಪ್ರದೇಶದ ಸಂಬಂಧಿಕರು ಸೇರಿದಂತೆ ಹಲವರಿಗೆ ವಾಂತಿ–ಭೇದಿ ಕಾಣಿಸಿಕೊಂಡಿದ್ದು, ಶನಿವಾರದ ವೇಳೆಗೆ ಸುಮಾರು 150 ಜನರು ಅಸ್ವಸ್ಥರಾಗಿದ್ದಾರೆ ಎಂದು ತಿಳಿದುಬಂದಿದೆ.

ಅಸ್ವಸ್ಥರಾದವರನ್ನು ಪಾವಗಡ ಸರ್ಕಾರಿ ಆಸ್ಪತ್ರೆ ಸೇರಿದಂತೆ ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದ್ದು, ವೈದ್ಯರಾದ ಡಾ. ಶಿವಕುಮಾರ್, ಡಾ. ಸುಧಾಕರರೆಡ್ಡಿ, ಡಾ. ಸುಧೀರ್ ಅವರ ತಂಡ ಚಿಕಿತ್ಸೆ ನೀಡುತ್ತಿದೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ. ಹೆಚ್ಚಿನವರ ಆರೋಗ್ಯ ಸ್ಥಿತಿ ಸ್ಥಿರವಾಗಿದ್ದು, ಕೆಲವರನ್ನು ಗಮನದಲ್ಲಿಟ್ಟು ಚಿಕಿತ್ಸೆ ಮುಂದುವರಿಸಲಾಗಿದೆ.

ಘಟನೆ ಕುರಿತು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದು, ಧಾರ್ಮಿಕ ಕಾರ್ಯಕ್ರಮಗಳಲ್ಲಿ ವಿಧಿ ವಿಧಾನಗಳ ಪಾಲನೆ ಹಾಗೂ ಆಹಾರ ಸುರಕ್ಷತೆಗೆ ಸಂಬಂಧಿಸಿದಂತೆ ಸೂಕ್ತ ಎಚ್ಚರಿಕೆ ಅಗತ್ಯವಿದೆ ಎಂದು ಒತ್ತಾಯಿಸಿದ್ದಾರೆ.

# ಭಾರತೀಯ ಭೂಸೇನೆಯ 31ನೇ ಮುಖ್ಯಸ್ಥರಾಗಿ ಜನರಲ್ ಧೀರಜ್ ಸೇಠ್ ಅಧಿಕಾರ ಸ್ವೀಕಾರ

ನವದೆಹಲಿ

ಗಡಿ ಸವಾಲುಗಳನ್ನು ಎದುರಿಸುತ್ತಾ, ಸ್ವಾವಲಂಬಿ ಮತ್ತು ಭವಿಷ್ಯದ ಚಾಲೆಂಜ್‌ಗಳಿಗೆ ಸನ್ನದ್ಧವಾಗುತ್ತಿರುವ 13 ಲಕ್ಷ ಸೈನಿಕರನ್ನು ಹೊಂದಿರುವ ಭಾರತೀಯ ಭೂಸೇನೆಯ ಹೊಸ ಮುಖ್ಯಸ್ಥರಾಗಿ ಜನರಲ್ ಧೀರಜ್ ಸೇಠ್ ಅವರು ಇಂದು (ಮಂಗಳವಾರ) ಅಧಿಕಾರ ವಹಿಸಿಕೊಂಡರು.

ಪಶ್ಚಿಮ ಗಡಿಯಲ್ಲಿ ಸೇನೆಯ ಎರಡು ಕಾರ್ಯಾಚರಣಾ ಕಮಾಂಡ್‌ಗಳ ನೇತೃತ್ವ ವಹಿಸಿದ ಅಪರೂಪದ ಹೆಗ್ಗಳಿಕೆ ಇವರದ್ದಾಗಿದೆ. ಅತ್ಯಂತ ದಕ್ಷ ಮಿಲಿಟರಿ ಅಧಿಕಾರಿಯಾಗಿರುವ ಜನರಲ್ ಧೀರಜ್ ಸೇಠ್ ಅವರು, ಸಶಸ್ತ್ರ ಪಡೆಗಳಲ್ಲಿ 40 ವರ್ಷಗಳಿಗೂ ಹೆಚ್ಚು ಕಾಲ ಸುದೀರ್ಘ ಸೇವೆ ಸಲ್ಲಿಸಿ ಮಂಗಳವಾರ ನಿವೃತ್ತರಾದ ಜನರಲ್ ಉಪೇಂದ್ರ ದ್ವಿವೇದಿ ಅವರ ಉತ್ತರಾಧಿಕಾರಿಯಾಗಿ ಬಂದಿದ್ದಾರೆ.

ಧೀರಜ್ ಸೇಠ್ ಅವರ ಬಗ್ಗೆ ಒಂದಿಷ್ಟು: ಜನರಲ್ ಧೀರಜ್ ಸೇಠ್ ಅವರು ಖಡಕ್ವಾಸ್ಲಾದ ನ್ಯಾಷನಲ್ ಡಿಫೆನ್ಸ್ ಅಕಾಡೆಮಿ (ಎನ್‌ಡಿಎ)ಯ ಹಳೆಯ ವಿದ್ಯಾರ್ಥಿ. ಇವರು ಡಿಸೆಂಬರ್ 1986 ರಲ್ಲಿ ಆರ್ಮರ್ಡ್ ಕಾರ್ಪ್ಸ್‌ಗೆ ಸೇರಿದರು. ಭಾರತೀಯ ಭೂಸೇನೆಯ 31ನೇ ಮುಖ್ಯಸ್ಥರಾಗುವ ಮುನ್ನ ಇವರು ಉಪ ಭೂಸೇನಾ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿದ್ದರು.

ಜಾಗತಿಕ ಭೌಗೋಳಿಕ ಕಾರ್ಯತಂತ್ರವು ನಿರಂತರವಾಗಿ ಬದಲಾಗುತ್ತಿರುವ, ತಾಂತ್ರಿಕ ಪ್ರಗತಿ ಹಾಗೂ ಆಧುನಿಕ ಯುದ್ಧದ ಸ್ವರೂಪದಿಂದಾಗಿ ಭದ್ರತಾ ವಲಯದಲ್ಲಿ ಸವಾಲುಗಳು ಹೆಚ್ಚುತ್ತಿರುವ ಸಮಯದಲ್ಲಿ ಜನರಲ್ ಸೇಠ್ ಅವರು ಭಾರತೀಯ ಭೂಸೇನೆಯ ಅಧಿಕಾರ ಸ್ವೀಕರಿಸಿದ್ದಾರೆ.

ಆರ್ಮಿ ಕಮಾಂಡರ್ ಹುದ್ದೆಗೆ ಬಡ್ತಿ ಪಡೆದ ನಂತರ, ಅವರು ಜೈಪುರ ಮೂಲದ ಸೌತ್ ವೆಸ್ಟರ್ನ್ ಕಮಾಂಡ್ ಮತ್ತು ಸದರ್ನ್ ಕಮಾಂಡ್‌ನ ಜನರಲ್ ಆಫೀಸರ್ ಕಮಾಂಡಿಂಗ್ – ಇನ್ –ಚೀಫ್ ಆಗಿ ಸೇವೆ ಸಲ್ಲಿಸಿದ್ದರು. ಈ ಮೂಲಕ ಪಶ್ಚಿಮ ಗಡಿಯಲ್ಲಿ ಎರಡು ಪ್ರಮುಖ ಕಾರ್ಯಾಚರಣಾ ಕಮಾಂಡ್‌ಗಳ ನೇತೃತ್ವ ವಹಿಸಿದ ಅಪರೂಪದ ಹೆಗ್ಗಳಿಕೆ ಇವರದ್ದಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

# ಎಸ್‌ಐಆರ್ ಯಶಸ್ವಿಗೊಳಿಸಲು ಮನವಿ

ಶಿಡ್ಲಘಟ್ಟ

ರಾಜ್ಯದಲ್ಲಿ ಜೂನ್ 30 ರಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಆರಂಭವಾಗಲಿದ್ದು, ಈ ಅಭಿಯಾನವನ್ನು ಯಶಸ್ವಿಗೊಳಿಸಲು ಕ್ಷೇತ್ರದ ನಾಗರಿಕರು ಸಹಕರಿಸಬೇಕೆಂದು ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಮತದಾರ ನೋಂದಣಾಧಿಕಾರಿ ಎಸ್.ಎಸ್. ಅಬೀದ್ ಮನವಿ ಮಾಡಿದ್ದಾರೆ.

ಶಿಡ್ಲಘಟ್ಟ ನಗರದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಆಯೋಜಿಸಲಾದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ನಡೆದ ಜನಜಾಗೃತಿ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು. ಮತದಾರರ ಪಟ್ಟಿಯಲ್ಲಿ ಅರ್ಹರನ್ನು ಉಳಿಸಿ, ಅನರ್ಹರನ್ನು ಕೈಬಿಡುವ ಉದ್ದೇಶದಿಂದ ಈ ಪರಿಷ್ಕರಣೆ ನಡೆಯುತ್ತಿದ್ದು, ನಾಗರಿಕರು ಯಾವುದೇ ಗೊಂದಲಗಳಿಗೆ ಒಳಗಾಗದೇ ಸಹಕರಿಸಬೇಕು ಎಂದು ಅವರು ಹೇಳಿದರು.

ಮತದಾರರಿಗೆ ಅನುಮಾನ ನಿವಾರಣೆಗೆ ಶಿಡ್ಲಘಟ್ಟ ತಾಲೂಕು ಕಚೇರಿ ಹಾಗೂ ನಗರಸಭೆಯಲ್ಲಿ ವಿಶೇಷ ಕೇಂದ್ರಗಳನ್ನು ತೆರೆಯಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು ಎಂದು ಅವರು ವಿನಂತಿಸಿದರು. ಜೂನ್ 30 ರಿಂದ ಬೂತ್ ಲೆವೆಲ್ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಎನುಮರೇಷನ್ ಫಾರಂಗಳನ್ನು ನೀಡಲಿದ್ದು, ಈ ಸಂದರ್ಭದಲ್ಲಿ ಮತದಾರರು ಯಾವುದೇ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಎರಡು ಪ್ರತಿಗಳಲ್ಲಿ ಫಾರಂ ಭರ್ತಿ ಮಾಡಿ ಒಂದು ಪ್ರತಿಯನ್ನು ಸ್ವೀಕೃತಿ ರೂಪದಲ್ಲಿ ಪಡೆಯಬೇಕು ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಶಿಡ್ಲಘಟ್ಟ ನಗರದ ನೆಹರು ಕ್ರೀಡಾಂಗಣದಲ್ಲಿ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸೇರಿ ಎಸ್‌ಐಆರ್ ಕುರಿತು ಜಾಗೃತಿ ಮೂಡಿಸುವ ಡ್ರೋನ್ ವಿಡಿಯೋ ಪ್ರದರ್ಶನ ನಡೆಸಿ ಗಮನ ಸೆಳೆದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಗಗನ ಸಿಂಧು, ತಾಲೂಕು ಪಂಚಾಯಿತಿ ಇಒ ಹೇಮಾವತಿ, ಶಿರಸ್ತೇದಾರ್ ಆಸಿಯಾ ಬೀ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಜಗದೀಶ್, ಸಿಡಿಪಿಒ ವಿದ್ಯಾ ವಸ್ತ್ರದ, ನಗರಸಭೆ ಪೌರಾಯುಕ್ತೆ ಅಮೃತ, ಎಆರ್‌ಎಂ ಪಿಯು ಕಾಲೇಜಿನ ಪ್ರಾಂಶುಪಾಲ ಮೂರ್ತಿ ಸಾಮ್ರಾಟ್, ಡಾಲ್ಫಿನ್ ವಿದ್ಯಾಸಂಸ್ಥೆಯ ಶರೀಫ್, ಸರ್ಕಾರಿ ಪ್ರೌಢಶಾಲೆಯ ಕಲಾ ಶಿಕ್ಷಕ ನಾಗರಾಜ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಬಿಎಲ್‌ಒಗಳು, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಅಭಿವೃದ್ಧಿ ಕಾಮಗಾರಿಗಳಿಗೆ ಒತ್ತು: ವಿ.ಸೋಮಣ್ಣ



ಕುಣಿಗಲ್

ಪ್ರಧಾನಿ ನರೇಂದ್ರ ಮೋದಿ ಅವರು ರೈಲ್ವೆ ಇಲಾಖೆಗೆ 3 ಲಕ್ಷ ಕೋಟಿ ರೂ. ಅನುದಾನ ನೀಡಿದ್ದು, ರಾಜ್ಯದಲ್ಲಿ ಸುಮಾರು 52,000 ಕೋಟಿ ರೂ. ಮೌಲ್ಯದ ರೈಲ್ವೆ ಮೇಲ್ದರ್ಜೆ ಕಾಮಗಾರಿ ವೇಗವಾಗಿ ನಡೆಯುತ್ತಿದೆ ಎಂದು ಕೇಂದ್ರ ರಾಜ್ಯ ರೈಲ್ವೆ ಹಾಗೂ ಜಲಸಂಪನ್ಮೂಲ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಪಟ್ಟಣದಲ್ಲಿ ಶ್ರೀ ಬಸವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ರೈಲ್ವೆ ಅಭಿವೃದ್ಧಿಗೆ ಕೇಂದ್ರ ಬಜೆಟ್‌ನಲ್ಲಿ ಭಾರೀ ಪ್ರಮಾಣದ ಅನುದಾನ ಮೀಸಲಿಡಲಾಗಿದೆ. ಅದರ ಭಾಗವಾಗಿ ಕರ್ನಾಟಕದಲ್ಲಿ ಹಳೆಯ ರೈಲ್ವೆ ಮಾರ್ಗಗಳನ್ನು ತೆಗೆದು ಹೊಸ ಮಾರ್ಗಗಳನ್ನು ಅಳವಡಿಸುವುದು ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ ಎಂದು ಹೇಳಿದರು.

ರಾಜ್ಯದಲ್ಲಿ ರೈಲ್ವೆ ಕ್ರಾಸಿಂಗ್ ಸ್ಥಳಗಳಲ್ಲಿ ಸೇತುವೆಗಳ ನಿರ್ಮಾಣ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿ ಕಾರ್ಯಗಳು ವೇಗವಾಗಿ ಮುಂದುವರಿಯುತ್ತಿವೆ ಎಂದು ಅವರು ತಿಳಿಸಿದರು. ಪ್ರತಿದಿನ ಸುಮಾರು ಎರಡು ಕೋಟಿ ಜನರು ರೈಲು ಸೇವೆ ಬಳಸುತ್ತಿದ್ದು, ಬೆಂಗಳೂರು ನಗರಕ್ಕೆ ಮಾತ್ರವೇ 600ಕ್ಕೂ ಹೆಚ್ಚು ರೈಲುಗಳು ಬಂದು ಹೋಗುತ್ತಿವೆ ಎಂದು ವಿವರಿಸಿದರು. ರೈಲ್ವೆ ಇಲಾಖೆಗೆ ಲಾಭಕ್ಕಿಂತ ಸೇವೆಯೇ ಪ್ರಮುಖವಾಗಿದ್ದು, ಗೂಡ್ಸ್ ರೈಲುಗಳಿಂದ ಮಾತ್ರ ಇಲಾಖೆಗೆ ಆದಾಯ ಬರುತ್ತದೆ ಎಂದು ಅವರು ಹೇಳಿದರು. ಮುಂದಿನ ಆರು ತಿಂಗಳಲ್ಲಿ ಹಳೆಯ ಬೋಗಿಗಳನ್ನು ಬದಲಾಯಿಸುವ ಕಾರ್ಯ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# 150 ಕೋಟಿ ರೂ. ಸರ್ಕಾರಿ ಜಮೀನು ಕಬಳಿಕೆ ಯತ್ನ: ನಕಲಿ ದಾಖಲೆ ಸೃಷ್ಟಿ ಆರೋಪ

## 60 ಎಕರೆ ಭೂ ಮಂಜೂರಾತಿಯಲ್ಲಿ ಅಕ್ರಮ ನಡೆದಿದೆ; ಉನ್ನತ ಮಟ್ಟದ ತನಿಖೆಗೆ ಮಾಜಿ ಶಾಸಕ ವೈ.ಸಂಪಂಗಿ ಆಗ್ರಹ

ಬೇತಮಂಗಲ

ಕಮ್ಮಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕದಿರೇಗೌಡನಕೊಟೆ ಗ್ರಾಮದ ಸರ್ವೆ ನಂ.121ರಲ್ಲಿ ಇರುವ ಸುಮಾರು 60 ಎಕರೆ ಸರ್ಕಾರಿ ಜಮೀನನ್ನು ಕಬಳಿಸುವ ಉದ್ದೇಶದಿಂದ ನಕಲಿ ದಾಖಲೆಗಳನ್ನು ಸೃಷ್ಟಿಸಿ ಕಾನೂನುಬಾಹಿರವಾಗಿ ಭೂ ಮಂಜೂರಾತಿ ಮಾಡಲಾಗಿದೆ ಎಂದು ಮಾಜಿ ಶಾಸಕ ವೈ. ಸಂಪಂಗಿ ಗಂಭೀರ ಆರೋಪ ಮಾಡಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು ರೂ.150 ಕೋಟಿ ಮೌಲ್ಯದ ಸರ್ಕಾರಿ ಜಮೀನನ್ನು ಶ್ರೀನಿವಾಸಪುರ ತಾಲೂಕಿನ ಸುಗಟೂರು ಹೋಬಳಿಯ ಕಿತ್ತಂಡೂರು ಗ್ರಾಮದ 13 ಜನರ ಹೆಸರಿನಲ್ಲಿ ಅಕ್ರಮವಾಗಿ ಮಂಜೂರು ಮಾಡಿರುವ ದಾಖಲೆಗಳನ್ನು ಸೃಷ್ಟಿಸಲಾಗಿದೆ ಎಂದು ದೂರಿದರು.

ಕರ್ನಾಟಕ ಭೂ ಮಂಜೂರಾತಿ ನಿಯಮಗಳು–1969ರ ಪ್ರಕಾರ ಸರ್ಕಾರಿ ಜಮೀನನ್ನು ಅದೇ ತಾಲೂಕಿನ ಅರ್ಹ ಫಲಾನುಭವಿಗಳಿಗೆ ಅಥವಾ ಪಕ್ಕದ ತಾಲೂಕಿನ ಹೊಂದಿಕೊಂಡಿರುವ ಗ್ರಾಮಗಳ ನಿವಾಸಿಗಳಿಗೆ ಮಾತ್ರ ಮಂಜೂರು ಮಾಡಬಹುದು. ಆದರೆ ಈ ಪ್ರಕರಣದಲ್ಲಿ ಫಲಾನುಭವಿಗಳೆಂದು ತೋರಿಸಿರುವವರು ಸಂಬಂಧಪಟ್ಟ ತಾಲೂಕು ಅಥವಾ ಹೊಂದಿಕೊಂಡಿರುವ ಗ್ರಾಮಗಳ ನಿವಾಸಿಗಳಲ್ಲ ಎಂದು ಅವರು ಹೇಳಿದರು.



ಶ್ರೀನಿವಾಸಪುರ ತಾಲೂಕಿನ ರೈತರು 60ರಿಂದ 70 ಕಿ.ಮೀ ದೂರದಲ್ಲಿರುವ ಕೆಜಿಎಫ್ ಭಾಗದಲ್ಲಿ ಕೃಷಿ ನಡೆಸುವುದು ಕಾರ್ಯಸಾಧ್ಯವಲ್ಲ. ಕೆಜಿಎಫ್ ತಾಲೂಕಿನಲ್ಲಿ ಭೂರಹಿತ ಕುಟುಂಬಗಳಿದ್ದರೂ ಅವರಿಗೆ ಜಮೀನು ನೀಡದೆ, ದೂರದ ತಾಲೂಕಿನವರ ಹೆಸರಿನಲ್ಲಿ ಮಂಜೂರಾತಿ ಮಾಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ಸಂಪಂಗಿ ಆರೋಪಿಸಿದರು.

1989ರಲ್ಲಿ ಭೂ ಮಂಜೂರಾತಿ ನಡೆದಿರುವಂತೆ ದಾಖಲೆಗಳನ್ನು ಸೃಷ್ಟಿಸಲಾಗಿದ್ದು, 13 ಫಲಾನುಭವಿಗಳ ದಾಖಲೆಗಳಲ್ಲೂ ಒಂದೇ ರೀತಿಯ ಕೈಬರಹ ಕಂಡುಬಂದಿದೆ. ಅಲ್ಲದೆ, ಬಂಗಾರಪೇಟೆ ತಹಶೀಲ್ದಾರ್ ಹೆಸರಿನಲ್ಲಿ ‘ತಾರೀನಾ’ ಎಂಬ ಹೆಸರಿನ ಸಹಿ ಮಾಡಲಾಗಿದೆ. ಆದರೆ ಆ ಅವಧಿಯಲ್ಲಿ ಆ ಹೆಸರಿನ ಯಾವುದೇ ತಹಶೀಲ್ದಾರ್ ಕಾರ್ಯನಿರ್ವಹಿಸಿರುವ ದಾಖಲೆಗಳಿಲ್ಲ ಎಂದು ಅವರು ಹೇಳಿದರು.

ಸಾಗುವಳಿ ಚೀಟಿಗಳಿಗೆ ರೂ.3,775 ಪಾವತಿಸಿರುವಂತೆ ರಸೀದಿಗಳನ್ನು ಸೃಷ್ಟಿಸಲಾಗಿದೆ. ಆದರೆ ಆ ಅವಧಿಯಲ್ಲಿ ಸಾಗುವಳಿ ಮಂಜೂರಾತಿಗೆ ಕೇವಲ ರೂ.100 ಶುಲ್ಕ ಮಾತ್ರ ಇತ್ತು ಎಂದು ಅವರು ಆರೋಪಿಸಿದರು.

ಕಾನೂನುಬಾಹಿರವಾಗಿ ಸರ್ಕಾರಿ ಜಮೀನನ್ನು ಕಬಳಿಸುವ ಪ್ರಯತ್ನಗಳು ನಡೆಯುತ್ತಿದ್ದರೂ ಜನಪ್ರತಿನಿಧಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಇದರಿಂದ ಕಬಳಿಕೆದಾರರಿಗೆ ಪರೋಕ್ಷ ಬೆಂಬಲ ದೊರೆಯುತ್ತಿರುವಂತಾಗಿದೆ ಎಂದು ಸಂಪಂಗಿ ಟೀಕಿಸಿದರು. ಹಾಲಿ ಶಾಸಕರ ವಿರುದ್ಧವೂ ಅಕ್ರಮ ಸಾಗುವಳಿ ಚೀಟಿ ಮಂಜೂರಾತಿ ಸಂಬಂಧ ಲೋಕಾಯುಕ್ತದಲ್ಲಿ ದೂರು ದಾಖಲಾಗಿದ್ದು, ಸರ್ಕಾರಿ ಜಮೀನನ್ನು ಸರ್ಕಾರದ ವಶಕ್ಕೆ ಪಡೆದು ಭೂಗಳ್ಳರ ವಿರುದ್ಧ ಕ್ರಮ ಕೈಗೊಳ್ಳಲು ಹಿಂದೇಟು ಹಾಕುತ್ತಿರುವುದು ಏಕೆ ಎಂದು ಪ್ರಶ್ನಿಸಿದರು.

> ಕಾನೂನುಬಾಹಿರವಾಗಿ ಸರ್ಕಾರಿ ಜಮೀನನ್ನು ಕಬಳಿಸುವ ಪ್ರಯತ್ನಗಳು ನಡೆಯುತ್ತಿದ್ದರೂ ಜನಪ್ರತಿನಿಧಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಇದರಿಂದ ಕಬಳಿಕೆದಾರರಿಗೆ ಪರೋಕ್ಷ ಬೆಂಬಲ ದೊರೆಯುತ್ತಿರುವಂತಾಗಿದೆ ಎಂದು ಸಂಪಂಗಿ ಟೀಕಿಸಿದರು. ಹಾಲಿ ಶಾಸಕರ ವಿರುದ್ಧವೂ ಅಕ್ರಮ ಸಾಗುವಳಿ ಚೀಟಿ ಮಂಜೂರಾತಿ ಸಂಬಂಧ ಲೋಕಾಯುಕ್ತದಲ್ಲಿ ದೂರು ದಾಖಲಾಗಿದ್ದು, ಸರ್ಕಾರಿ ಜಮೀನನ್ನು ಸರ್ಕಾರದ ವಶಕ್ಕೆ ಪಡೆದು ಭೂಗಳ್ಳರ ವಿರುದ್ಧ ಕ್ರಮ ಕೈಗೊಳ್ಳಲು ಹಿಂದೇಟು ಹಾಕುತ್ತಿರುವುದು.

ಸುಮಾರು ರೂ.150 ಕೋಟಿ ಮೌಲ್ಯದ ಜಮೀನಿನ ಕಡತಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳ ಮೇಲೆ ಒತ್ತಡ ಹೇರಲಾಗುತ್ತಿದೆ ಎಂಬ ಆರೋಪವನ್ನೂ ಅವರು ಮಾಡಿದರು. ತಾವು ಸೂಚಿಸಿದ ಕಡತಗಳಿಗೆ ಸಹಿ ಹಾಕದಿದ್ದರೆ ಹಾಲಿ ತಹಶೀಲ್ದಾರರನ್ನು ವರ್ಗಾವಣೆ ಮಾಡಿ, ಬಂಗಾರಪೇಟೆಯ ಉಪ ತಹಶೀಲ್ದಾರರನ್ನು ನೇಮಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ದೂರಿದರು.

ಈ ಸಂಬಂಧ ಕೋಲಾರ ಜಿಲ್ಲಾಧಿಕಾರಿಗಳನ್ನು ಭೇಟಿ ಮಾಡಿ ಸಮಗ್ರ ತನಿಖೆ ನಡೆಸುವಂತೆ ಮನವಿ ಸಲ್ಲಿಸಿರುವುದಾಗಿ ತಿಳಿಸಿದ ಸಂಪಂಗಿ, ನಕಲಿ ದಾಖಲೆಗಳನ್ನು ಸೃಷ್ಟಿಸಿದವರು, ಮಧ್ಯವರ್ತಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕಾನೂನುಬಾಹಿರ ಮಂಜೂರಾತಿಗಳನ್ನು ರದ್ದುಪಡಿಸಿ ಸರ್ಕಾರಿ ಜಮೀನನ್ನು ಸಂರಕ್ಷಿಸಬೇಕು ಎಂದು ಆಗ್ರಹಿಸಿದರು.

ಪ್ರಕರಣಕ್ಕೆ ಸಂಬಂಧಿಸಿದ ಕಡತ ಸದ್ಯ ಸಿರಸ್ತೇದಾರ್ ಮಂಜುನಾಥ್ ಅವರ ಬಳಿ ಇದ್ದು, ಮುಂದಿನ ಮೂರು ದಿನಗಳಲ್ಲಿ ಆದೇಶ ಹೊರಬರುವ ಸಾಧ್ಯತೆ ಇದೆ. ಯಾವುದೇ ಕಾನೂನುಬಾಹಿರ ಆದೇಶ ಹೊರಬಾರದಂತೆ ಸಾರ್ವಜನಿಕರಿಗೆ ವಾಸ್ತವಾಂಶ ತಿಳಿಸುವ ಉದ್ದೇಶದಿಂದಲೇ ಪತ್ರಿಕಾಗೋಷ್ಠಿ ನಡೆಸಲಾಗಿದೆ ಎಂದು ವೈ. ಸಂಪಂಗಿ ಹೇಳಿದರು.

03/07/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಅರ್ಜಿ ಆಹ್ವಾನ

ಕೋಲಾರ

ಮೈಸೂರು ವಿಶ್ವವಿದ್ಯಾನಿಲಯದ ಪ್ರವೇಶಾತಿ ಅಧಿಸೂಚನೆಯನ್ವಯ ಪ್ರಸಕ್ತ ಶೈಕ್ಷಣಿಕ ಸಾಲಿಗೆ ಪ್ರಥಮ ವರ್ಷದ ಬಿ.ವಿ.ಎ ದೃಶ್ಯ ಕಲೆಯಲ್ಲಿ ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ರಾಜ್ಯ ಶಿಕ್ಷಣ ಪದ್ಧತಿಯಂತೆ ಸ್ನಾತಕ ಪದವಿ ಪ್ರವೇಶಾತಿಗಾಗಿ ದ್ವಿತೀಯ ಪಿ.ಯು.ಸಿ/ಸಮಾನಾಂತರ ಕೋರ್ಸುಗಳಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ (UUCMS): https://uucms.karnataka.gov.in ಆನ್‌ಲೈನ್ ಮೂಲಕ ಜುಲೈ 04 ರವರೆಗೆ (ದಂಡ ಶುಲ್ಕದೊಂದಿಗೆ) ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸದರಿ ಪದವಿಯಲ್ಲಿ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್, ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಷಯಗಳಲ್ಲಿ ವಿಶೇಷ ಅಧ್ಯಯನ ಒಳಗೊಂಡಿರುತ್ತದೆ.

ಪ್ರವೇಶಾತಿ ಕೋರಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹತಾ ಪರೀಕ್ಷೆ ಮತ್ತು ವೈಯಕ್ತಿಕ ಸಂದರ್ಶನವನ್ನು ಜುಲೈ 06 ರಂದು ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದ ಕಛೇರಿ ಸಮಯದಲ್ಲಿ ದೂರವಾಣಿ ಸಂಖ್ಯೆ 0821–2438931 ಯನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜಿನ (ಕಾವಾ) ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರೋಗ್ಯ ಮತ್ತು ಸುರಕ್ಷತೆ ಕುರಿತು ಕಾರ್ಯಾಗಾರ

ಬೆಂಗಳೂರು

ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳಲ್ಲಿ (ಎಸ್ ಟಿಪಿ) ಯಾವುದೇ ರೀತಿಯ ಅವಘಡಗಳು ಉಂಟಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಅಲ್ಲದೇ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯುಎಸ್



ಬಿ) ಅಧ್ಯಕ್ಷರಾದ ಡಾ.ಎನ್.ಮಂಜುಳ ಹೇಳಿದರು.

ಕಾವೇರಿ ಭವನದಲ್ಲಿ ಸೋಮವಾರ ಜಲಮಂಡಳಿ ವತಿಯಿಂದ ನಡೆದ ಆರೋಗ್ಯ ಮತ್ತು ಸುರಕ್ಷತೆ ಕುರಿತಂತೆ ನಡೆದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ನೌಕರರು ಸುರಕ್ಷತೆಗೆ ಆದ್ಯತೆ ನೀಡಬೇಕು. ನಿಮ್ಮ ಕಾರ್ಯ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಸಮಸ್ಯೆಗಳು ಉದ್ಭವಿಸದಂತೆ ಮುಂಜಾಗ್ರತಾ ಕ್ರಮಗಳನ್ನಯ ಅಳವಡಿಸಿಕೊಂಡು ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ನೌಕರರ ಸುರಕ್ಷತೆ ದೃಷ್ಟಿಯಿಂದ ಈ ಕಾರ್ಯಾಗಾರ ಹಮ್ಮಿಕೊಂಡಿದ್ದು, ಸುರಕ್ಷತೆಗಾಗಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಚರ್ಚೆ ನಡೆಸಲಾಗುವುದು. ಅಲ್ಲದೆ, ಮುಕ್ತವಾಗಿ ಎಲ್ಲರೂ ಚರ್ಚೆ ಮಾಡಬೇಕು, ಯಾವುದೇ ತೊಂದರೆ, ಸಮಸ್ಯೆಗಳಿದ್ದರೆ ಚರ್ಚೆ ಮೂಲಕ ವ್ಯಾಪ್ತಿಯ ಅಲ್ಲಿ ಹರಿಸಿಕೊಳ್ಳಬೇಕು ಎಂದು ಡಾ.ಎನ್.ಮಂಜುಳ ಹೇಳಿದರು. ಈ ವೇಳೆ ಜಲಮಂಡಳಿಯ ಮುಖ್ಯ ಇಂಜಿನಿಯರ್ ಗಳು, ಎಸ್ ಟಿಪಿ ವಿಭಾಗದ ನೌಕರರು ಉಪಸ್ಥಿತರಿದ್ದರು.

## ಟೇಕ್ವಾಂಡೋ ಚಾಂಪಿಯನ್ ಶಿಪ್‌ನಲ್ಲಿ ಉತ್ತಮ ಸಾಧನೆ



ವಿಜಯಪುರ

ಗೋವಾದ ಕ್ಯಾಲಂಗಟ್ ಪೆದ್ದಮ್ ಇಂಡೋರ್ ಸ್ಟೇಡಿಯಂನಲ್ಲಿ ನಡೆದಿರುವ 9 ನೇ ಏಷಿಯಾ ಓಪನ್ ಇಂಟರ್ ನ್ಯಾಷನಲ್ ಟೇಕ್ವಾಂಡೋ ಚಾಂಪಿಯನ್ ಶಿಪ್ ನಲ್ಲಿ, ವಿಜಯಪುರದ ವಾರಿಯರ್ಸ್ ಟೇಕ್ವಾಂಡೋ ಅಕಾಡೆಮಿಯ 30 ವಿದ್ಯಾರ್ಥಿಗಳು ಭಾಗವಹಿಸಿ, ಉತ್ತಮ ಸಾಧನೆ ಮಾಡಿದ್ದಾರೆ ಎಂದು ಕರಾಟೆ ಮುಖ್ಯ ತರಬೇತುದಾರ ವಿ.ಮುನೀಂದ್ರ ತಿಳಿಸಿದ್ದಾರೆ.

ಅದ್ವೈತ್ ಪ್ರಸಾದ್ ಕೆಡೆಟ್ ಮೇಲ್ 53 ಕೆ.ಜಿ.ತೂಕದ ಪಂದ್ಯದಲ್ಲಿ ಬಂಗಾರದ ಪದಕ, ಪರಿಣಿಕ.ಸಿ 47 ಕೆ.ಜಿ.ತೂಕದ ವಿಭಾಗದಲ್ಲಿ ಬೆಳ್ಳಿಯ ಪದಕ, ಹೇಮಮಂತ್ 46 ಕೆ.ಜಿ.ತೂಕದ ವಿಭಾಗದಲ್ಲಿ ಕಂಚಿನ ಪದಕ ಕಾರ್ತಿಕ್ 57 ಕೆ.ಜಿ.ವಿಭಾಗದಲ್ಲಿ ಕಂಚಿನ ಪದಕ, ವೈಭವ್.ಎಂ.ಪೂಮ್ಸೆ ವಿಭಾಗದಲ್ಲಿ ಬೆಳ್ಳಿಪದಕ, ಹಿತಶ್ರೀ ಚಾರ್ವಿಕಸಾಯಿ 37 ಕೆ.ಜಿ ವಿಭಾಗದಲ್ಲಿ ಕಂಚಿನ ಪದಕವನನು ಗೆದ್ದಿದ್ದಾರೆ ಎಂದು ತಿಳಿಸಿದ್ದಾರೆ. ತರಬೇತುದಾರ ಧನುಷ್ ಕುಮಾರ್, ಎಂ.ಮೋಹನ್, ಟೆನ್ನಿಕೃಷ್ಣ, ಮುಂತಾದವರು ಹಾಜರಿದ್ದರು.

## ‘ಸಮಾಜದ ಬಗ್ಗೆ ಪ್ರೀತಿಯಿಲ್ಲದವನು ಪತ್ರಕರ್ತನಾಗಲಾರ’



ಬಾಗೇಪಲ್ಲಿ

ಸಮಾಜದ ಬಗ್ಗೆ ಪ್ರೀತಿ, ಕಳಕಳಿ ಇಲ್ಲದ ವ್ಯಕ್ತಿ ಎಂದಿಗೂ ನೈಜ ಪತ್ರಕರ್ತನಾಗಲು ಸಾಧ್ಯವಿಲ್ಲ. ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಿ, ಅವುಗಳಿಗೆ ಪರಿಹಾರ ದೊರಕಿಸುವ ಜವಾಬ್ದಾರಿ ಪತ್ರಕರ್ತರ ಮೇಲಿದೆ ಎಂದು ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ. ಗೋಪಿನಾಥ್ ಹೇಳಿದರು.

ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ "ಪತ್ರಕರ್ತರು ಮತ್ತು ಸಮಾಜ" ವಿಷಯದ ಕುರಿತು ಮಾತನಾಡಿದ ಅವರು, ಕ್ರಿ.ಶ. 1843ರ ಜುಲೈ 1ರಂದು ಸ್ವಿಟ್ಜರ್‌ಲ್ಯಾಂಡ್ ಮೂಲದ ಹರ್ಮನ್ ಫ್ರಿಡ್ರಿಕ್ ಮೋಗ್ಲಿಂಗ್ ಅವರು ಮಂಗಳೂರು ಸಮಾಚಾರ ಪತ್ರಿಕೆಯನ್ನು ಆರಂಭಿಸಿದ ಸ್ಮರಣಾರ್ಥವಾಗಿ ಪ್ರತಿ ವರ್ಷ ಪತ್ರಿಕಾ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಆದರೆ ಇಂದಿನ ದಿನಾಚರಣೆಗಳು ತಮ್ಮ ಮೂಲ ಆಶಯವನ್ನು ಕಳೆದುಕೊಳ್ಳುತ್ತಿವೆ. ಪತ್ರಿಕೋದ್ಯಮದ ಮೌಲ್ಯಗಳನ್ನು ಮರೆತು ವಿವಿಧ ಉದ್ದೇಶಗಳಿಂದ ಈ ಕ್ಷೇತ್ರಕ್ಕೆ ಬರುತ್ತಿರುವವರಿಂದ ಪತ್ರಿಕಾ ಕ್ಷೇತ್ರದ ಘನತೆ ಕುಸಿಯುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಇತ್ತೀಚೆಗೆ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಆಚರಿಸಿದ್ದೇವೆ. ಕೆಂಪೇಗೌಡರು ಕೆರೆ, ಕಾಲುವೆಗಳನ್ನು ನಿರ್ಮಿಸಿ ನೀರಾವರಿ ವ್ಯವಸ್ಥೆ ಕಲ್ಪಿಸಿ, ಕುಂಬಾರಪೇಟೆ, ನಗರ್ತಪೇಟೆ, ಬಳೇಪೇಟೆ, ಚಿಕ್ಕಪೇಟೆ ಸೇರಿದಂತೆ ಯೋಜಿತ ನಗರ ನಿರ್ಮಾಣದ ಮೂಲಕ ಬೆಂಗಳೂರಿಗೆ ಭದ್ರ ಬುನಾದಿ ಹಾಕಿದರು. ಆದರೆ ಇಂದು ಅವರು ನಿರ್ಮಿಸಿದ ಕೆರೆ, ಕಾಲುವೆ, ಕಲ್ಯಾಣಿಗಳನ್ನು ಒತ್ತುವರಿ ಮಾಡಿ, ಬೆಟ್ಟಗುಡ್ಡಗಳನ್ನು ನಾಶಪಡಿಸುತ್ತಾ ಅವರ ಜಯಂತಿ ಆಚರಿಸುವುದಕ್ಕೆ ಅರ್ಥವೇನು ಎಂದು ಪ್ರಶ್ನಿಸಿದರು.

ಅದೇ ರೀತಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಿಸುತ್ತೇವೆ. ಆದರೆ ಸಂವಿಧಾನದ ಮೂಲ ಆಶಯಗಳಿಗೆ ಧಕ್ಕೆ ಬರುವ ರೀತಿಯಲ್ಲಿ ನಡೆದುಕೊಳ್ಳುತ್ತಿದ್ದೇವೆ. ಕೈವಾರ ತಾತಯ್ಯನವರ ಜಯಂತಿಯನ್ನೂ ಆಚರಿಸುತ್ತೇವೆ. ಆದರೆ ಮಹನೀಯರ ಆದರ್ಶಗಳನ್ನು ಪಾಲಿಸದಿದ್ದರೆ ಯಾವುದೇ ಆಚರಣೆಗೆ ಅರ್ಥವಿರುವುದಿಲ್ಲ ಎಂದು ಅವರು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪಿತಾಮಹ ಡಿ.ವಿ. ಗುಂಡಪ್ಪ ಅವರು ಖ್ಯಾತ ಸಾಹಿತಿ, ಚಿಂತಕ ಹಾಗೂ ಪತ್ರಿಕೋದ್ಯಮದ ದಿಗ್ಗಜರಾಗಿದ್ದರು. "ಕನ್ನಡದ ಭಗವದ್ಗೀತೆ" ಎಂದೇ ಪ್ರಸಿದ್ಧವಾಗಿರುವ ಮಂಕುತಿಮ್ಮನ ಕಗ್ಗ ಕೃತಿಯನ್ನು ರಚಿಸಿದ ಅವರು ಜೀವನದಲ್ಲಿ ಆರ್ಥಿಕವಾಗಿ ಸಂಕಷ್ಟ ಅನುಭವಿಸಿದ್ದರೂ ಮೌಲ್ಯಗಳಲ್ಲಿ ಶ್ರೀಮಂತರಾಗಿದ್ದರು. ಯಾವುದೇ ಕಾರಣಕ್ಕೂ ಲಂಚಕ್ಕೆ ಕೈಯೊಡ್ಡದೆ, ಬಂದ ಆಮಿಷಗಳನ್ನು ನಯವಾಗಿ ತಿರಸ್ಕರಿಸಿದ ಆದರ್ಶ ವ್ಯಕ್ತಿಯಾಗಿದ್ದರು. ಅವರ ತತ್ವ, ಸಿದ್ಧಾಂತಗಳನ್ನು ಪ್ರತಿಯೊಬ್ಬ ಪತ್ರಕರ್ತರೂ ಅಳವಡಿಸಿಕೊಳ್ಳಬೇಕು. ನಾವು ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯಾಗಬೇಕೇ ಹೊರತು, ಶ್ರೀಮಂತರು ಅಥವಾ ಅಧಿಕಾರಿಗಳ ಪರವಾಗಿ ನಿಲ್ಲಬಾರದು. ಸಮಾಜಮುಖಿಯಾಗಿ ಕೆಲಸ ಮಾಡಲು ಈ ಕ್ಷೇತ್ರಕ್ಕೆ ಬಂದಿದ್ದೇವೆ ಎಂದು ಹೇಳಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಇಂದು ರಾಜ್ಯದ ಬಲಿಷ್ಠ ಸಂಘಟನೆಯಾಗಿದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ವೃತ್ತಿಬದ್ಧತೆಯ ಕೊರತೆ ಎದ್ದು ಕಾಣುತ್ತಿದ್ದು, ಸಂಘದ ಗಟ್ಟಿತನ ಕಡಿಮೆಯಾಗುತ್ತಿರುವ ಆತಂಕ ವ್ಯಕ್ತವಾಗುತ್ತಿದೆ. ಪತ್ರಕರ್ತನನ್ನು ಸಮಾಜ ಗುರುತಿಸುವುದು ಅವನ ಹುದ್ದೆಯಿಂದಲ್ಲ, ಬರವಣಿಗೆಯಿಂದ. ಅವಿಭಜಿತ ಕೋಲಾರ ಜಿಲ್ಲೆಯ ಕಾಲದಲ್ಲಿ ನೀರಾವರಿ, ಎಡಪಂಥೀಯ ಹೋರಾಟಗಳು, ಚಿತ್ರಾವತಿ ಅಣೆಕಟ್ಟು ಸೇರಿದಂತೆ ಅನೇಕ ಜನಪರ ಹೋರಾಟಗಳ ವರದಿಗಳನ್ನು ಮಾಡಿದ ದಿನಗಳನ್ನು ಅವರು ಸ್ಮರಿಸಿದರು. ಆಡಳಿತಾತ್ಮಕವಾಗಿ ಎರಡು ಜಿಲ್ಲೆಗಳಾಗಿದ್ದರೂ ಭಾವನಾತ್ಮಕವಾಗಿ ನಾವೆಲ್ಲರೂ ಒಂದೇ ಎಂದು ಹೇಳಿ ಅಂದಿನ ಪತ್ರಕರ್ತರನ್ನು ಶ್ಲಾಘಿಸಿದರು.

ಸಮಾಜದಲ್ಲಿ ಜನರು ತಮ್ಮ ಸಮಸ್ಯೆಗಳನ್ನು ಮೊದಲು ಪತ್ರಕರ್ತರ ಬಳಿ ತರುತ್ತಾರೆ. ಅಧಿಕಾರಿಗಳು ಅಥವಾ ಜನಪ್ರತಿನಿಧಿಗಳಿಗಿಂತ ಪತ್ರಕರ್ತರ ಮೇಲೆಯೇ ಹೆಚ್ಚು ವಿಶ್ವಾಸವಿಟ್ಟು ತಮ್ಮ ಸಂಕಷ್ಟಗಳನ್ನು ಹಂಚಿಕೊಳ್ಳುತ್ತಾರೆ. ಈ ವಿಶ್ವಾಸವನ್ನು ಉಳಿಸಿಕೊಳ್ಳುವುದು ಪತ್ರಕರ್ತರ ಕರ್ತವ್ಯ ಎಂದು ಹೇಳಿದರು.

ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ನಿರ್ದೇಶಕ ವಿ. ಮಂಜುನಾಥರೆಡ್ಡಿ ಮಾತನಾಡಿ, ಸಾಮಾಜಿಕ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಕೌಟುಂಬಿಕ ಮೌಲ್ಯಗಳಿಗೆ ಧಕ್ಕೆಯಾಗುತ್ತಿದೆ. ಇಲ್ಲಿನ ಪತ್ರಕರ್ತರು ತನಗಿಂತ ಹಿರಿಯರಾಗಿದ್ದರೂ ಆತ್ಮೀಯ ಸಂಬಂಧ ಹೊಂದಿದ್ದಾರೆ. ಭಾರತೀಯ ಸಂಸ್ಕೃತಿ ಇಡೀ ವಿಶ್ವಕ್ಕೆ ಮಾದರಿಯಾಗಿದೆ. ಕಲಿಕೆಗೆ ಕೊನೆಯಿಲ್ಲ, ಇಡೀ ಜೀವನವೇ ಒಂದು ಪಾಠಶಾಲೆ ಎಂದು ಹೇಳಿದರು.


ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಕೋಶಾಧ್ಯಕ್ಷ ವಾಸುದೇವ ಹೊಳ್ಳ ಮಾತನಾಡಿ, ಹಿಂದಿನ ಹಾಗೂ ಇಂದಿನ ಪತ್ರಿಕೋದ್ಯಮದ ನಡುವಿನ ವ್ಯತ್ಯಾಸವನ್ನು ವಿವರಿಸಿದರು. ಹಿಂದೆ ಸುದ್ದಿಗಳು ಹಾಗೂ ಛಾಯಾಚಿತ್ರಗಳನ್ನು ಪತ್ರಿಕಾ ಕಚೇರಿಗಳಿಗೆ ಕಳುಹಿಸಲು ಪತ್ರಕರ್ತರು ಪಟ್ಟ ಪರಿಶ್ರಮವನ್ನು ನೆನಪಿಸಿಕೊಂಡರು.

ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಡಿ.ಎನ್. ಕೃಷ್ಣಾರೆಡ್ಡಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಪತ್ರಕರ್ತರು ನಿಜವಾದ ಕಾರ್ಯನಿರತರಾಗಿರಬೇಕು. ಅಯೋಗ್ಯರು ಹಾಗೂ ಅನರ್ಹರು ಈ ಕ್ಷೇತ್ರಕ್ಕೆ ಬರಬಾರದು. ಚುನಾವಣೆ ಸಂದರ್ಭಗಳಲ್ಲಿ ಲಂಚಕ್ಕಾಗಿ ಬೇಡಿಕೆ ಇಡುವಂತಹವರು ಪತ್ರಕರ್ತರ ಸಂಘಕ್ಕೆ ಅಗತ್ಯವಿಲ್ಲ. ಅಂತಹವರನ್ನು ಈ ಕ್ಷೇತ್ರಕ್ಕೆ ಪರಿಚಯಿಸಬೇಡಿ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಬಿ.ವಿ. ಗೋಪಿನಾಥ್ ಹಾಗೂ ವಾಸುದೇವ ಹೊಳ್ಳ ಅವರನ್ನು ಶಾಲು, ಹಾರ ಹಾಗೂ ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ತಾಲೂಕು ಸಂಘದ ಕೋಶಾಧ್ಯಕ್ಷ ರಾಮಕೃಷ್ಣ ಜಿ. (ಹೆಗಡೆ), ಜಿಲ್ಲಾ ಉಪಾಧ್ಯಕ್ಷ ಜೆ.ಕೆ. ಆನಂದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಪ್ರಧಾನ ಕಾರ್ಯದರ್ಶಿ ಸೈಯದ್ ಸಿದ್ದಿಕ್ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಎಸ್.ಎಸ್. ಶ್ರೀನಿವಾಸ್ ವಂದಿಸಿದರು. ಬಳಿಕ ಸಂಘದ ಎಲ್ಲಾ ಸದಸ್ಯರಿಗೆ ಉಡುಗೊರೆ ನೀಡಿ ಗೌರವಿಸಲಾಯಿತು

## ‘ಕಲಿತ ವಿದ್ಯೆ ಭೂಮಿಯಲ್ಲಿ ನೆಟ್ಟ ಬೀಜದಂತೆ, ಎಂದಿಗೂ ವ್ಯರ್ಥವಾಗದು’



ವಿಜಯಪುರ

ಭೂಮಿಯಲ್ಲಿ ಬಿತ್ತಿದ ಬೀಜ ಒಂದಕ್ಕೆ ಹತ್ತಾಗಿ ಬೆಳೆಯುತ್ತದೆಯೇ ಹೊರತು ಎಂದಿಗೂ ವ್ಯರ್ಥವಾಗುವುದಿಲ್ಲ. ಅದೇ ರೀತಿ ಬಾಲ್ಯದಲ್ಲಿ ಕಲಿತ ವಿದ್ಯೆ, ಪಾಠ ಹಾಗೂ ಕೌಶಲ್ಯಗಳು ಜೀವನದುದ್ದಕ್ಕೂ ಕಷ್ಟದ ಸಮಯದಲ್ಲಿ ನೆರವಾಗುತ್ತವೆ ಎಂದು ವಿಜಯಪುರ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ಹಿರಿಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ವಿ.ಎಂ. ಕಿಶೋರ್ ಕುಮಾರ್ ಹೇಳಿದರು.

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಆಯೋಜಿಸಿದ್ದ ಶಾಲಾ ಮಕ್ಕಳ ಕೌಶಲ್ಯ ತರಬೇತಿಗಾಗಿ ಹೊಲಿಗೆ ಯಂತ್ರಗಳ ಕೊಡುಗೆ ಹಾಗೂ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಹೊಲಿಗೆ ಶಿಕ್ಷಣವನ್ನು ಕೇವಲ ಒಂದು ವೃತ್ತಿಯಾಗಿ ಪರಿಗಣಿಸದೆ, ಸ್ವಾವಲಂಬಿ ಜೀವನಕ್ಕೆ ಪೂರಕವಾದ ಕೌಶಲ್ಯವೆಂದು ಅರಿತು ಆಸಕ್ತಿಯಿಂದ ಕಲಿಯಬೇಕು. ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ಹಾಗೂ ಕೌಶಲ್ಯಾಭಿವೃದ್ಧಿಗಾಗಿ ಹಿರಿಯ ವಿದ್ಯಾರ್ಥಿಗಳು ಮತ್ತು ದಾನಿಗಳು ಉದಾರವಾಗಿ ನೆರವು ನೀಡಿರುವುದು ಶ್ಲಾಘನೀಯ. ಇಂತಹ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ಕೌಶಲ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಹಿರಿಯ ವಿದ್ಯಾರ್ಥಿಗಳ ಸಂಘದ ಸಂಸ್ಥಾಪಕಿ ಇಂದಿರಾ ಶಿವಣ್ಣ ಅವರು ಎರಡು, ಸಂಘದ ಖಜಾಂಚಿ ವಿಶ್ವನಾಥ್ ಅವರು ಒಂದು ಹಾಗೂ ಹಿರಿಯ ವಿದ್ಯಾರ್ಥಿ ರಂಗನಾಥ್ ಅವರು ತಮ್ಮ ತಂದೆ ವೆಂಕಟರಮಣ ಶಾಸ್ತ್ರಿ ಅವರ ಸ್ಮರಣಾರ್ಥವಾಗಿ ಒಂದು ಹೊಲಿಗೆ ಯಂತ್ರವನ್ನು ಶಾಲೆಗೆ ಕೊಡುಗೆಯಾಗಿ ನೀಡಿದರು.

ಪ್ರೌಢಶಾಲಾ ವಿಭಾಗದ ಉಪಪ್ರಾಂಶುಪಾಲೆ ಎಲ್.ಆರ್. ಕೋಮಲ ಮಾತನಾಡಿ, ಶಾಲೆಯಲ್ಲಿ ಡಿ ದರ್ಜೆ ನೌಕರರ ತೀವ್ರ ಕೊರತೆ ಎದುರಾಗಿದೆ. ಸರ್ಕಾರದಿಂದ ಹೊಸ ನೇಮಕಾತಿಗಳು ನಡೆಯದಿರುವುದರಿಂದ ಶಾಲೆಯ ದೈನಂದಿನ ಕಾರ್ಯನಿರ್ವಹಣೆಗೆ ತೊಂದರೆಯಾಗುತ್ತಿದೆ. ಆದ್ದರಿಂದ ಹಿರಿಯ ವಿದ್ಯಾರ್ಥಿಗಳ ಸಂಘ ಹಾಗೂ ಶಾಲಾ ಅಭಿವೃದ್ಧಿ ಸಮಿತಿಯವರು ಈ ಕುರಿತು ಗಮನಹರಿಸಿ, ತಾತ್ಕಾಲಿಕವಾಗಿ ಡಿ ದರ್ಜೆ ನೌಕರರನ್ನು ನೇಮಕ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಹಿರಿಯ ವಿದ್ಯಾರ್ಥಿಗಳ ಸಂಘದ ನಿರ್ದೇಶಕಿ ಎಂ. ಅನ್ನಪೂರ್ಣ, ಹೊಲಿಗೆ ತರಬೇತಿ ಶಿಕ್ಷಕಿ ಪಾರ್ವತಮ್ಮ, ಸಹ ಶಿಕ್ಷಕರಾದ ಆರ್. ಕೋಮಲ, ಕೆ. ಪೆದ್ದಣ್ಣ, ಕೇಶವಮೂರ್ತಿ, ಅರುಣ, ದೀಪ, ವೇದಿಕ, ನೇತ್ರ, ಮಧು, ಸರಳ, ಬಾಬು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮತದಾರರ ವಿಶೇಷಪಟ್ಟಿ ಪರಿಷ್ಕರಣೆ: ಎನ್ಯೂಮರೇಷನ್ ಅರ್ಜಿ ವಿತರಣೆಗೆ ಚಾಲನೆ

ವಿಜಯಪುರ

ರಾಜ್ಯಾದ್ಯಂತ ಜೂನ್ 30ರಿಂದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್.ಐ.ಆರ್.) ಪ್ರಕ್ರಿಯೆ ಆರಂಭವಾಗಿದ್ದು, ಪಟ್ಟಣದ ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ತೆರಳಿ ಎನ್ಯೂಮರೇಷನ್ ಅರ್ಜಿಗಳನ್ನು ವಿತರಿಸುವ ಕಾರ್ಯಕ್ಕೆ ಪುರಸಭೆ ಅಧ್ಯಕ್ಷೆ ಎಸ್.ಭವ್ಯಾ ಮಹೇಶ್ ಚಾಲನೆ ನೀಡಿದರು.

ಪಟ್ಟಣದ 9ನೇ ವಾರ್ಡಿನ ತಮ್ಮ ನಿವಾಸದಲ್ಲಿ ಮತಗಟ್ಟೆ ಅಧಿಕಾರಿಗಳಿಂದ ಎನ್ಯೂಮರೇಷನ್ ಅರ್ಜಿಯನ್ನು ಸ್ವೀಕರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿಯೊಬ್ಬ ನಾಗರಿಕರೂ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಯಾರೂ ಅನಗತ್ಯವಾಗಿ ಭಯಪಡುವ ಅಗತ್ಯವಿಲ್ಲ. ಮತಗಟ್ಟೆ ಅಧಿಕಾರಿಗಳು ಮನೆಗಳಿಗೆ ಭೇಟಿ ನೀಡಿ ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ. ಅವರು ಸೂಚಿಸುವ ದಾಖಲೆಗಳನ್ನು ಸಿದ್ಧಪಡಿಸಿ ಇಟ್ಟುಕೊಳ್ಳಬೇಕು ಎಂದು ಹೇಳಿದರು.

ಒಬ್ಬ ವ್ಯಕ್ತಿಯು ಎರಡು ಕಡೆ ಮತದಾರರಾಗಿ ಹೆಸರು ಹೊಂದಿದ್ದರೆ, ಒಂದು ಕಡೆ ಮಾತ್ರ ಎನ್ಯೂಮರೇಷನ್ ಅರ್ಜಿಯನ್ನು ಸಲ್ಲಿಸಬೇಕು. ಎರಡೂ ಕಡೆ ಅರ್ಜಿ ಸಲ್ಲಿಸಿದರೆ ಮತದಾರರ ಪಟ್ಟಿಯಿಂದ ಹೆಸರು ಅಳಿಸುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಕುಟುಂಬದಲ್ಲಿ ಮೃತಪಟ್ಟಿರುವವರ ಹೆಸರು, ಬೇರೆ ಊರುಗಳಲ್ಲಿ ಮತದಾರರಾಗಿ ನೋಂದಾಯಿಸಿಕೊಂಡಿರುವವರ ಹೆಸರು ಹಾಗೂ ಮದುವೆಯಾಗಿ ಬೇರೆ ಊರಿಗೆ ತೆರಳಿರುವ ಮಹಿಳೆಯರ ಹೆಸರನ್ನು ಪಟ್ಟಿಯಿಂದ ತೆಗೆಸಬೇಕು. ಇದೇ ವೇಳೆ 18 ವರ್ಷ ತುಂಬಿದ ಯುವ ಮತದಾರರು ನಮೂನೆ–6ರಲ್ಲಿ ಅರ್ಜಿ ಭರ್ತಿ ಮಾಡಿ ಮತಗಟ್ಟೆ ಅಧಿಕಾರಿಗಳಿಗೆ ಸಲ್ಲಿಸುವ ಮೂಲಕ ಅರ್ಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಸಹಕರಿಸಬೇಕು ಎಂದು ಕರೆ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ವೈ.ಎನ್. ಸತ್ಯನಾರಾಯಣ ಮಾತನಾಡಿ, ಮತಗಟ್ಟೆ ಅಧಿಕಾರಿಗಳು ಮನೆ ಬಾಗಿಲಿಗೆ ಬಂದಾಗ ಸಾರ್ವಜನಿಕರು ಅವರಿಗೆ ಅಗತ್ಯ ಮಾಹಿತಿಯನ್ನು ನೀಡಬೇಕು. ಅಧಿಕಾರಿಗಳು ನೀಡುವ ಎರಡು ಎನ್ಯೂಮರೇಷನ್ ಅರ್ಜಿಗಳಲ್ಲಿ ಒಂದನ್ನು ಭರ್ತಿ ಮಾಡಿ ಹಿಂದಿರುಗಿಸಬೇಕು ಹಾಗೂ ಮತ್ತೊಂದು ಪ್ರತಿಯನ್ನು ತಮ್ಮ ಬಳಿ ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು ಎಂದು ತಿಳಿಸಿದರು.

ಈಗಿರುವ ಮತದಾರರ ಪಟ್ಟಿಯಲ್ಲಿ ತಿದ್ದುಪಡಿ ಅಗತ್ಯವಿದ್ದರೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಿ ಹೆಸರು ಸೇರ್ಪಡೆ, ತಿದ್ದುಪಡಿ ಅಥವಾ ಹೆಸರು ತೆಗೆಸಿಕೊಳ್ಳುವ ಅವಕಾಶವಿದೆ. ಜೂನ್ 30ರಿಂದ ಜುಲೈ 30ರವರೆಗೆ ಈ ಪ್ರಕ್ರಿಯೆ ನಡೆಯಲಿದ್ದು, ಸಾರ್ವಜನಿಕರು ಪೂರ್ಣ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡ ಕೆ.ಎಂ. ಮಧು, ಮಹೇಶ್, ಎಸ್.ಜೆ.ಆರ್.ವೈ. ಕಚೇರಿಯ ಅಧಿಕಾರಿ ಶಿವನಾಗೇಗೌಡ, ಅಧಿಕಾರಿ ರೂಪ, ಮತಗಟ್ಟೆ ಅಧಿಕಾರಿ ರಮ್ಯಾ ಹಾಗೂ ಪುರಸಭೆ ಸಿಬ್ಬಂದಿ ಉಪಸ್ಥಿತರಿದ್ದರು.

## ಅನುದಾನ ಹಂಚಿಕೆಯಲ್ಲಿ ತಾರತಮ್ಯ ನಿಲ್ಲಿಸಿ: ಅಶ್ವತ್ಥನಾರಾಯಣ್



ಬೆಂಗಳೂರು

ಕಾಂಗ್ರೆಸ್ ಸರಕಾರವು ಬೆಂಗಳೂರಿನ ಅಭಿವೃದ್ಧಿ ವಿಚಾರದಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ್ ಅವರು ಟೀಕಿಸಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ಬೆಂಗಳೂರಿನ ಅಭಿವೃದ್ಧಿಗೆ ಬೇಕಾದ ಅನುದಾನವನ್ನು ಸಾಕಷ್ಟು ಕೊಟ್ಟಿಲ್ಲ. ಅದರಲ್ಲೂ ತಾರತಮ್ಯ ಮಾಡಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಶಾಸಕರಿಗೆ ಹೆಚ್ಚು ಹಾಗೂ ಬಿಜೆಪಿ ಶಾಸಕರಿಗೆ ಕಡಿಮೆ ಅನುದಾನ ನೀಡಿದ್ದಾರೆ. ಈ ತಾರತಮ್ಯ ನಿಲ್ಲಬೇಕು ಎಂದು ಒತ್ತಾಯಿಸಿದರು.

ಕಸದ ತೆರಿಗೆ, ಆಸ್ತಿ ತೆರಿಗೆ, ಜಾಹೀರಾತು ಮೂಲಕ ಸಂಗ್ರಹ, ವಿದ್ಯುತ್ ದರ ಹೆಚ್ಚಳ, ಬಿಡಬ್ಲ್ಯುಎಸ್‌ಎಸ್‌ಬಿಯಲ್ಲೂ ಹೆಚ್ಚು ದರ ವಿಧಿಸಿ ಹಣ ಸಂಗ್ರಹಿಸಿದ್ದಾರೆ. ವಿದ್ಯುತ್ ಮೇಲೆ ಐದಾರು ದರ ವಿಧಿಸುತ್ತಿದ್ದಾರೆ ಎಂದು ಗಮನ ಸೆಳೆದರು.

ಬಿಜೆಪಿ ಸರಕಾರವು ಹೆಚ್ಚಿನ ಅನುದಾನವನ್ನು ಬೆಂಗಳೂರಿಗೆ ನೀಡಿತ್ತು. ಅದಕ್ಕೆ ಹೋಲಿಸಿದರೆ ಕಾಂಗ್ರೆಸ್ಸಿನ ಸರಕಾರದ ಅವಧಿಯಲ್ಲಿ ಕಡಿಮೆ ಅನುದಾನ ನೀಡಿದ್ದಾರೆ. ಸರಕಾರ ತಾರತಮ್ಯ ಮಾಡದೇ ಪ್ರತಿಯೊಂದು ಕ್ಷೇತ್ರಕ್ಕೂ ಸಮಾನವಾಗಿ, ಅವಶ್ಯಕತೆ ಆಧರಿತವಾಗಿ ಅನುದಾನ ಕೊಡಬೇಕು ಎಂದು ಆಗ್ರಹಿಸಿದರು.

ಎಸ್‌ಐಆರ್‌ಗೆ (ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ) ಸಂಬಂಧಿಸಿ ಸರಕಾರಿ ನೌಕರರನ್ನೇ ಬಿಎಲ್‌ಒಗಳಾಗಿ ನೇಮಿಸಬೇಕಿದೆ. ಆದರೆ, ಇಲ್ಲಿ ಸಾಮಾಜಿಕ ಸಂಘಟನೆಯವರನ್ನು ಬಿಎಲ್‌ಒಗಳಾಗಿ ಮಾಡಿದ್ದಾರೆ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು. ಇಲ್ಲಿ ಗೊಂದಲ ಮಾಡಬಾರದು; ಹಸ್ತಕ್ಷೇಪ ಸರಿಯಲ್ಲ. ಕೇವಲ ಸರಕಾರಿ ನೌಕರರನ್ನೇ ಬಿಎಲ್‌ಒಗಳಾಗಿ ನೇಮಿಸಿ ಎಂದು ಒತ್ತಾಯಿಸಿದರು.

ಹಾನಗಲ್‌ನಲ್ಲಿ ಕಾನೂನು ಸುವ್ಯವಸ್ಥೆ ಕುಸಿದ ಕುರಿತ ಪ್ರಶ್ನೆಗೆ ಉತ್ತರಿಸಿ, ಕಾಂಗ್ರೆಸ್ ಸರಕಾರ ಬಂದ ತಕ್ಷಣ ಅಟ್ಟಹಾಸ ಶುರುವಾಗುತ್ತದೆ. ಎಲ್ಲಿ ನೋಡಿದರೂ ಕುಮ್ಮಕ್ಕು. ಪೊಲೀಸ್ ಠಾಣೆಗೆ ಬೆಂಕಿ ಹಾಕಿದರೂ ಮಾಫಿ ಮಾಡುತ್ತಾರೆ ಎಂದು ಟೀಕಿಸಿದರು. ಬಾಂಬ್ ಹಾಕಿದರೂ ಬ್ರದರ್ಸ್ ಧೋರಣೆ ಕಾಂಗ್ರೆಸ್ಸಿನವರದು ಎಂದು ಆರೋಪಿಸಿದರು.

## ಜೀವನದಲ್ಲಿ ಗುರಿ ಇದ್ದರೆ ಸಾಧನೆಯ ಹಾದಿ ಸುಗಮ



ಬೂದಿಕೋಟೆ

ವಿದ್ಯಾರ್ಥಿಗಳು ಗುರುಗಳು ಹಾಗೂ ಹಿರಿಯರಿಗೆ ಗೌರವ ನೀಡಬೇಕು. ಜೀವನದಲ್ಲಿ ಸ್ಪಷ್ಟವಾದ ಗುರಿ ಹೊಂದಿದ್ದರೆ ಯಾವುದೇ ಸಾಧನೆ ಮಾಡುವುದು ಸಾಧ್ಯ ಎಂದು ಬಂಗಾರಪೇಟೆ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ಸಿ. ಚಂದ್ರಶೇಖರ್ ಹೇಳಿದರು.

ಬಂಗಾರಪೇಟೆ ತಾಲೂಕಿನ ಶ್ರೀ ಶನೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಅನುದಾನಿತ ಶಾಲೆಯಲ್ಲಿ ದಿವಂಗತ ಆರ್ಕಾಟ್ ಚಂದ್ರಣ್ಣ ಅವರ ಸ್ಮರಣಾರ್ಥ ಸಂಸ್ಥೆಯ ಸಹ ಕಾರ್ಯದರ್ಶಿ ಎ.ಸಿ. ಸತ್ಯಭಾಮ ಅವರ ಕುಟುಂಬದ ವತಿಯಿಂದ 1ರಿಂದ 7ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಾವು ಓದಿದ ಪ್ರಾಥಮಿಕ ಶಾಲೆಯನ್ನು ಎಂದಿಗೂ ಮರೆಯಬಾರದು. ಗ್ರಾಮೀಣ ಭಾಗದ ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು ಜೀವನದಲ್ಲಿ ಉನ್ನತ ಸ್ಥಾನಕ್ಕೇರಬೇಕು. ವಿದ್ಯಾರ್ಥಿಗಳು ದಾರಿ ತಪ್ಪದೆ ದೇಶದ ಆದರ್ಶ ಪ್ರಜೆಗಳಾಗಿ ಬೆಳೆಯಬೇಕು. ದಾನಿಗಳು ನೀಡುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು, ಮುಂದೆ ನೀವೂ ಸಮಾಜಕ್ಕೆ ಕೊಡುಗೆ ನೀಡುವ ದಾನಿಗಳಾಗಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ದೇಶಕ್ಕಾಗಿ ದುಡಿಯಬೇಕು ಹಾಗೂ ಸಮಾಜದ ಒಳಿತಿಗಾಗಿ ಸೇವೆ ಸಲ್ಲಿಸಬೇಕು. ಆಗ ಸಮಾಜದಲ್ಲಿ ಗೌರವ ದೊರೆಯುತ್ತದೆ. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜೀವನ ಮೌಲ್ಯಗಳು ಮತ್ತು ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಮವಸ್ತ್ರವು ಕೇವಲ ಉಡುಪು ಮಾತ್ರವಲ್ಲ; ಅದು ಶಾಲಾ ಮಕ್ಕಳಲ್ಲಿ ಸಮಾನತೆ, ಶಿಸ್ತು ಹಾಗೂ ಒಗ್ಗಟ್ಟಿನ ಭಾವನೆಯನ್ನು ಬೆಳೆಸುವ ಪ್ರಮುಖ ಸಾಧನವಾಗಿದೆ. ಬಡತನ ಅಥವಾ ಸಾಮಾಜಿಕ ತಾರತಮ್ಯವಿಲ್ಲದೆ ಎಲ್ಲ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬುದು ಸರ್ಕಾರದ ಆಶಯವಾಗಿದೆ ಎಂದು ತಿಳಿಸಿದರು.

ದಾನಿಗಳ ಸಹಕಾರದಿಂದ ಅನುದಾನಿತ ಶಾಲೆಯನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯ. ದಾನಿಗಳಾದ ಎ.ಸಿ. ಸತ್ಯಭಾಮ ಅವರು ಕಳೆದ 20 ವರ್ಷಗಳಿಂದ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಿಸುತ್ತಿರುವುದು ಅಭಿನಂದನೀಯ ಎಂದು ಇಲಾಖೆಯ ಪರವಾಗಿ ಮೆಚ್ಚುಗೆ ವ್ಯಕ್ತಪಡಿಸಿದರು.

ಶ್ರೀ ಶನೇಶ್ವರ ವಿದ್ಯಾಸಂಸ್ಥೆಯ ಜಂಟಿ ಕಾರ್ಯದರ್ಶಿ ಎ.ಸಿ. ಸತ್ಯಭಾಮ ಮಾತನಾಡಿ, ಉಚಿತ ಶಿಕ್ಷಣ ನೀಡುವುದು ನಮ್ಮ ಸಂಸ್ಥೆಯ ಧ್ಯೇಯವಾಗಿದೆ. ದಾನಿಗಳ ಸಹಕಾರದಿಂದ ಶಾಲೆಯನ್ನು ಉತ್ತಮವಾಗಿ ನಡೆಸಿಕೊಂಡು ಬರುತ್ತಿದ್ದೇವೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ದೇಶದ ಮಹಾನ್ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಹೇಳಿದರು.

ಮುಖ್ಯಶಿಕ್ಷಕ ಎಚ್.ಎಲ್. ಆನಂದ ಮಾತನಾಡಿ, ದಾನಿಗಳಾದ ಆರ್ಕಾಟ್ ಚಂದ್ರಣ್ಣ ಹಾಗೂ ಎ.ಸಿ. ಸತ್ಯಭಾಮ ಅವರು ಶಾಲೆಗೆ ಉಚಿತವಾಗಿ ಕೊಠಡಿ ನಿರ್ಮಿಸಿಕೊಟ್ಟಿರುವುದಲ್ಲದೆ, 2006ರಿಂದ ಪ್ರತಿವರ್ಷ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತ ಸಮವಸ್ತ್ರ ವಿತರಿಸುತ್ತಿರುವುದು ಶ್ಲಾಘನೀಯ ಹಾಗೂ ಇತರರಿಗೆ ಮಾದರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪಾಧ್ಯಕ್ಷ ನಾರಾಯಣಪ್ಪ, ಇಸಿಒಗಳಾದ ಸೋಮಶೇಖರ್ ಮತ್ತು ರಘುಕುಮಾರ್, ರಾಜ್ಯ ಅನುದಾನಿತ ಶಾಲಾ ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಆರ್. ಅಶ್ವಥ್, ಬಿಆರ್‌ಪಿ ಮುನಿರಾಜು, ಸಿಆರ್‌ಪಿಗಳಾದ ವೆಂಕಟಸ್ವಾಮಿ, ಗೋಪಿನಾಥ್, ಆರ್. ಸತೀಶ್ ಹಾಗೂ ಶಿಕ್ಷಕರಾದ ಎಸ್. ಗಿರಿಜಮ್ಮ, ಉಷಾರಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಭಾರೀ ಮಳೆ ಮುನ್ಸೂಚನೆ

ಬೂದಿಕೋಟೆಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಹಾಗೂ ಯಾದಗಿರಿ ಜಿಲ್ಲೆಗಳ ಕೆಲವು ಭಾಗಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಈ ವೇಳೆ ಗಂಟೆಗೆ 40ರಿಂದ 50 ಕಿ.ಮೀ ವೇಗದಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆ ಇರುವುದರಿಂದ ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಮಲೆನಾಡಿನ ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಕೆಲವೆಡೆ ಭಾರಿ ಮಳೆಯಾಗಲಿದ್ದು, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬಳ್ಳಾರಿ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

ಹವಾಮಾನ ಇಲಾಖೆ ಸಾರ್ವಜನಿಕರು ಅಧಿಕೃತ ಮುನ್ಸೂಚನೆಗಳನ್ನು ಗಮನಿಸಿ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಮನವಿ ಮಾಡಿದೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy